Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣಕು

## 29-12-2020



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ವಿಶ್ವ ವಾಣಿ
6. ಉದಯ ವಾಣಿ
7. ಸಂಯುಕ್ರ ಕರ್ನಾಟಕ
8. ಹೊಸ ದಿಗಂತ
9. ವಾರ್ತಾ ಭಾರತಿ
10. ಸಂಜೆ ವಾಣಿ
11. ಈ ಸಂಜೆ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

# ರಸ್ತೆ ಗುಂಡಿ ಮುಚ್ಚಲು ಸೂಚನೆ

## 10 ದಿನಗಳಲ್ಲಿ ಪೂರ್ಣಗೊಳಿಸಲು ಕ್ರಮವಹಿಸಿ: ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ

ಪ್ರಜಾವಾಣಿ ವಾರ್ತೆ



ಬಿಬಿಎಂಪಿ ಕಚೇರಿಯಲ್ಲಿ ಸಭೆ ನಡೆಸಿದ ಆಡಳಿತಾಧಿಕಾರಿ ಗೌರವ್ ಗುಪ್ತ

**ಬೆಂಗಳೂರು:** ಪಾಲಿಕೆಯ ವ್ಯಾಪ್ತಿಯಲ್ಲಿ ಬಾಕಿ ಇರುವ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯನ್ನು 10 ದಿನಗಳಲ್ಲಿ ಪೂರ್ಣಗೊಳಿಸಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಸ್ತೆ ಗುಂಡಿ, ಬೀದಿ ದೀಪ ಅಳವಡಿಕೆ, ಯಾಂತ್ರಿಕ ಕಸ ಗುಡಿಸುವ ಯಂತ್ರ ಹಾಗೂ ವಾರ್ಷಿಕ ರಸ್ತೆ ನಿರ್ವಹಣೆ ಕುರಿತು ಅಧಿಕಾರಿಗಳ ಜತೆ ಅವರು ಸೋಮವಾರ ಸಭೆ ನಡೆಸಿದರು.

‘ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಪ್ರಗತಿಯಲ್ಲಿದ್ದು, ಈಗಾಗಲೇ ಬಹುತೇಕ ಕಡೆ ಗುಂಡಿಗಳನ್ನು ಮುಚ್ಚಲಾಗಿದೆ. ಆ ಕಾಮಗಾರಿಗೆ ಇನ್ನಷ್ಟು ವೇಗ ನೀಡಿ ಗುಣಮಟ್ಟ ಮತ್ತು ಪ್ರಮಾಣ ಸರಿಯಾಗಿರುವಂತೆ ನೋಡಿಕೊಳ್ಳಬೇಕು. ನಿಗದಿತ ಸಮಯದಲ್ಲಿ ಗುಂಡಿಗಳನ್ನು ಮುಚ್ಚಲು ಕ್ರಮವಹಿಸಬೇಕು’ ಎಂದು ತಿಳಿಸಿದರು.

‘ಡಾಂಬರು ಮಿಶ್ರಣ ಘಟಕದಿಂದ ಎಲ್ಲ 8 ವಲಯಗಳಿಗೂ ಪ್ರತಿದಿನ ಎರಡು ಲೋಡ್ ಡಾಂಬರು ಕಳುಹಿಸಿ 10 ದಿನಗಳಲ್ಲಿ ಉಳಿದೆಲ್ಲಾ ಗುಂಡಿಗಳನ್ನು ಮುಚ್ಚಬೇಕು’ ಎಂದು ಹೇಳಿದರು.

‘ಬೀದಿದೀಪಗಳ ನಿರ್ವಹಣೆ ಕಾರ್ಯವು ನಿರೀಕ್ಷಿತ ಮಟ್ಟದಲ್ಲಿ ನಡೆಯುತ್ತಿಲ್ಲ. ಟೆಂಡರ್ ಪ್ರಕ್ರಿಯೆಗಳನ್ನು ವೇಗವಾಗಿ ನಡೆಸಿ ಬೀದಿ ದೀಪಗಳ ನಿರ್ವಹಣೆಗೆ ತ್ವರಿತ ಕಾರ್ಯಾದೇಶ ನೀಡಬೇಕು. ಬೀದಿ ದೀಪ ಅಳವಡಿಸುವ ಸಂಬಂಧ ಆಯಾ ವಲಯ ಮುಖ್ಯ ಎಂಜಿನಿಯರ್‌ಗಳು ಹೆಚ್ಚು ಗಮನ ಹರಿಸಬೇಕು’ ಎಂದು ಆಡಳಿತಾಧಿಕಾರಿ ಸೂಚನೆ ನೀಡಿದರು.

‘ಕಸ ಗುಡಿಸುವ ಯಂತ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ಇಲ್ಲವೇ ಎಂಬುದರ ಬಗ್ಗೆ ಕಾರ್ಯಪಾಲಕ ಎಂಜಿನಿಯರ್ (ರಸ್ತೆ ಮೂಲಸೌಕರ್ಯ) ನಿಗಾ ವಹಿಸಬೇಕು. ಪ್ರತಿನಿತ್ಯ ಎಷ್ಟು ಕಿ.ಮೀ. ರಸ್ತೆ ಗುಡಿಸುತ್ತಿವೆ ಎಂಬುದರ ಕುರಿತು ವರದಿ ಸಿದ್ಧಪಡಿಸಬೇಕು’ ಎಂದರು.

‘ಪಾಲಿಕೆ ವ್ಯಾಪ್ತಿಯ ಆರ್ಟೀರಿಯಲ್ ಹಾಗೂ ಸಬ್ ಆರ್ಟೀರಿಯಲ್ ರಸ್ತೆಗಳ ಸಮರ್ಪಕ ನಿರ್ವಹಣೆಗಾಗಿ ಈಗಾಗಲೇ ಟೆಂಡರ್ ಆಹ್ವಾನಿಸಲಾಗಿದೆ. ಈ ಪ್ರಕ್ರಿಯೆ ತ್ವರಿತಗೊಳಿಸಿ ನಿರ್ವಹಣೆ ಕಾರ್ಯ ಆರಂಭಿಸಬೇಕು. ಇದೇ ರೀತಿ ಪ್ರಮುಖ ಆರ್ಟೀರಿಯಲ್ ರಸ್ತೆಗಳಲ್ಲಿ ವಿಭಜಕಗಳಿಗೆ ಬಣ್ಣ ಬಳಿಯುವ ಹಾಗೂ ರಸ್ತೆಗಳಿಗೆ ಲೈನ್ ಗುರುತು ಮಾಡುವ ಸಂಬಂಧ ಯೋಜನೆ ರೂಪಿಸಿ ಸಮರೋಪಾದಿಯಲ್ಲಿ ಕೆಲಸ ಮಾಡಬೇಕು’ ಎಂದು ಹೇಳಿದರು.

ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಎಂ.ಆರ್.ವೆಂಕಟೇಶ್, ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಮುಖ್ಯ ಎಂಜಿನಿಯರ್ ಬಿ.ಎಸ್. ಪ್ರಹ್ಲಾದ್, ಯೋಜನಾ ವಿಭಾಗದ ಮುಖ್ಯ ಎಂಜಿನಿಯರ್ ರಮೇಶ್ ಇದ್ದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

# ಬ್ರಿಟನ್‌ನಿಂದ ಬಂದವರ ಸಂಪರ್ಕಿತರಿಗೆ ಕೋವಿಡ್

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಬ್ರಿಟನ್‌ನಿಂದ ರಾಜ್ಯಕ್ಕೆ ಬಂದವರ ಪ್ರಾಥಮಿಕ ಸಂಪರ್ಕಕ್ಕೆ ಒಳಗಾದವರ ಪೈಕಿ ಇಬ್ಬರಿಗೆ ಕೊರೊನಾ ಸೋಂಕು ತಗುಲಿರುವುದು ಸೋಮವಾರ ದೃಢಪಟ್ಟಿದೆ.

ಬ್ರಿಟನ್‌ನಿಂದ ಬಂದು, ಕೋವಿಡ್‌ಗೆ ತುತ್ತಾದವರಲ್ಲಿ 15 ಮಂದಿ ಬಿಬಿಎಂಪಿ ವ್ಯಾಪ್ತಿಯಲ್ಲಿಯೇ ಇದ್ದಾರೆ. ಇವರಿಗೆ ಪ್ರಾಥಮಿಕ ಮತ್ತು ದ್ವಿತೀಯ ಹಂತದಲ್ಲಿ ಸಂಪರ್ಕಕ್ಕೆ ಬಂದಿದ್ದ 36 ಜನರನ್ನು ಬಿಬಿಎಂಪಿ ಗುರುತಿಸಿತ್ತು. ಈ ಪೈಕಿ, ಪಶ್ಚಿಮ ವಲಯದ ಒಬ್ಬರಿಗೆ ಮತ್ತು ದಾಸರಹಳ್ಳಿ ನಿವಾಸಿಯೊಬ್ಬರಿಗೆ ಸೋಂಕು ತಗುಲಿರುವುದು ದೃಢಪಟ್ಟಿದೆ ಎಂದು ಬಿಬಿಎಂಪಿ ಹೇಳಿದೆ.

**27ಕ್ಕೆ ಏರಿಕೆ:** ಬ್ರಿಟನ್‌ನಿಂದ ಬಂದವರ ಪೈಕಿ ಸೋಂಕಿಗೆ ಒಳಗಾದವರ ಸಂಖ್ಯೆ ಸೋಮವಾರ 27ಕ್ಕೆ ಏರಿದೆ.

ಹೊಸದಾಗಿ ಒಬ್ಬರಿಗೆ ಸೋಂಕು ತಗುಲಿರುವುದು ದೃಢಪಟ್ಟಿದೆ ಎಂದು ಆರೋಗ್ಯ ಇಲಾಖೆ ಹೇಳಿದೆ.

179 ಜನ ಸೋಮವಾರ ಆರ್‌ಟಿ-ಪಿಸಿಆರ್ ಪರೀಕ್ಷೆಗೆ ಒಳಪಟ್ಟಿದ್ದರು. ಒಬ್ಬರಲ್ಲಿ ಪಾಸಿಟಿವ್ ಬಂದಿದ್ದು, 120 ಮಂದಿಯ ವರದಿ ನೆಗೆಟಿವ್ ಆಗಿದೆ. 58 ವ್ಯಕ್ತಿಗಳ ಫಲಿತಾಂಶ ಬರಬೇಕಾಗಿದೆ. ಈವರೆಗೆ, ಒಟ್ಟು 1,766 ಮಂದಿ ಪರೀಕ್ಷೆಗೆ ಒಳಪಡಿಸಲಾಗಿದೆ.

27 ಪ್ರಕರಣಗಳು ಪಾಸಿಟಿವ್ ಆಗಿದ್ದು, 1,384 ನೆಗೆಟಿವ್ ವರದಿ ಬಂದಿದೆ. ಒಟ್ಟು 355 ವ್ಯಕ್ತಿಗಳ ಕೋವಿಡ್ ಪರೀಕ್ಷೆ ಫಲಿತಾಂಶ ಬರಬೇಕಿದೆ.

ಈ ಎಲ್ಲರ ಮಾದರಿಯನ್ನು ನಿಮ್ಹಾನ್ಸ್‌ಗೆ ಕಳುಹಿಸಲಾಗಿದ್ದು, ಇವರಿಗೆ ತಗುಲಿರುವುದು ಬ್ರಿಟನ್‌ನ ರೂಪಾಂತರ ಸೋಂಕು ಹೌದೋ, ಎಲ್ಲವೋ ಎಂದು ಪರೀಕ್ಷಿಸಲಾಗುತ್ತಿದ್ದು, ಅದರ ಫಲಿತಾಂಶವೂ ಇನ್ನಷ್ಟೇ ಬರಬೇಕಿದೆ.

**ಎಂಟು ಸಾವು:** ರಾಜ್ಯದಲ್ಲಿ ಹೊಸದಾಗಿ 635 ಜನರಲ್ಲಿ ಸೋಂಕು ದೃಢಪಟ್ಟಿತ್ತು, ಎಂಟು ಜನ ಸಾವಿಗೀಡಾಗಿದ್ದಾರೆ. ಆ ಮೂಲಕ ಸೋಂಕಿತರ ಸಂಖ್ಯೆ 9.16 ಲಕ್ಷಕ್ಕೆ ಏರಿದ್ದರೆ, 12,070 ಮಂದಿ ಕೋವಿಡ್‌ನಿಂದ ಮೃತಪಟ್ಟಿದ್ದಾರೆ.

ಸಕ್ರಿಯ ಪ್ರಕರಣಗಳ ಪೈಕಿ 12,547 ಮಂದಿ ಆಸ್ಪತ್ರೆ ಮತ್ತು ಮನೆಗಳಲ್ಲಿ ಚಿಕಿತ್ಸೆ ಹಾಗೂ ಆರೈಕೆಯಲ್ಲಿದ್ದಾರೆ. 205 ಮಂದಿಗೆ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

1,178 ಮಂದಿ ಗುಣಮುಖರಾಗಿದ್ದು, ಒಟ್ಟಾರೆ 8.92 ಲಕ್ಷ ಮಂದಿ ಕೋವಿಡ್‌ನಿಂದ ಮುಕ್ತರಾಗಿದ್ದಾರೆ. ಬಾಗಲಕೋಟೆ, ರಾಮನಗರದಲ್ಲಿ ಯಾವುದೇ ಹೊಸ ಪ್ರಕರಣ ವರದಿಯಾಗಿಲ್ಲ.

## ಹೊಸ ಸ್ವರೂಪದ ವೈರಾಣು: ಎಚ್ಚರಿಕೆ ಅಗತ್ಯ



**ನವದೆಹಲಿ (ಪಿಟಿಐ):** ಕೋವಿಡ್-19 ಹಿನ್ನೆಲೆಯಲ್ಲಿ ಹಲವು ಚಟುವಟಿಕೆಗಳ ಮೇಲಿನ ನಿರ್ಬಂಧವನ್ನು ಮುಂದುವರಿಸಿರುವ ಕೇಂದ್ರ ಸರ್ಕಾರವು, ಭಾರತದಲ್ಲಿ ಕೋವಿಡ್-19 ಸಕ್ರಿಯ ಪ್ರಕರಣಗಳು ಇಳಿಕೆಯಾಗುತ್ತಿದ್ದರೂ ಬ್ರಿಟನ್‌ನಲ್ಲಿ ಹೊಸ ಸ್ವರೂಪದ ಕೊರೊನಾ ವೈರಾಣು ಕಾಣಿಸಿಕೊಂಡಿರುವ ಕಾರಣ ಎಚ್ಚರಿಕೆಯಿಂದ ಇರಬೇಕು ಎಂದು ಸೂಚಿಸಿದೆ.

ಈಗಾಗಲೇ ಹೊರಡಿಸಲಾಗಿರುವ ಮಾರ್ಗಸೂಚಿಗಳು ಜ.31ರವರೆಗೆ ಜಾರಿಯಲ್ಲಿ ಇರಲಿದೆ. ಹೊಸ ವರ್ಷದ ಆಚರಣೆ ಹಾಗೂ ಚಳಿಗಾಲದ ಸಂದರ್ಭದಲ್ಲಿ ಪ್ರಕರಣಗಳ ಸಂಖ್ಯೆ ಏರಿಕೆಯಾಗದಂತೆ ರಾಜ್ಯ ಸರ್ಕಾರಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳು ಕಟ್ಟುನಿಟ್ಟಿನ ಎಚ್ಚರಿಕೆವಹಿಸಬೇಕು. ಲಸಿಕೆ ಅಭಿಯಾನಕ್ಕೆ ಕೇಂದ್ರದ ಅಧಿಕಾರಿಗಳು ಪ್ರಕ್ರಿಯೆ ಆರಂಭಿಸಿದ್ದು, ಸರ್ಕಾರಗಳು ಇವರಿಗೆ ಸೂಕ್ತ ಬೆಂಬಲ ನೀಡಬೇಕು ಎಂದು ಸೂಚಿಸಿದೆ.

'ಕಂಟೈನ್‌ಮೆಂಟ್ ವಲಯಗಳಲ್ಲಿ ಕಟ್ಟುನಿಟ್ಟಿನ ಮುನ್ನೆಚ್ಚರಿಕೆ, ನಿರ್ಬಂಧ ಸಡಿಲಿಸಲಾಗಿರುವ ಚಟುವಟಿಕೆಗಳಿಗೆ ಸೂಚಿಸಲಾಗಿರುವ ಮಾರ್ಗಸೂಚಿಗಳನ್ನು ಸೂಕ್ತವಾಗಿ ಅನುಷ್ಠಾನಗೊಳಿಸಬೇಕು' ಎಂದು ಕೇಂದ್ರ ಗೃಹ ಸಚಿವಾಲಯವು ಹೇಳಿದೆ.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

ಕೊರೊನಾ ಸೋಂಕು ಹರಡದಂತೆ ತಡೆಯಲು ಕಠಿಣ ಕ್ರಮ

# ಹೊಸ ವರ್ಷಾಚರಣೆ: 31ರ ರಾತ್ರಿ ನಿಷೇಧಾಜ್ಞೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** 'ಕೊರೊನಾ ಸೋಂಕು ಹರಡುವಿಕೆ ತಡೆಗಾಗಿ ಸರ್ಕಾರ ರೂಪಿಸಿರುವ ಹೊಸ ನಿಯಮಗಳ ಅನ್ವಯ ಡಿ. 31ರ ಸಂಜೆ 6 ಗಂಟೆಯಿಂದ ಜ. 1ರ ಬೆಳಿಗ್ಗೆ 6 ಗಂಟೆಯವರೆಗೆ ನಗರದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ' ಎಂದು ನಗರ ಪೊಲೀಸ್ ಕಮಿಷನರ್ ಕಮಲ್ ಪಂತ್ ತಿಳಿಸಿದರು.

ನಗರದಲ್ಲಿ ಸೋಮವಾರ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಕಮಲ್ ಪಂತ್, 'ಅಂದು ರಾತ್ರಿ ಐದು ಹಾಗೂ ಅದಕ್ಕಿಂತ ಹೆಚ್ಚು ಜನರು ಗುಂಪು ಸೇರುವಂತಿಲ್ಲ. ರಸ್ತೆ, ಉದ್ಯಾನ ಹಾಗೂ ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಹೊಸ ವರ್ಷಾಚರಣೆ ಮಾಡಲು ಅವಕಾಶವಿಲ್ಲ. ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು' ಎಂದು ಅವರು ಹೇಳಿದರು.

'ಅಪಾರ್ಟ್‌ಮೆಂಟ್ ಸಮುಚ್ಚಯದ ನಿವಾಸಿಗಳು, ಕ್ಲಬ್‌ನವರು ಹಾಗೂ ಇತರರು, ತಮ್ಮ ನಿಗದಿತ ಜಾಗದಲ್ಲಿ ತಮ್ಮದೇ ಸದಸ್ಯರ ಜೊತೆ ಮಾತ್ರ ಹೊಸ ವರ್ಷಾಚರಣೆ ಮಾಡಬಹುದು. ಇಂಥ ಕಾರ್ಯಕ್ರಮಗಳಲ್ಲಿ ಹೊರಗಿನವರಿಗೆ ಅವಕಾಶ ನೀಡಬಾರದು. ಈ ಬಗ್ಗೆ ಆಡಳಿತ ಮಂಡಳಿ ಗಮನ ಹರಿಸಬೇಕು' ಎಂದೂ ಅವರು ಸೂಚಿಸಿದರು.

**ಕೂಪನ್ ಕಾರ್ಯಕ್ರಮಕ್ಕೆ ಅವಕಾಶ ವಿಲ್ಲ:** 'ಹೊಸ ವರ್ಷಾಚರಣೆಗೆ ವಿಶೇಷ ಕಾರ್ಯಕ್ರಮ ಸಂಘಟಿಸುವುದು ಹಾಗೂ ಅದರ ಕೂಪನ್- ಚೀಟಿಯನ್ನು ಹಂಚಿಕೆ ಮಾಡುವುದಕ್ಕೆ ಅವಕಾಶವಿಲ್ಲ. ಹೋಟೆಲ್, ರೆಸ್ಟೋರೆಂಟ್‌ಗಳು ಎಂದಿನಂತೆ ಕಾರ್ಯ ನಿರ್ವಹಿಸಬಹುದು. ನೃತ್ಯ ಹಾಗೂ ಇತರೆ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಬಾರದು' ಎಂದೂ ಅವರು ಎಚ್ಚರಿಸಿದರು.

**ಅನಗತ್ಯವಾಗಿ ಓಡಾಡಿದರೆ ಪ್ರಕರಣ:** 'ವ್ಹೀಲಿಂಗ್, ಜಾಲಿ ರೈಡ್, ರಸ್ತೆ ಮೇಲೆ ನಿಂತು ಹರಟೆ ಹೊಡೆಯಲು ಅವಕಾಶವಿಲ್ಲ. ಅನಗತ್ಯವಾಗಿ ಓಡಾಡುವವರಿಗೆ ನೇರವಾಗಿ ಎಚ್ಚರಿಕೆ ನೀಡುತ್ತಿದ್ದೇನೆ. ಸಿಕ್ಕಿಬಿದ್ದರೆ, ಗಂಭೀರ ಪ್ರಕರಣ ದಾಖಲಿಸಲಾಗುವುದು. ವಾಹನವನ್ನೂ ಜಪ್ತಿ ಮಾಡಲಾಗುವುದು' ಎಂದರು.

'ಮೇಲ್ಸೇತುವೆಗಳಲ್ಲಿ ವಾಹನಗಳ ಸಂಚಾರವನ್ನು ಬಂದ್ ಮಾಡಲಾಗುವುದು. ನಗರದೆಲ್ಲೆಡೆ ನಾಕಾಬಂದಿ ನಿರ್ಮಿಸಿ, ಬಿಗಿ ಭದ್ರತೆ ಕೈಗೊಳ್ಳಲಾಗುವುದು' ಎಂದೂ ನಗರ ಪೊಲೀಸ್ ಕಮಿಷನರ್ ತಿಳಿಸಿದರು.

## 'ಮುಂಗಡ ಕಾಯ್ದಿರಿಸಿದವರಿಗಷ್ಟೇ ಅವಕಾಶ'

'ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ಇಂದಿರಾನಗರ ಹಾಗೂ ಕೋರಮಂಗಲ ಸೇರಿದಂತೆ ನಗರದ ಹೋಟೆಲ್, ಪಬ್, ರೆಸ್ಟೋರೆಂಟ್ ಗಳು ಮುಂಗಡವಾಗಿ ಬುಕ್ಕಿಂಗ್ ವ್ಯವಸ್ಥೆ ಕಲ್ಪಿಸಬೇಕು. ಡಿ. 31ರಂದು ರಾತ್ರಿ ಇವುಗಳಿಗೆ ಮೊದಲೇ ಬುಕಿಂಗ್ ಮಾಡಿದ ಗ್ರಾಹಕರನ್ನು ಹೊರತಾಗಿ ಇತರರಿಗೆ ಪ್ರವೇಶ ನಿರ್ಬಂಧಿಸಲಾಗುತ್ತದೆ. ಇಂತಹ ಗ್ರಾಹಕರನ್ನು ಗುರುತಿಸಲು ಟಿಕೆಟ್ ವ್ಯವಸ್ಥೆ ಮಾಡಲಾಗುತ್ತದೆ. ಟಿಕೆಟ್ ತೋರಿಸಿದರಷ್ಟೇ ಈ ಪ್ರದೇಶಗಳಲ್ಲಿ ಪ್ರವೇಶಕ್ಕೆ ಅವಕಾಶ ನೀಡಲಾಗುವುದು. ಈ ಬಗ್ಗೆ ಠಾಣೆ ಸಿಬ್ಬಂದಿಯೇ ಪರಿಶೀಲನೆ ನಡೆಸಲಿದ್ದಾರೆ' ಎಂದು ಕಮಲ್ ಪಂತ್ ಹೇಳಿದರು.


ಕಮಲ್ ಪಂತ್

'ಹೋಟೆಲ್, ಪಬ್‌ಗಳ ಗ್ರಾಹಕರು ರಸ್ತೆಯಲ್ಲಿ ಮೋಜು ಮಸ್ತಿ ಸೇರುವಂತಿಲ್ಲ. ನಿಯಮ ಉಲ್ಲಂಘಿಸಿದರೆ ಪ್ರಕರಣ ದಾಖಲಿಸಿಕೊಳ್ಳಲಾಗುವುದು. ನಿಯಮ ಪಾಲನೆ ಬಗ್ಗೆ ಹೋಟೆಲ್ ಆಡಳಿತ ಮಂಡಳಿ ಗಮನ ಹರಿಸಬೇಕು' ಎಂದರು.

ಕನ್ನಡಪ್ರಭ

ಗೈಡ್‌ಲೈನ್ಸ್ | ಹೋಟೆಲ್‌ಗಳಲ್ಲಿ ಕಾಯ್ದಿರಿಸಿದವರಿಗೆ ಮಾತ್ರ ಅವಕಾಶ | ಉಲ್ಲಂಘಿಸಿದರೆ ಕಠಿಣ ಕ್ರಮ: ಪಂತ್

# ಹೊಸ ವರ್ಷದ ಸಂಭ್ರಮಕ್ಕೆ ಬ್ರೇಕ್

## ನಗರದಲ್ಲಿ ಡಿ.31ರ ಸಂಜೆ 6ರಿಂದ ನಿಷೇಧಾಜ್ಞೆ | ರಸ್ತೆಗಳಲ್ಲಿ ಕುಣಿಯುವಂತಿಲ್ಲ
## ಹೋಟೆಲ್, ಕ್ಲಬ್ ಪಬ್‌ಗಳಲ್ಲಿ ಸಂಗೀತ ಅಬ್ಬರ ಬ್ಯಾನ್ | ಮಾರ್ಗಸೂಚಿ ಪ್ರಕಟ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಹೊಸ ವರ್ಷದ ಆರಂಭದ ಮಧ್ಯರಾತ್ರಿ, ಎಂಜಿ ರಸ್ತೆ, ಬ್ರಿಗೇಡ್ ರಸ್ತೆ ಸೇರಿದಂತೆ ರಾಜಧಾನಿಯ ಬೀದಿ ಬೀದಿಗಳಲ್ಲಿ ನಡೆಯುವ ಸಂಭ್ರಮಕ್ಕೆ ಸರ್ಕಾರ ಬ್ರೇಕ್ ಹಾಕಿದೆ. ಕೊರೋನಾ ಸೋಂಕು ಹರಡುವಿಕೆ ತಡೆಯುವ ನಿಟ್ಟಿನಲ್ಲಿ ರಾಜಧಾನಿಗೆ ಸೀಮಿತವಾಗಿ ಡಿ. 31ರ ಸಂಜೆ 6ರಿಂದ 12 ಗಂಟೆಗಳ ಕಾಲ ನಿಷೇಧಾಜ್ಞೆ ಜಾರಿಗೊಳಿಸಲು ನಿರ್ಧರಿಸಲಾಗಿದೆ.

ಅಂತೆಯೇ ಪಬ್, ಹೋಟೆಲ್, ರೆಸಾರ್ಟ್‌ಗಳಲ್ಲಿ ಮುಂಗಡವಾಗಿ ಕಾಯ್ದಿರಿಸಿದ ಅತಿಥಿಗಳಿಗೆ, ಖಾಸಗಿ ಕ್ಲಬ್‌ಗಳಲ್ಲಿ ಸದಸ್ಯರಿಗೆ ಹಾಗೂ ಅಪಾರ್ಟ್‌ಮೆಂಟ್‌ಗಳ ನಿವಾಸಿಗಳಿಗೆ ಮಾತ್ರ, ಆಯಾ ಪ್ರದೇಶದಲ್ಲಿ ಹೊಸ ವರ್ಷಾಚರಣೆ ಮಾಡಲು ಅವಕಾಶ ನೀಡುವ ಹಲವು ನಿರ್ಬಂಧಗಳನ್ನು ಪೊಲೀಸ್ ಇಲಾಖೆ ವಿಧಿಸಿದೆ.

↘ 2



### ಮಾರ್ಗಸೂಚಿಯ ಪ್ರಮುಖಾಂಶಗಳು

1. ಗುರುವಾರ ಸಂಜೆ 6 ರಿಂದ ಶುಕ್ರವಾರ ಬೆಳಗ್ಗೆ 6 ಗಂಟೆವರೆಗೆ ನಿಷೇಧಾಜ್ಞೆ
2. ಸಾರ್ವಜನಿಕ ರಸ್ತೆಗಳಲ್ಲಿ ಐದಕ್ಕಿಂತ ಹೆಚ್ಚಿನ ಜನರ ಸೇರುವಿಕೆಗೆ ನಿರ್ಬಂಧ
3. ಸಾರ್ವಜನಿಕ ಸ್ಥಳಗಳು, ಪ್ರಮುಖ ರಸ್ತೆಗಳು, ಹೊರಾಂಗಣದಲ್ಲಿ ಹೊಸ ವರ್ಷಾಚರಣೆ ನಿಷೇಧ
4. ವಸತಿ ಸಂಕೀರ್ಣ, ಖಾಸಗಿ ಕ್ಲಬ್‌ಗಳಲ್ಲಿ ಆಯಾ ನಿವಾಸಿಗಳು, ಕ್ಲಬ್ ಸದಸ್ಯರಿಗೆ ಮಾತ್ರ ಅವಕಾಶ. ವಿಶೇಷ ಕಾರ್ಯಕ್ರಮ ಆಯೋಜನೆ ನಿಷೇಧ
5. ಹೋಟೆಲ್, ಮಾಲ್, ಕ್ಲಬ್, ಪಬ್‌ಗಳಲ್ಲಿ ವಿಶೇಷ ಸಂಗೀತ ಕಾರ್ಯಕ್ರಮಕ್ಕೆ ಅವಕಾಶವಿಲ್ಲ.

ಕನ್ನಡಪ್ರಭ

ಕಠಿಣ ಕ್ರಮ | ನಿಷೇಧಾಜ್ಞೆ ಹಿನ್ನೆಲೆ ಐದಕ್ಕಿಂತ ಹೆಚ್ಚಿನ ಜನ ಗುಂಪುಗೂಡಿದರೆ ಕ್ರಮ | ಜಾಲಿ ರೈಡ್, ವ್ಹೀಲಿಂಗ್, ಡ್ರ್ಯಾಗ್ ರೇಸ್ ನಡೆಸಿದರೆ ಕ್ರಮ

# ಹೊಸ ವರ್ಷದ ಸಂಭ್ರಮಾಚರಣೆಗೆ ಸರ್ಕಾರ ಬ್ರೇಕ್

ಮೊದಲ ಪುಟದಿಂದ

ಹೋಟೆಲ್, ಕ್ಲಬ್, ರೆಸಾರ್ಟ್ ಹಾಗೂ ಪಬ್ ಸೇರಿದಂತೆ ಎಲ್ಲೆಡೆ ಡಿಜೆ, ಬ್ಯಾಂಡ್ ಸೇರಿದಂತೆ ಸಂಗೀತ ಕಾರ್ಯಕ್ರಮಗಳ ಆಯೋಜನೆಗೆ ಅನುಮತಿ ಇಲ್ಲ. ಕಾರ್ಯಕ್ರಮದ ಆಯೋಜಕರು ಕಡ್ಡಾಯವಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿಗೊಳಿಸಿರುವ ಕೋವಿಡ್-19 ನಿಯಮಾವಳಿಗಳನ್ನು ಪಾಲಿಸಬೇಕಾಗುತ್ತದೆ ಎಂದು ಸೋಮವಾರ ಹೊರಡಿಸಿರುವ ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್, ನಗರದಲ್ಲಿ ಮುಂಜಾಗ್ರತಾ ಕ್ರಮವಾಗಿ ಡಿ.31ರ ಗುರುವಾರ ಸಂಜೆ 6 ಗಂಟೆಯಿಂದ ಶುಕ್ರವಾರ ಬೆಳಗ್ಗೆ 6 ಗಂಟೆವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಹೀಗಾಗಿ ಐದಕ್ಕಿಂತ ಹೆಚ್ಚಿನ ಜನ ಗುಂಪುಗೂಡುವಂತಿಲ್ಲ. ಅಂದು ರಾತ್ರಿ ನಗರದ ರಸ್ತೆಗಳಲ್ಲಿ ಜಾಲಿ ರೈಡ್, ವ್ಹೀಲಿಂಗ್ ಹಾಗೂ ಡ್ರ್ಯಾಗ್ ರೇಸ್ ನಡೆಸಿದರೆ ಮುಲಾಜಿಲ್ಲದೆ ಕಾನೂನು ಕ್ರಮ ಜರುಗಿಸಲಾಗುತ್ತದೆ. ಆದರೆ ತುರ್ತು ಸೇವೆ ಹಾಗೂ ದಿನನಿತ್ಯ ಚಟುವಟಿಕೆ ಸಂಬಂಧ ಸಾರ್ವಜನಿಕರಿಗೆ ಓಡಾಡಲು ಅನುಮತಿ ನೀಡಲಾಗಿದೆ ಎಂದರು.

## ಮಾರ್ಗಸೂಚಿಯ ಪ್ರಮುಖಾಂಶಗಳು

1. ಪಬ್, ಹೋಟೆಲ್, ರೆಸಾರ್ಟ್‌ಗಳಲ್ಲಿ ಮುಂಗಡವಾಗಿ ಕಾಯ್ದಿರಿಸಿದ ಅತಿಥಿಗಳಿಗೆ ಮಾತ್ರ ಅವಕಾಶ
2. ಹೋಟೆಲ್, ಪಬ್ ಹಾಗೂ ಕ್ಲಬ್‌ಗಳ ಬಗ್ಗೆ ಆಯಾ ಸ್ಥಳೀಯ ಡಿಸಿಪಿಗಳಿಂದ ನಿಗಾ
3. ಹೊಸ ವರ್ಷಾಚರಣೆ ಕಾರ್ಯಕ್ರಮ ನಡೆಯುವ ಕೇಂದ್ರಗಳ ಹೊರಗೆ ಜನರ ಕಾಯುವಿಕೆಗೆ ಅವಕಾಶವಿಲ್ಲ
4. ಹೋಟೆಲ್, ಮಾಲ್, ಪಬ್ ಹಾಗೂ ರೆಸ್ಟೋರೆಂಟ್‌ಗಳು ಸರ್ಕಾರ ಕೋವಿಡ್-19 ಆದೇಶ ಕಡ್ಡಾಯವಾಗಿ ಪಾಲಿಸಬೇಕು
5. ಕೋವಿಡ್ ನಿಯಂತ್ರಣಕ್ಕೆ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಬೇಕು.

## ಕೂಪನ್ ಇದ್ದರೆ ಮಾತ್ರ ಅವಕಾಶ

ಪಬ್, ಹೋಟೆಲ್, ರೆಸಾರ್ಟ್‌ಗಳಲ್ಲಿ ಮುಂಗಡವಾಗಿ ಕಾಯ್ದಿರಿಸಿದವರಿಗೆ ಮಾತ್ರ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲು ಅನುಮತಿ ಇರುತ್ತದೆ. ಗ್ರಾಹಕರಿಗೆ ಕಾರ್ಯಕ್ರಮದ ಆಯೋಜಕರು ಕೂಪನ್ ವಿತರಿಸಬೇಕು. ಇಲ್ಲಿ ಶೇ.50 ರಷ್ಟು ಮಾತ್ರ ಗ್ರಾಹಕರಿಗೆ ಅವಕಾಶವಿದೆ. ಹಾಗಾಗಿ ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ ಹಾಗೂ ಚರ್ಚ್ ಸ್ಟ್ರೀಟ್‌ಗಳಲ್ಲಿ ಕೂಪನ್ ಇದ್ದರೆ ಮಾತ್ರ ಪ್ರವೇಶವಿರುತ್ತದೆ. ಕಾರ್ಯಕ್ರಮಕ್ಕೆ ಆಗಮಿಸುವವರು ಸಂಭ್ರಮಾಚರಣೆ ನಡೆಯುವ ಸ್ಥಳದ ವ್ಯಾಪ್ತಿ ಮೀರಿ ರಸ್ತೆಗೆ ಬರುವಂತಿಲ್ಲ ಎಂದು ಆಯುಕ್ತರು ತಿಳಿಸಿದರು.

## ಮೇಲ್ಸೇತುವೆಗಳು ಬಂದ್

ನಗರದ ಎಲ್ಲ ಮೇಲ್ಸೇತುವೆಗಳಲ್ಲಿ ಗುರುವಾರ ರಾತ್ರಿ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗುತ್ತದೆ. ರಸ್ತೆಗಳಲ್ಲಿ ನಾಕಾ ಬಂದ್ ಮಾಡಿ ವಾಹನಗಳ ತಪಾಸಣೆ ನಡೆಯಲಿದ್ದು, ಗುರುವಾರ ರಾತ್ರಿ ಡ್ರಿಂಕ್-ಡ್ರೈವ್ ಸಹ ಪರಿಶೀಲನೆ ಸಹ ಇರಲಿದೆ ಎಂದು ಕಮಲ್ ಪಂತ್ ತಿಳಿಸಿದರು.



ಹೊಸ ವರ್ಷಾಚರಣೆ ವೇಳೆ ಆಯಾ ವಲಯದ ಡಿಸಿಪಿಗಳಿಗೆ ಬಂದೋಬಸ್ತ್ ಜವಾಬ್ದಾರಿ ನೀಡಲಾಗಿದೆ. ಮಾರ್ಗಸೂಚಿ ಹಾಗೂ ಕೋವಿಡ್-19ರ ನಿಯಮಾವಳಿಗಳನ್ನು ಕಾರ್ಯಕ್ರಮಗಳ ಆಯೋಜಕರು ಹಾಗೂ ಸಾರ್ವಜನಿಕರು ಉಲ್ಲಂಘಿಸಿದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುತ್ತದೆ.

• ಕಮಲ್ ಪಂತ್
ನಗರ ಪೊಲೀಸ್ ಆಯುಕ್ತ

ಕನ್ನಡಪ್ರಭ

# ಸೋಂಕಿತರ ಸಂಖ್ಯೆಯಲ್ಲಿ ಭಾರೀ ಇಳಿಮುಖ

**ಬೆಂಗಳೂರು:** ನಗರದಲ್ಲಿ ಆರು ತಿಂಗಳ ನಂತರ ಕೊರೋನಾ ಸೋಂಕಿನ ಪ್ರಕರಣಗಳು ಅತ್ಯಂತ ಕಡಿಮೆಯಲ್ಲಿ ದಾಖಲಾಗಿದೆ. ಸೋಮವಾರ 309 ಜನರಲ್ಲಿ ಸೋಂಕು ಕಾಣಿಸಿಕೊಂಡಿದ್ದು, 654 ಮಂದಿ ಗುಣಮುಖರಾಗಿದ್ದು, ಐದು ಮಂದಿ ಮೃತಪಟ್ಟಿದ್ದಾರೆ. ಜೂ.27ರಂದು 596 ಪ್ರಕರಣ ಪತ್ತೆಯಾಗಿತ್ತು. ನಂತರದ ದಿನಗಳಲ್ಲಿ ಪ್ರಕರಣಗಳ ಸಂಖ್ಯೆ ಸಾವಿರ ದಾಟಿತ್ತು. ನಂತರ ಡಿ.21 ರಂದು 363 ಜನರಲ್ಲಿ ಸೋಂಕು ಕಾಣಿಸಿಕೊಂಡಿತ್ತು. ಇದಾದ ನಂತರದ ಅತಿ ಕಡಿಮೆ ಸೋಂಕಿನ ಪ್ರಕರಣ ಸೋಮವಾರ ದಾಖಲಾಗಿದೆ. ಈ ಮೂಲಕ ಈವರೆಗಿನ ಒಟ್ಟು ಕೊರೋನಾ ಸೋಂಕಿತರ ಸಂಖ್ಯೆ 3,86,908 ಏರಿಕೆಯಾಗಿದ್ದು, ಗುಣಮುಖರ ಸಂಖ್ಯೆ 3,74,378 ತಲುಪಿದೆ. ಐದು ಮಂದಿ ಮೃತಪಟ್ಟಿದ್ದು, ಈವರೆಗೆ 4,304 ಜನರು ಸಾವಿಗೀಡಾಗಿದ್ದಾರೆ. ಸಕ್ರಿಯ ಸೋಂಕಿತರ ಸಂಖ್ಯೆ 8,225 ಇಳಿಕೆಯಾಗಿದ್ದು, ಈ ಪೈಕಿ ಗಂಭೀರ ಸ್ಥಿತಿಯಲ್ಲಿರುವ 93 ಮಂದಿಗೆ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಕನ್ನಡಪ್ರಭ

# ಬಿಬಿಎಂಪಿ ಲೆಕ್ಕಾಧೀಕ್ಷಕರಿಗೆ ಮುಂಬಡ್ತಿ: ಅರ್ಜಿ ಆಹ್ವಾನ

**ಬೆಂಗಳೂರು:** ಬಿಬಿಎಂಪಿಯಲ್ಲಿ ಖಾಲಿ ಇರುವ ಲೆಕ್ಕ ಪರಿಶೋಧನಾಧಿಕಾರಿ ಹುದ್ದೆಗಳಿಗೆ ಅರ್ಹ ಲೆಕ್ಕಾಧೀಕ್ಷಕರಿಗೆ ಮುಂಬಡ್ತಿ ನೀಡಲು ತೀರ್ಮಾನಿಸಲಾಗಿದ್ದು, ಅರ್ಜಿಗಳನ್ನು ಆಹ್ವಾನಿಸಿದೆ. ಬಟವಾಡೆ ಅಧಿಕಾರಿಗಳು ತಮ್ಮ ಕಚೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಲೆಕ್ಕ ಪರಿಶೋಧನಾಧಿಕಾರಿ ಹುದ್ದೆಗೆ ಅರ್ಹರಿದ್ದಲ್ಲಿ ಅಂತಹ ಲೆಕ್ಕಾಧೀಕ್ಷಕರ ಸೇವಾ ಪುಸ್ತಕ, ವಿದ್ಯಾರ್ಹತೆ ಪ್ರಮಾಣಪತ್ರ, ಇಲಾಖೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ಪ್ರಮಾಣ ಪತ್ರಗಳು, 2017-18 ರಿಂದ 2019-20ವರೆಗೆ ಮೂರು ವರ್ಷ ಕಾರ್ಯ ನಿರ್ವಹಣಾ ವರದಿ ಸಲ್ಲಿಸುವುದು. ಜತೆಗೆ ಮುಂಬಡ್ತಿ ಇಚ್ಛೆ ಇರುವ ಅಥವಾ ಇಲ್ಲದಿರುವ ಬಗ್ಗೆ ಪತ್ರ ಮತ್ತು ನಿಗದಿತ ನಮೂನೆ ಭರ್ತಿ ಮಾಡಿ ದೃಢೀಕರಣದೊಂದಿಗೆ ಏಳು ದಿನದಲ್ಲಿ ಸಲ್ಲಿಕೆ ಮಾಡುವಂತೆ ಸೂಚಿಸಲಾಗಿದೆ. ಅರ್ಜಿಗಳು ಸಲ್ಲಿಕೆಯಾದ ಬಳಿಕ ಎಷ್ಟು ಲೆಕ್ಕಾಧೀಕ್ಷಕರು ಮುಂಬಡ್ತಿಗೆ ಅರ್ಹರಿದ್ದಾರೆ ಎಂಬುದನ್ನು ಪಟ್ಟಿ ಮಾಡಲಾಗುವುದು. ನಂತರ ಮುಂಬಡ್ತಿ ಸಮಿತಿಯಲ್ಲಿ ಚರ್ಚೆ ನಡೆಸಿ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಬಿಬಿಎಂಪಿ ಆಡಳಿತ ವಿಭಾಗದ ಉಪ ಆಯುಕ್ತ ಲಿಂಗಮೂರ್ತಿ ಮಾಹಿತಿ ನೀಡಿದ್ದಾರೆ.

ಕನ್ನಡಪ್ರಭ

# ಶಾಲೆ ಆರಂಭಕ್ಕೆ ಪಾಲಿಕೆ ಸಿದ್ಧತೆ

**ಬೆಂಗಳೂರು:** ಜ.1ರಿಂದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ತರಗತಿ ಆರಂಭಿಸುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ದೈಹಿಕ ಉಷ್ಣಾಂಶ ತಪಾಸಣೆಗೆ 700 ಥರ್ಮಲ್ ಸ್ಕ್ಯಾನರ್‌ಗಳನ್ನು ಪಾಲಿಕೆಗೆ ಸೇರಿದ 32 ಪ್ರೌಢಶಾಲೆ ಮತ್ತು 15 ಪದವಿ ಪೂರ್ವ ಕಾಲೇಜುಗಳಿಗೆ ಬಿಬಿಎಂಪಿ ವಿತರಿಸಿದೆ.

ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ತರಗತಿ ಆರಂಭಿಸಲು ಸರ್ಕಾರ ಸೂಚಿಸಿರುವ ಹಿನ್ನೆಲೆಯಲ್ಲಿ ಸೋಮವಾರ ಬಿಬಿಎಂಪಿಯು ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಮುಖ್ಯಸ್ಥರೊಂದಿಗೆ ಬಿಬಿಎಂಪಿ ವಿಶೇಷ ಆಯುಕ್ತ ಜೆ.ಮಂಜುನಾಥ ಸಭೆ ನಡೆಸಿ, ತರಗತಿ ಆರಂಭ ಮತ್ತು ಅನುಸರಿಸಬೇಕಾ ಕ್ರಮಗಳ ಬಗ್ಗೆ ಸೂಚಿಸಿದರು.

ಈ ಕುರಿತು 'ಕನ್ನಡಪ್ರಭ'ದೊಂದಿಗೆ ಮಾತನಾಡಿದ ವಿಶೇಷ ಆಯುಕ್ತ ಜೆ. ಮಂಜುನಾಥ, ತರಗತಿಗಳು ಆರಂಭಗೊಂಡ ಬಳಿಕ ಶಾಲೆ ಮತ್ತು ಕಾಲೇಜಿಗೆ ಆಗಮಿಸುವ ವಿದ್ಯಾರ್ಥಿ ಮತ್ತು ಶಿಕ್ಷಕರ ದೈಹಿಕ ಉಷ್ಣಾಂಶ ಪರೀಕ್ಷೆಗೆ 700 ಥರ್ಮಲ್ ಸ್ಕ್ಯಾನರ್ ವಿತರಣೆಗೆ ಸೂಚಿಸಲಾಗಿದೆ. ರಾಜ್ಯ ಸರ್ಕಾರದ ಮಾರ್ಗಸೂಚಿ ಅನುಸಾರವಾಗಿ 15 ರಿಂದ 20 ವಿದ್ಯಾರ್ಥಿಗಳ ಪ್ರತ್ಯೇಕ ತಂಡ ರಚನೆ ಮಾಡಿಕೊಂಡು ತರಗತಿಗಳನ್ನು ನಡೆಸುವುದಕ್ಕೆ ಬೇಕಾದ ಕೊಠಡಿ ವ್ಯವಸ್ಥೆಗಳ ಬಗ್ಗೆ ಚರ್ಚೆ ನಡೆಸಲಾಯಿತು ಎಂದರು.

ಕನ್ನಡಪ್ರಭ

# ಬ್ರಿಟನ್‌ನಿಂದ ನಗರಕ್ಕೆ ಬಂದಿದ್ದ ಮತ್ತೊಬ್ಬರಿಗೆ ಕೊರೋನಾ ದೃಢ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರೂಪಾಂತರಿ ಕೊರೋನಾ ವೈರಸ್ ಪತ್ತೆಯಾಗಿರುವ ಬ್ರಿಟನ್‌ನಿಂದ ಬೆಂಗಳೂರು ನಗರಕ್ಕೆ ಹಿಂದಿರುಗಿರುವವರ ಪೈಕಿ ಸೋಮವಾರ ಮತ್ತೊಬ್ಬ ಒಬ್ಬ ವ್ಯಕ್ತಿಗೆ ಕೊರೋನಾ ಸೋಂಕು ದೃಢಪಟ್ಟಿದ್ದು, ಇದರೊಂದಿಗೆ ಒಟ್ಟು ಸೋಂಕಿತರ ಸಂಖ್ಯೆ 16 ಕ್ಕೆ ಏರಿಕೆಯಾಗಿದೆ. ಈ ಮಧ್ಯೆ ಬ್ರಿಟನ್ನಿಂದ ಬೆಂಗಳೂರಿಗೆ ವಾಪಸಾದ ಪ್ರಯಾಣಿಕರಲ್ಲಿ ನಾಪತ್ತೆಯಾದವರ ಸಂಖ್ಯೆ 204 ರಿಂದ 214ಕ್ಕೆ ಏರಿಕೆಯಾಗಿದ್ದು, ಹುಡುಕಾಟ ಮುಂದುವರೆದಿದೆ.

• **ಒಟ್ಟು ಸೋಂಕಿತರ ಸಂಖ್ಯೆ 16ಕ್ಕೆ ಏರಿಕೆ**

ಡಿ.1ರಿಂದ 21ವರೆಗೆ ಬ್ರಿಟನ್‌ನಿಂದ ಒಟ್ಟು 1,594 ಮಂದಿ ಬೆಂಗಳೂರು ನಗರಕ್ಕೆ ವಾಪಸ್ಸಾಗಿದ್ದಾರೆ. ಈ ಪೈಕಿ 1,380 ಮಂದಿಯನ್ನು ಪತ್ತೆ ಹಚ್ಚಿರುವ ಬಿಬಿಎಂಪಿ, 1,234 ಮಂದಿಯನ್ನು ಕೋವಿಡ್ ಪರೀಕ್ಷೆಗೆ ಒಳಪಡಿಸಿದೆ. 931 ಮಂದಿಯ ಪರೀಕ್ಷಾ ವರದಿ ಲಭ್ಯವಾಗಿದ್ದು, 16 ಮಂದಿಗೆ ಸೋಂಕು ಪತ್ತೆಯಾಗಿದೆ. 915 ಕೋವಿಡ್ ಪರೀಕ್ಷಾ ವರದಿ ನೆಗಟಿವ್ ಬಂದಿದೆ. ಇನ್ನೂ 303 ಮಂದಿಯ ಫಲಿತಾಂಶ ಬಾಕಿ ಇದೆ. ಉಳಿದ 146 ಮಂದಿಯನ್ನು ಪರೀಕ್ಷೆ ಬಾಕಿ ಇದೆ.

ಕನ್ನಡಪ್ರಭ

# ಪಾಲಿಕೆ ಚುನಾವಣೆ ಮುಂದೂಡಲು ಆಗ್ರಹಿಸಿ ಸಿಎಂಗೆ ಪತ್ರ

**ಬೆಂಗಳೂರು:** ಬಿಬಿಎಂಪಿ ಸುಮಾರು 22 ಸಾವಿರ ಕೋಟಿ ರು. ಕಾಮಗಾರಿಗಳ ಬಾಕಿ ಮೊತ್ತ ಪಾವತಿಸಬೇಕಿದೆ. ವಿವಿಧ ಬ್ಯಾಂಕ್‌ಗಳಲ್ಲಿ ಸಾಲವಿದ್ದು, ಸಂಪನ್ಮೂಲ ಕ್ರೋಢೀಕರಣ ಕೊರತೆ ಇದೆ. ಹೀಗಾಗಿ, ಪಾಲಿಕೆಯ ಆರ್ಥಿಕ ಪರಿಸ್ಥಿತಿ ಸುಧಾರಿಸುವ ವರೆಗೆ ಬಿಬಿಎಂಪಿ ಚುನಾವಣೆ ನಡೆಸುವುದು ಬೇಡ ಎಂದು ಸಾಮಾಜಿಕ ಕಾರ್ಯಕರ್ತ ಎಸ್. ಅಮರೇಶ್ ಎಂಬುವರು ಮುಖ್ಯಮಂತ್ರಿ ಯಡಿಯೂರಪ್ಪಗೆ ಪತ್ರ ಬರೆದಿದ್ದಾರೆ. ಪಾಲಿಕೆಯಲ್ಲಿ ಆರ್ಥಿಕ ಶಿಸ್ತು ಕಾಪಾಡಿಕೊಳ್ಳಬೇಕಾದರೆ ಹಾಗೂ ಈಗ ಇರುವ ಪರಿಸ್ಥಿತಿ ಸುಧಾರಿಸುವ ವರೆಗೆ ಚುನಾವಣೆ ಮುಂದೂಡುವುದು ಉತ್ತಮ. ಇಲ್ಲವಾದರೆ ಈಗಿರುವ ಪಾಲಿಕೆಯ ಆರ್ಥಿಕ ಪರಿಸ್ಥಿತಿಯಲ್ಲಿ ಪಾಲಿಕೆ ಸದಸ್ಯರ ಒತ್ತಡಕ್ಕೆ ಮಣಿದು ಅಧಿಕಾರ ನಡೆಸಬೇಕಾದ ಪರಿಸ್ಥಿತಿ ನಿರ್ಮಾಣವಾಗಲಿದೆ. ಪಾಲಿಕೆಯ ಆರ್ಥಿಕ ಪರಿಸ್ಥಿತಿ ಮತ್ತಷ್ಟು ಶೋಚನೀಯ ಸ್ಥಿತಿಗೆ ತಲುಪುವ ಸಾಧ್ಯತೆ ಇದೆ. 22 ಸಾವಿರ ಕೋಟಿ ರು.ಗಳಿಗೂ ಅಧಿಕ ಮೊತ್ತ ಕಾಮಗಾರಿಗಳ ಬಾಕಿ ಬಿಲ್ ಪಾವತಿಸಬೇಕಿದೆ. ಅಲ್ಲದೆ ಗುತ್ತಿಗೆದಾರರಿಗೆ ಕೋಟ್ಯಂತರ ರು. ಬಾಕಿ ಉಳಿಸಿಕೊಂಡಿದ್ದು, 700 ಕೋಟಿ ರು.ಗಳಿಗಿಂತ ಅಧಿಕ ಸಾಲ ಇದೆ. ಹೀಗಾಗಿ, ಅಧಿಕಾರಿಗಳು ಯಾವುದೇ ಸದಸ್ಯರ ಹಸ್ತಕ್ಷೇಪ ಇಲ್ಲದೆ ಕಾರ್ಯನಿರ್ವಹಿಸಲು ಚುನಾವಣೆ ಮುಂದೂಡುವುದು ಉತ್ತಮ ಎಂದು ಒತ್ತಾಯಿಸಲಾಗಿದೆ.

ಕನ್ನಡಪ್ರಭ

# ಸುತ್ತೋಲೆಯಲ್ಲೇ ಉಳಿದ ಸ್ಮೋಕಿಂಗ್ ಝೋನ್

## ಬಾರ್, ರೆಸ್ಟೋರೆಂಟ್, ಹೋಟೆಲ್‌ಗಳಲ್ಲಿ ಸಿಗರೆಟ್ ಸೇದಲು ಪ್ರತ್ಯೇಕ ಸ್ಥಳ | ಯೋಜನೆ ಅನುಷ್ಠಾನಕ್ಕೆ ತರುವಲ್ಲಿ ಪಾಲಿಕೆ ಸಂಪೂರ್ಣ ವಿಫಲ

## ಸುತ್ತೋಲೆ ಹೊರಡಿಸಿ 2 ವರ್ಷವಾದರೂ 'ಸ್ಮೋಕಿಂಗ್ ಝೋನ್' ನಿರ್ಮಾಣಕ್ಕೆ ಅನುಮತಿ ನೀಡುವ ಸಮಿತಿ ರಚನೆ ಮಾಡದ ಬಿಬಿಎಂಪಿ

• **ವಿಶ್ವನಾಥ ಮಲೇಬೆನ್ನೂರು**

**ಕನ್ನಡಪ್ರಭ ವಾರ್ತೆ** ಬೆಂಗಳೂರು

ಧೂಮಪಾನದಿಂದ ಉಂಟಾಗುತ್ತಿರುವ ಆರೋಗ್ಯ ಸಮಸ್ಯೆಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಬಾರ್, ರೆಸ್ಟೋರೆಂಟ್, ಹೋಟೆಲ್‌ಗಳಲ್ಲಿ ಸಿಗರೆಟ್ ಸೇವನೆಗೆ ಪ್ರತ್ಯೇಕ 'ಸ್ಮೋಕಿಂಗ್ ಝೋನ್' ಇರಬೇಕೆಂಬ ನಿಯಮ ಅನುಷ್ಠಾನಕ್ಕೆ ತರುವಲ್ಲಿ ಬಿಬಿಎಂಪಿ ಸಂಪೂರ್ಣ ವಿಫಲವಾಗಿವೆ.

ಸಿಗರೆಟ್ ಮತ್ತು ತಂಬಾಕು ಸೇವನೆಯಿಂದ ಉಂಟಾಗುತ್ತಿರುವ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಸರ್ಕಾರ ಸಿಗರೆಟ್ ಮತ್ತು ತಂಬಾಕು ಉತ್ಪನ್ನಗಳ ನಿಯಂತ್ರಣ ಕಾಯ್ದೆ (ಕಾಟ್ಪಾ) ಜಾರಿಗೆ ತರಲಾಗಿದೆ. ರಾಜ್ಯದಲ್ಲೂ ಸಿಗರೆಟ್ ಮತ್ತು ತಂಬಾಕು ಸೇವನೆ ನಿಯಂತ್ರಣ ಕಾಯ್ದೆ- 2003ನ್ನು ಜಾರಿಗೆ ತಂದಿದ್ದು, ಅನುಷ್ಠಾನದ ಜವಾಬ್ದಾರಿ ಪೊಲೀಸ್ ಇಲಾಖೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ನೀಡಲಾಗಿದೆ. ಈ ಕುರಿತು ಬಿಬಿಎಂಪಿ 2018ರಲ್ಲಿಯೇ ಸುತ್ತೋಲೆ ಹೊರಡಿಸಿದೆ.

ಜತೆಗೆ 'ಸ್ಮೋಕಿಂಗ್ ಝೋನ್' ಇಲ್ಲದ ಬಾರ್, ರೆಸ್ಟೋರೆಂಟ್, ಹೋಟೆಲ್‌ಗಳ ಪರವಾನಗಿ ನವೀಕರಿಸದಂತೆ ಹಾಗೂ ನಿಯಮ ಉಲ್ಲಂಘಿಸಿದರೆ ಪರವಾನಗಿ ರದ್ದುಪಡಿಸುವುದಾಗಿ ಎಚ್ಚರಿಕೆ ನೀಡಲಾಗಿತ್ತು. ಸುತ್ತೋಲೆ ಹೊರಡಿಸಿ ಬರೋಬ್ಬರಿ ಎರಡು



**ಒಂದೇ ಒಂದು ಸ್ಮೋಕಿಂಗ್ ಝೋನ್ ಇಲ್ಲ:** 30ಕ್ಕಿಂತ ಹೆಚ್ಚು ಆಸನ ವ್ಯವಸ್ಥೆ ಇರುವ ಬಾರ್, ರೆಸ್ಟೋರೆಂಟ್, ಹೋಟೆಲ್, ಪಬ್ ಹಾಗೂ ಕ್ಲಬ್‌ಗಳಲ್ಲಿ ಪ್ರತ್ಯೇಕ ಧೂಮಪಾನ ಪ್ರದೇಶ ಸ್ಥಾಪಿಸಬೇಕೆಂಬ ನಿಯಮವಿದ್ದರೂ ಈವರೆಗೆ ನಗರದಲ್ಲಿ ಒಂದೇ ಒಂದು ಅಧಿಕೃತ ಸ್ಮೋಕಿಂಗ್ ಝೋನ್ ನಿರ್ಮಾಣವಾಗಿಲ್ಲ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆಗೆ ಬಿಬಿಎಂಪಿ ಅವಕಾಶ ಮಾಡಿಕೊಟ್ಟಿದೆ. ಆದರೆ, ಮಾಡುತ್ತಿಲ್ಲ. ವಿಲೇವಾರಿಗೆ ಬಿಬಿಎಂಪಿ ಆಯುಕ್ತರು, ಸಾರ್ವಜನಿಕರ ಆರೋಗ್ಯ ವಿಭಾಗದ ಅಧಿಕಾರಿಗಳು, ವಲಯ ಆರೋಗ್ಯ ಅಧಿಕಾರಿ, ಸ್ವಯಂ ಸೇವಾ ಸಂಸ್ಥೆಯ ಸದಸ್ಯರ ನೇತೃತ್ವದಲ್ಲಿ ಸಮಿತಿ ರಚನೆಯಾಗಬೇಕು. ಸಮಿತಿ ಸಭೆಯಲ್ಲಿ ಚರ್ಚೆ ಮಾಡಿ ಅನುಮತಿ ನೀಡಬೇಕು. ಆದರೆ, ಈವರೆಗೆ ಸಮಿತಿ ರಚನೆ ಆಗದ ಹಿನ್ನೆಲೆಯಲ್ಲಿ ಯಾವುದೇ ಸ್ಮೋಕಿಂಗ್ ಝೋನ್‌ಗೆ ಅನುಮತಿ ನೀಡಿಲ್ಲ ಎಂದು ಪಾಲಿಕೆ



### ಚಿಲ್ಲರೆ ದಂಡಕ್ಕೆ ಸೀಮಿತ

ಪ್ರತ್ಯೇಕ ಸ್ಮೋಕಿಂಗ್ ಝೋನ್ ನಿರ್ಮಾಣಕ್ಕೆ ಅನುಮತಿ ನೀಡದ ಬಿಬಿಎಂಪಿ ಆರೋಗ್ಯ ಅಧಿಕಾರಿಗಳು ರಸ್ತೆ ಬದಿಯಲ್ಲಿ ವ್ಯಾಪಾರ ನಡೆಸುವ ವ್ಯಾಪಾರಿಗಳಿಗೆ ಸಿಗರೆಟ್ ಹಾಗೂ ತಂಬಾಕು ಮಾರಾಟಕ್ಕೆ ದಂಡ ವಿಧಿಸುತ್ತಿದ್ದಾರೆ. ಕಳೆದ ಜನವರಿ ಯಿಂದ ಅಕ್ಟೋಬರ್ ಅಂತ್ಯದ ವರೆಗೆ ನಗರದಲ್ಲಿ 282 ಮಂದಿಗೆ ಕಾಟ್ಪಾ ಕಾಯ್ದೆ ಉಲ್ಲಂಘನೆಯಡಿ 40,240 ರು. ದಂಡ ವಿಧಿಸಿದ್ದಾರೆ. ಇನ್ನು ಬೆಂಗಳೂರು ನಗರ ಪೊಲೀಸರು 1,520 ಪ್ರಕರಣಗಳಿಂದ 2,86,350 ರು. ದಂಡ ವಸೂಲಿ ಮಾಡಿದ್ದಾರೆ.

**ನಗರದಲ್ಲಿ ಈವರೆಗೆ ಪ್ರತ್ಯೇಕ ಸ್ಮೋಕಿಂಗ್ ಝೋನ್ ನಿರ್ಮಾಣಕ್ಕೆ ಯಾವುದೇ ಅನುಮತಿ ನೀಡಿಲ್ಲ. ಆದರೆ, ಕಳೆದ ಜನವರಿಯಿಂದ ಅಕ್ಟೋಬರ್ ವರೆಗೆ ಎರಡು ಸಭೆ ನಡೆಸಿ ಏಳು ಬಾರಿ ನಗರದ ವಿವಿಧ ತಪಾಸಣೆ ನಡೆಸಿ ಕಾಟ್ಪಾ ಕಾಯ್ದೆ ಉಲ್ಲಂಘನೆ ಮಾಡಿದವರಿಗೆ ದಂಡ ವಿಧಿಸಲಾಗಿದೆ.**

• **ಮನೋರಂಜನ್ ಹೆಗ್ಡೆ** ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮ ಅಧಿಕಾರಿ

ಕನ್ನಡಪ್ರಭ

ಇನ್ನೊಂದು ಅವಕಾಶ | 10 ದಿನಗಳಲ್ಲಿ ರಸ್ತೆಗಳನ್ನು ಗುಂಡಿಮುಕ್ತಗೊಳಿಸಲು ಗೌರವ್ ಗುಪ್ತಾ ತಾಕೀತು

# ರಸ್ತೆ ಗುಂಡಿ ಮುಚ್ಚಲು ಮತ್ತೆ ಹೊಸ ಗಡುವು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದ ರಸ್ತೆ ಗುಂಡಿ ಮುಚ್ಚುವ ಕುರಿತು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಮತ್ತೊಂದು ಬಾರಿ ಅಧಿಕಾರಿಗಳಿಗೆ ಗಡುವು ನೀಡಿದ್ದಾರೆ.

ಈ ಹಿಂದೆ ಹಲವು ಬಾರಿ ರಸ್ತೆ ಗುಂಡಿಗಳನ್ನು ಮುಚ್ಚುವುದಕ್ಕೆ ಅಧಿಕಾರಿಗಳಿಗೆ ಆಡಳಿತಾಧಿಕಾರಿ ಗೌರವ್ ಗುಪ್ತಾ ಗಡುವು ನೀಡಿದ್ದರು. ಗಡುವು ಮುಗಿದರೂ ರಸ್ತೆ ಗುಂಡಿ ಮುಚ್ಚುವ ಕಾರ್ಯ ಮಾತ್ರ ಪೂರ್ಣಗೊಂಡಿಲ್ಲ. ಇದೀಗ ಸೋಮವಾರ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮುಂದಿನ 10 ದಿನದಲ್ಲಿ ರಸ್ತೆಗಳನ್ನು ಗುಂಡಿ ಮುಕ್ತಗೊಳಿಸಬೇಕೆಂದು ಹೊಸ ಗಡುವು ನೀಡಿದ್ದಾರೆ.

ಈ ವೇಳೆ ಮಾತನಾಡಿದ ಆಡಳಿತಾಧಿಕಾರಿ ಗೌರವ್ ಗುಪ್ತ, ನಗರದಲ್ಲಿ ರಸ್ತೆಗುಂಡಿ ಮುಚ್ಚುವ ಮಂದಗತಿಯಲ್ಲಿ ನಡೆಯುತ್ತಿದ್ದು, ತ್ವರಿತವಾಗಿ ಗುಂಡಿ ಮುಚ್ಚುವಂತೆ ರಸ್ತೆ ಮತ್ತು ಮೂಲಸೌಕರ್ಯ ವಿಭಾಗದ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ.



ರಸ್ತೆ ಗುಂಡಿ ಮುಚ್ಚುವ ಕುರಿತು ಗೌರವ್ ಗುಪ್ತಾ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಡಾಂಬರು ಮಿಶ್ರಣ ಘಟಕದಿಂದ (ಹಾಟ್ ಮಿಕ್ಸ್‌ರ್‌ಪ್ಲಾಂಟ್) ಎಲ್ಲ ಎಂಟು ವಲಯಗಳಿಗೂ ಪ್ರತಿ ನಿತ್ಯ ಎರಡು ಲೋಡ್ ಡಾಂಬರು ಸರಬರಾಜು ಮಾಡಿ 10 ದಿನದ ಒಳಗಾಗಿ ರಸ್ತೆಗಳು ಸಂಪೂರ್ಣವಾಗಿ ಗುಂಡಿ ಮುಕ್ತವಾಗಬೇಕು. ಅದೇ ರೀತಿ ಬೀದಿ ದೀಪಗಳ ಅಳವಡಿಕೆ ನಿರ್ವಹಣೆ ನಿರೀಕ್ಷಿತ ಮಟ್ಟದಲ್ಲಿ ಆಗುತ್ತಿಲ್ಲ. ಹೀಗಾಗಿ, ಟೆಂಡರ್ ಪ್ರಕ್ರಿಯೆಗೆ ವೇಗವಾಗಿ ಮುಗಿಸುವಂತೆ ಸೂಚಿಸಿದರು. ಸಭೆಯಲ್ಲಿ ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಮುಖ್ಯ ಎಂಜಿನಿಯರ್ ಪ್ರಹ್ಲಾದ್ ಹಾಗೂ ಯೋಜನಾ ವಿಭಾಗದ ಮುಖ್ಯ ಎಂಜಿನಿಯರ್ ರಮೇಶ್ ಸೇರಿದಂತೆ ಮೊದಲಾದವರು ಇದ್ದರು.

## ಕಸ ಗುಡಿಸುವ ಯಂತ್ರದ ಮೇಲೆ ಕಣ್ಣಿಡಿ

ಕಸ ಗುಡಿಸುವ ಯಂತ್ರದ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ ಎಂದು ಅದರ ಮೇಲೆ ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ನಿಗಾವಹಿಸಬೇಕು. ನಗರದ ಮುಖ್ಯ ಹಾಗೂ ಉಪ ರಸ್ತೆಗಳ ಪೈಕಿ ಯಾವ ಯಾವ ರಸ್ತೆಗಳಲ್ಲಿ ಕಸ ಗುಡಿಸುವ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ಎಂಬುದನ್ನು ಪಟ್ಟಿ ಮಾಡಿ ಪ್ರತಿ ನಿತ್ಯ ಎಷ್ಟು ಕಿ.ಮೀ ಕಸ ಗುಡಿಸುತ್ತಿವೆ ಎಂಬ ವರದಿ ನೀಡಲು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಸೂಚಿಸಿದರು. ನಗರದ ಪ್ರಮುಖ ರಸ್ತೆಗಳಲ್ಲಿನ ಕಲ್ಲುಗಳಿಗೆ ಬಣ್ಣ ಬಳಿಯುವ ಹಾಗೂ ಲೈನ್ ಮಾರ್ಕಿಂಗ್‌ಗೆ ಕ್ರಮ ವಹಿಸುವುದು ಸೇರಿದಂತೆ ಪ್ರಮುಖ ನಿರ್ದೇಶನಗಳನ್ನು ಗುಪ್ತಾ ನೀಡಿದರು.

VK
ವಿಜಯ ಕರ್ನಾಟಕ

# ಹತ್ತು ದಿನಗಳ ಒಳಗೆ ರಸ್ತೆ ಗುಂಡಿ ಮುಚ್ಚಲು ತಾಕೀತು

■ **ವಿಕ ಸುದ್ದಿಲೋಕ** ಬೆಂಗಳೂರು

ನಗರದ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಮುಂದಿನ 10 ದಿನಗಳೊಳಗೆ ಮುಚ್ಚಬೇಕು. ಗುಂಡಿ ದುರಸ್ತಿ ಕಾರ್ಯವನ್ನು ಚುರುಕುಗೊಳಿಸಿ, ಗುಣಮಟ್ಟದ ಕಾಮಗಾರಿಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್‌ಗುಪ್ತ ಅವರು ಅಧಿಕಾರಿಗಳಿಗೆ ತಾಕೀತು ಮಾಡಿದರು.

ರಸ್ತೆ ಗುಂಡಿ, ಬೀದಿದೀಪಗಳ ಅಳವಡಿಕೆ, ಯಾಂತ್ರೀಕೃತ ಕಸ ಗುಡಿಸುವ ಯಂತ್ರ ಹಾಗೂ ರಸ್ತೆಗಳ ವಾರ್ಷಿಕ ನಿರ್ವಹಣೆ ಸಂಬಂಧ ಸೋಮವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ''ಕಣ್ಣೂರು ಬಳಿಯ ಪಾಲಿಕೆಯ ಡಾಂಬರು ಮಿಶ್ರಣ ಘಟಕದಿಂದ ಎಲ್ಲ 8 ವಲಯಗಳಿಗೆ ನಿತ್ಯ ಎರಡು ಲೋಡ್ ಡಾಂಬರು ಪೂರೈಸಿ, 10 ದಿನಗಳೊಳಗೆ ಬಾಕಿ ಇರುವ ಗುಂಡಿಗಳನ್ನು ಮುಚ್ಚಬೇಕು. ಈ ವೇಳೆ ಗುಣಮಟ್ಟ ಕಾಯ್ದುಕೊಳ್ಳಬೇಕು,'' ಎಂದು ಸೂಚನೆ ನೀಡಿದರು.

## ಅಧಿಕಾರಿಗಳ ಜತೆ ಪಾಲಿಕೆ ಆಡಳಿತಾಧಿಕಾರಿ ಸಭೆ

ಸಮರ್ಪಕವಾಗಿ ಬೀದಿ ದೀಪಗಳ ನಿರ್ವಹಣೆಯಾಗದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ''ಬೀದಿ ದೀಪಗಳ ನಿರ್ವಹಣೆಯ ಟೆಂಡರ್ ಪ್ರಕ್ರಿಯೆಗೆ ವೇಗ ನೀಡಿ, ತ್ವರಿತವಾಗಿ ಕಾರ್ಯಾದೇಶ ನೀಡಬೇಕು. ಆಯಾ ವಲಯಗಳ ಮುಖ್ಯ ಎಂಜಿನಿಯರ್‌ಗಳು ಬೀದಿ ದೀಪಗಳನ್ನು ಅಳವಡಿಸಲು ಹೆಚ್ಚಿನ ಆದ್ಯತೆ ನೀಡಬೇಕು,'' ಎಂದು ಹೇಳಿದರು.

''ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳ ವಾರ್ಷಿಕ ನಿರ್ವಹಣೆಯ ಟೆಂಡರ್ ಪ್ರಕ್ರಿಯೆಯನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು. ರಸ್ತೆಗಳಲ್ಲಿನ ಕರ್ಬ್ ಸ್ಟೋನ್‌ಗಳಿಗೆ ಬಣ್ಣ ಬಳಿಯುವ ಹಾಗೂ ಲೈನ್ ಮಾರ್ಕಿಂಗ್ ಮಾಡಲು ಯೋಜನೆ ರೂಪಿಸಿ, ಸಮರೋಪಾದಿಯಲ್ಲಿ ಕೆಲಸ ಕೈಗೆತ್ತಿಕೊಳ್ಳಬೇಕು,'' ಎಂದು ತಿಳಿಸಿದರು.

VK
ವಿಜಯ ಕರ್ನಾಟಕ

# ಕೊರೊನಾ ಇಳಿಕೆ ಹಾದಿಯಲ್ಲಿ

**ಬೆಂಗಳೂರು:** ನಗರದಲ್ಲಿ ಕೊರೊನಾ ಸೋಂಕಿತ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಿದ್ದು, ಸೋಮವಾರ



ಹೊಸದಾಗಿ 309 ಮಂದಿಗೆ ಸೋಂಕು ತಗಲಿರುವುದು ದೃಢಪಟ್ಟಿದೆ. ಕೋವಿಡ್‌ಗೆ 5 ಮಂದಿ ಬಲಿಯಾಗಿದ್ದಾರೆ. ಬೆಂಗಳೂರು ನಗರ ಜಿಲ್ಲೆಯಲ್ಲಿ ಇದುವರೆಗೆ 3,86,908 ಸೋಂಕಿತ ಪ್ರಕರಣಗಳು ಪತ್ತೆಯಾಗಿವೆ. ಈ ಪೈಕಿ 3,74,378 ಮಂದಿ ಚೇತರಿಸಿಕೊಂಡಿದ್ದಾರೆ. ಉಳಿದ 8225 ರೋಗಿಗಳು ನಿಗದಿತ ಆಸ್ಪತ್ರೆ, ಕೋವಿಡ್ ಆರೈಕೆ ಕೇಂದ್ರಗಳಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ. ಕೊರೊನಾ ಸೋಂಕಿನಿಂದ ನರಳುತ್ತಿದ್ದವರಲ್ಲಿ ಈವರೆಗೆ 4304 ಮಂದಿ ಮೃತಪಟ್ಟಿದ್ದಾರೆ.

VK
ವಿಜಯ ಕರ್ನಾಟಕ

ಹೊಸ ವರ್ಷಾಚರಣೆ ವೇಳೆ ಗುಂಪು ಸೇರಲು ನಿರ್ಬಂಧ | ಡಿ.1ರ ಬೆಳಗ್ಗೆ 6ರವರೆಗೆ ಸೆಕ್ಷನ್ 144 ಅನ್ವಯ

# ಡಿ.31ರ ಸಂಜೆಯಿಂದಲೇ ನಿಷೇಧಾಜ್ಞೆ ಜಾರಿ

ರಾತ್ರಿ 11ರ ಬಳಿಕ ಬಾರ್ ಬಂದ್

ಫ್ಲೈಓವರ್‌ಗಳಲ್ಲಿ ಸಂಚಾರ ನಿರ್ಬಂಧ

ಬುಕ್ ಮಾಡಿಕೊಂಡವರಿಗೆ ಮಾತ್ರ ಹೋಟೆಲ್‌ನಲ್ಲಿ ಪ್ರವೇಶ

ಡಿಜೆ ಆಯೋಜಿಸಲು ಇಲ್ಲ ಅವಕಾಶ

■ **ವಿಕ ಸುದ್ದಿಲೋಕ** ಬೆಂಗಳೂರು

ಹೊಸ ವರ್ಷಕ್ಕೆ ರಾಜಧಾನಿ ಬೆಂಗಳೂರಿಗೆ ಪ್ರತ್ಯೇಕ ಮಾರ್ಗಸೂಚಿ ಹೊರಡಿಸಿರುವ ಪೊಲೀಸ್ ಇಲಾಖೆ, ಡಿ.31ರ ಸಂಜೆ 6 ಗಂಟೆಯಿಂದ ಜ.1ರ ಬೆಳಗ್ಗೆ 6 ಗಂಟೆವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ಆದೇಶ ಹೊರಡಿಸಿದೆ. ಈ ಸಂಬಂಧ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಆದೇಶ ಹೊರಡಿಸಿದ್ದಾರೆ.

1 ಸಾರ್ವಜನಿಕ ಸ್ಥಳಗಳಲ್ಲಿ ಹೊಸ ವರ್ಷಾಚರಣೆ ನಿರ್ಬಂಧಿಸಲಾಗಿದೆ. ಅಲ್ಲದೆ, ಸಾರ್ವಜನಿಕ ಸ್ಥಳಗಳಲ್ಲಿ ಜನ ಗುಂಪುಗೂಡುವುದನ್ನು ನಿಷೇಧಿಸಲಾಗಿದೆ.

2 ಯಾವುದೇ ಸಾರ್ವಜನಿಕ ಸ್ಥಳ, ಉದ್ಯಾನ ಹಾಗೂ ಮೈದಾನಗಳಲ್ಲಿ ಭಾರೀ ಸಂಖ್ಯೆಯಲ್ಲಿ ಜನ ಗುಂಪುಗೂಡಿ ಹೊಸ ವರ್ಷಾಚರಣೆ ಮಾಡುವಂತಿಲ್ಲ, ಆದರೆ, ಜನವಸತಿ ಸಂಕೀರ್ಣಗಳು ಹಾಗೂ ಖಾಸಗಿ ಕ್ಲಬ್‌ಗಳಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸದೆ ಸದಸ್ಯರಿಗೆ ಸೀಮಿತವಾಗಿ ಹೊಸ ವರ್ಷ ಆಚರಿಸಲು ಅವಕಾಶ ಕಲ್ಪಿಸಲಾಗಿದೆ.

3 ಹೋಟೆಲ್, ಮಾಲ್, ರೆಸ್ಟೋರೆಂಟ್, ಕ್ಲಬ್, ಪಬ್, ಕ್ಲಬ್ ಹೌಸ್‌ಗಳಲ್ಲಿ ಡಿಜೆ, ನೃತ್ಯ, ಸಂಗೀತ ಬ್ಯಾಂಡ್ ಕಾರ್ಯಕ್ರಮಗಳನ್ನು ನಡೆಸುವಂತಿಲ್ಲ, ಆದರೆ, ಕೋವಿಡ್-ನಿಯಮಗಳನ್ನು ಪಾಲಿಸುವುದರ ಮೂಲಕ ತಮ್ಮ ದೈನಂದಿನ ವ್ಯವಹಾರಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬಹುದು.

4 ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳ ಮ್ಯಾನೇಜ್‌ಮೆಂಟ್‌ಗಳು ಈಗಾಗಲೇ ಬುಕ್ ಮಾಡಿಕೊಂಡಿರುವ ಗ್ರಾಹಕರಿಗೆ ಮಾತ್ರ ಅವಕಾಶ ಕಲ್ಪಿಸಬೇಕು. ಅತಿಥಿಗಳು ಬರುವ ಸಮಯ ಹಾಗೂ ಚಲನವಲನಗಳನ್ನು ಗಮನಿಸಿ ಪೊಲೀಸರಿಗೆ ತಿಳಿಸಬೇಕಾಗುತ್ತದೆ. ಹೋಟೆಲ್, ಮಾಲ್, ಪಬ್‌ಗಳು ಸರಕಾರ ಜಾರಿಗೊಳಿಸಿರುವ ಕೋವಿಡ್ ನಿಯಮವನ್ನು ಅನುಸರಿಸುವುದರ ಜತೆಗೆ ಕೋವಿಡ್ ತಡೆಗಟ್ಟುವ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರೂಪಿಸಿರುವ ಮಾಲಿನ್ಯ ತಡೆಗಟ್ಟುವ ನಿಯಮವನ್ನು ಕಡ್ಡಾಯವಾಗಿ ಪಾಲಿಸಬೇಕು.

5 ಗುರುವಾರ ರಾತ್ರಿ ಹಿಂದೆಂದಿಗಿಂತ ಹೆಚ್ಚು ಸ್ಥಳಗಳಲ್ಲಿ ಡ್ರಿಂಕ್ ಆ್ಯಂಡ್ ಡ್ರೈವ್ ತಪಾಸಣೆ ನಡೆಸಲಾಗುತ್ತದೆ. ನಗರದಾದ್ಯಂತ ಕಟ್ಟೆಚ್ಚರ ವಹಿಸಲಾಗುತ್ತದೆ. ನಿಯಮ ಉಲ್ಲಂಘಿಸಿದವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು. ರಸ್ತೆಯಲ್ಲಿ ವ್ಹೀಲಿಂಗ್, ಡ್ರ್ಯಾಗ್ ರೇಸ್ ಮಾಡಿದಲ್ಲಿ ವಾಹನಗಳನ್ನು ಜಪ್ತಿ ಮಾಡಲಾಗುತ್ತದೆ.

6 ನಗರದ ಎಲ್ಲ ಫ್ಲೈ ಓವರ್‌ಗಳನ್ನು ಅಂದು ಬಂದ್ ಮಾಡಲಾಗುವುದು. ಜತೆಗೆ ನಗರದ ಪ್ರಮುಖ ರಸ್ತೆಗಳಲ್ಲಿ ನಾಕಬಂದಿ ಹಾಕಲಾಗುವುದು. ರಾತ್ರಿ 11 ಗಂಟೆಗೆ ನಗರದ ಎಲ್ಲಾ ಬಾರ್ ಮತ್ತು ವೈನ್ ಶಾಪ್ ಬಂದ್ ಮಾಡಲು ನಗರ ಪೊಲೀಸ್ ಆಯುಕ್ತರು ಸೂಚಿಸಿದ್ದಾರೆ.



### ಬ್ರಿಗೇಡ್ ರಸ್ತೆಯಲ್ಲಿ ನಿಲ್ಲುವುದಕ್ಕೂ ಇಲ್ಲ ಅವಕಾಶ!

ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್, ಇಂದಿರಾನಗರ ಹಾಗೂ ಕೋರಮಂಗಲದಲ್ಲಿ ಡಿ.31ರಂದು ರಾತ್ರಿ ಯಾರಿಗೂ ಪ್ರವೇಶವಿಲ್ಲ. ಹೋಟೆಲ್, ಪಬ್, ರೆಸ್ಟೋರೆಂಟ್ ಹಾಗೂ ಇತರರು, ಮುಂಗಡವಾಗಿ ಗ್ರಾಹಕರಿಂದ ಬುಕ್ಕಿಂಗ್ ಪಡೆಯಬೇಕು. ಅದಕ್ಕೆ ಪ್ರತಿಯಾಗಿ, ಟಿಕೆಟ್ ನೀಡಬೇಕು. ಅಂಥ ಟಿಕೆಟ್ ತೋರಿಸಿದರಷ್ಟೇ ಈ ಪ್ರದೇಶಗಳಲ್ಲಿ ಪ್ರವೇಶಕ್ಕೆ ಅವಕಾಶ ನೀಡಲಾಗುವುದು. ಈ ಬಗ್ಗೆ ಠಾಣೆ ಸಿಬ್ಬಂದಿಯೇ ಪರಿಶೀಲನೆ ನಡೆಸಲಿದ್ದಾರೆ ಎಂದು ಕಮಲ್ ಪಂತ್ ಹೇಳಿದರು.

ಹೋಟೆಲ್, ಪಬ್ ಹಾಗೂ ಇತರರು, ತಮ್ಮ ಗ್ರಾಹಕರನ್ನು ರಸ್ತೆಯಲ್ಲಿ ನಿಲ್ಲಿಸುವಂತಿಲ್ಲ, ನಿಯಮ ಉಲ್ಲಂಘಿಸಿದರೆ ಪ್ರಕರಣ ದಾಖಲಿಸಿಕೊಳ್ಳಲಾಗುವುದು. ನಿಯಮ ಪಾಲನೆ ಬಗ್ಗೆ ಹೋಟೆಲ್ ಆಡಳಿತ ಮಂಡಳಿ ಗಮನಹರಿಸಬೇಕು ಎಂದರು.

## ನಗರದ ಅಕ್ಕ ಪಕ್ಕದ ಜಿಲ್ಲೆಗಳ ಪ್ರವಾಸಿ ತಾಣಗಳು 'ಲಾಕ್'

**ಬೆಂಗಳೂರು:** ನಗರಕ್ಕೆ ಹೊಂದಿಕೊಂಡಿರುವ ಜಿಲ್ಲೆಗಳಲ್ಲೂ ಪ್ರವಾಸಿ ತಾಣಗಳಿಗೆ ತೆರಳಲು ನಿರ್ಬಂಧ ವಿಧಿಸಿರುವುದು ಪಾರ್ಟಿ ಪ್ರಿಯರಿಗೆ ನಿರಾಸೆ ಉಂಟು ಮಾಡಿದೆ.

ಬೆಂಗಳೂರಿಗರ ನೆಚ್ಚಿನ ಪ್ರವಾಸಿ ತಾಣ ನಂದಿ ಬೆಟ್ಟದಲ್ಲಿ ಡಿ.30ರಿಂದ ಜ.1ರವರೆಗೆ ಪ್ರವಾಸಿಗರ ಪ್ರವೇಶವನ್ನು ಸಂಪೂರ್ಣ ನಿರ್ಬಂಧಿಸಲಾಗಿದೆ. ಬೆಟ್ಟದ ತಪ್ಪಲಿನ ರೆಸಾರ್ಟ್‌ಗಳಲ್ಲಿ ಪಾರ್ಟಿ ಆಯೋಜಿಸಲು ಕೂಡ ಚಿಕ್ಕಬಳ್ಳಾಪುರ ಜಿಲ್ಲಾಡಳಿತ ನಿರ್ಬಂಧ ಹೇರಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಕೂಡ ಪಾರ್ಟಿ ಆಯೋಜನೆಗೆ ಅಂಕುಶ ಹಾಕಿದೆ.

ತುಮಕೂರು ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳಾದ ದೇವರಾಯನ ದುರ್ಗ, ನಾಮದ ಚಿಲುಮೆ, ಬಸದಿ ಬೆಟ್ಟಗಳಿಗೆ ಡಿ.31ರ ಬೆಳಗ್ಗೆ 8 ಗಂಟೆಯಿಂದ 2021 ಜನವರಿ 2ರ ಬೆಳಗ್ಗೆ 8 ಗಂಟೆವರೆಗೆ ಪ್ರವೇಶ ನಿಷೇಧಿಸಲಾಗಿದೆ.

ರಾಮನಗರ ಜಿಲ್ಲೆಯ ಕಣ್ವ ಡ್ಯಾಮ್, ಮಂಚನಬೆಲೆ, ಸಂಗಮ, ಮೇಕೆದಾಟು, ಚುಂಚಿ ಫಾಲ್ಸ್ , ಸಾವನದುರ್ಗದಲ್ಲೂ ಹೊಸ ವರ್ಷಾಚರಣೆಗೆ ಬ್ರೇಕ್ ಹಾಕಲಾಗಿದೆ.

**ಬದಲಿ ತಾಣಗಳು :** ಹಲವು ಪ್ರಮುಖ ಪ್ರವಾಸಿ ತಾಣಗಳಲ್ಲಿ ನಿರ್ಬಂಧ ಹೇರಿರುವುದರಿಂದ ನಗರಿಗರು ದೇವಸ್ಥಾನ ಸೇರಿ ಬದಲಿ ತಾಣಗಳಿಗೆ ತೆರಳಿ ಹೊಸ ವರ್ಷದ ಪ್ರವಾಸದ ಪ್ಲ್ಯಾನ್ ಮಾಡಿಕೊಳ್ಳಬಹುದಾಗಿದೆ.

ಗ್ರಾಮಾಂತರ ಜಿಲ್ಲೆಯ ಮಾಕಳಿ ದುರ್ಗ, ಶಿವಗಂಗೆ, ಸಿದ್ಧರಬೆಟ್ಟ, ಘಾಟಿ ಸುಬ್ರಹ್ಮಣ್ಯ, ಚಿಕ್ಕಬಳ್ಳಾಪುರದ ಸ್ಕಂದ ಗಿರಿ, ಚಿಂತಾಮಣಿ ಬೆಟ್ಟ, ದಂಡಿಗಾನಹಳ್ಳಿ ಡ್ಯಾಮ್, ಶ್ರೀನಿವಾಸ ಸಾಗರ, ವಿದುರಾಶ್ವತ್ಥ, ತುಮಕೂರಿನ ಸಿದ್ಧಗಂಗಾ ಮಠ, ಮಧುಗಿರಿ ಬೆಟ್ಟ, ಯಡಿಯೂರು, ಗೊರವನಹಳ್ಳಿ, ಮಾರ್ಕೋನಹಳ್ಳಿ ಡ್ಯಾಮ್, ಸಿದ್ಧರಬೆಟ್ಟ, ರಾಮನಗರದ ರಾಮದೇವರ ಬೆಟ್ಟ, ರೇವಣ ಸಿದ್ದೇಶ್ವರ ಬೆಟ್ಟ, ಕೋಲಾರದ ಕೋಟಿ ಲಿಂಗೇಶ್ವರ, ಅಂತರ ಗಂಗೆ, ಕುರುಡುಮಲೆಗೆ ತೆರಳಬಹುದಾಗಿದೆ.



### ರೆಸಾರ್ಟ್‌ಗಳಲ್ಲಿ ಪಾರ್ಟಿ ಆಯೋಜಿಸಲು ಕಡಿವಾಣ

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1
ಕನ್ನಡ ದಿನಪತ್ರಿಕೆ

ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್‌ನಲ್ಲಿ ನಿಷೇಧ | ಇಂದಿರಾನಗರ, ಕೋರಮಂಗಲದಲ್ಲೂ ನಿರ್ಬಂಧ

# ಹೊಸ ವರ್ಷ ಸರಳ ಸಂಭ್ರಮಾಚರಣೆಗೆ ಅನುಮತಿ, ನಿಷೇಧಾಜ್ಞೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜಧಾನಿಯಲ್ಲಿ ಸೀಮಿತ ವ್ಯಾಪ್ತಿಯಲ್ಲಿ ಸರಳವಾಗಿ ಹೊಸ ವರ್ಷಾಚರಣೆಗೆ ಪೊಲೀಸ್ ಇಲಾಖೆ ಅನುಮತಿ ನೀಡಿದೆ. ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್‌ನಲ್ಲಿ ನಿರ್ಬಂಧ ವಿಧಿಸಿದ್ದು, ನಗರದ ಎಲ್ಲೆಡೆ ಡಿ.31ರ ಸಂಜೆ 6 ರಿಂದ ಜ.1ರ ಬೆಳಗ್ಗೆ 6 ವರೆಗೆ ನಿಷೇಧಾಜ್ಞೆ ವಿಧಿಸಿದೆ.

**» ರಸ್ತೆ, ಮೈದಾನ, ಹೊರಾಂಗಣದಲ್ಲಿ ಆಚರಣೆ ಇಲ್ಲ**

ರಸ್ತೆ, ಪಾರ್ಕ್ ಮತ್ತು ಹೊರಾಂಗಣ ಸ್ಥಳಗಳಲ್ಲಿ ಐದಕ್ಕಿಂತ ಹೆಚ್ಚು ಜನರು ಸೇರುವಂತಿಲ್ಲ. ರಸ್ತೆ, ಪಾರ್ಕ್, ಮೈದಾನಗಳಲ್ಲಿ ಗುಂಪು ಸೇರಿ ವರ್ಷಾಚರಣೆಯನ್ನು ನಿಷೇಧಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಖಾಸಗಿ ಸ್ಥಳಗಳಾದ ಕ್ಲಬ್, ಜನವಸತಿ ಅಪಾರ್ಟ್‌ಮೆಂಟ್, ರೆಸ್ಟೋರೆಂಟ್, ಮಾಲ್, ಪಬ್, ಹೋಟೆಲ್‌ಗಳಲ್ಲಿ ಶೇ.50 ಗ್ರಾಹಕರಿಗೆ ಮಾತ್ರ ಸಂಭ್ರಮಾಚರಣೆಗೆ ಅವಕಾಶವಿದೆ. ಆದರೆ, ವಿಶೇಷ ಕಾರ್ಯಕ್ರಮಗಳಾದ ಸಂಗೀತ, ಬ್ಯಾಂಡ್, ನೃತ್ಯ, ಡ್ಯಾನ್ಸ್ ಮತ್ತು ಡಿಜೆಗಳನ್ನು



ಆಯೋಜನೆ ಮಾಡುವಂತಿಲ್ಲ. ಸಾಮಾನ್ಯ ದಿನದಂತೆ ಆಯೋಜನೆ ಮಾಡಬೇಕು. ಹೋಟೆಲ್, ಪಬ್, ಕ್ಲಬ್, ಮಾಲ್, ರೆಸಾರ್ಟ್‌ಗಳಲ್ಲಿ ಮುಂಗಡ ಬುಕ್ಕಿಂಗ್ ಮಾಡಿದ್ದಲ್ಲಿ ಮಾತ್ರ ಅವಕಾಶ. ಗ್ರಾಹಕರಿಗೆ ಕಡ್ಡಾಯವಾಗಿ ಪಾಸ್ ಅಥವಾ ಕೋಪನ್ ನೀಡಬೇಕು. ಕೆಲವು ಪ್ರದೇಶಗಳಲ್ಲಿ ಬುಕ್ಕಿಂಗ್ ಪಾಸ್, ಕೂಪನ್ ಇದ್ದರೇ ಮಾತ್ರ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗುತ್ತದೆ. ಈ ಬಗ್ಗೆ ಅನುಮತಿ, ನಿಯಮಗಳ ಬಗ್ಗೆ ತಿಳಿದುಕೊಳ್ಳಲು ಆಯಾ ಉಪ ಪೊಲೀಸ್ ಆಯುಕ್ತ(ಡಿಸಿಪಿ), ಬಿಬಿಎಂಪಿ ಅಧಿಕಾರಿ ಮತ್ತು ಮಾಲಿನ್ಯ ನಿಯಂತ್ರಣ ಅಧಿಕಾರಿಗಳನ್ನು ಸಂಪರ್ಕ ಮಾಡಬೇಕಾಗಿದೆ. ಹೋಟೆಲ್, ಪಬ್, ಕ್ಲಬ್, ರೆಸ್ಟೋರೆಂಟ್ ಇನ್ನಿತರ ಕಡೆ ವರ್ಷಾಚರಣೆ ವೇಳೆ ತಮ್ಮ ಆವರಣ ಬಿಟ್ಟು ಗ್ರಾಹಕರು ಹೊರ ಬಂದರೆ ಅಂತಹ ಆಯೋಜಕರ ವಿರುದ್ಧವೇ ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ಆಯುಕ್ತ ಪಂತ್ ಎಚ್ಚರಿಕೆ ನೀಡಿದ್ದಾರೆ.

## ಕೋವಿಡ್ ಮಾರ್ಗಸೂಚಿ ಕಡ್ಡಾಯ

ಕೋವಿಡ್-19 ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಬ್, ಕ್ಲಬ್, ಹೋಟೆಲ್, ರೆಸ್ಟೋರೆಂಟ್, ಮಾಲ್, ರೆಸಾರ್ಟ್‌ಗಳಲ್ಲಿ ಪಾಲನೆ ಮಾಡಬೇಕು. ಸ್ಯಾನಿಟೀಸರ್, ವೈಯಕ್ತಿಕ ಅಂತರ, ಮಾಸ್ಕ್, ದೇಹದ ಉಷ್ಣಾಂಶ ತಪಾಸಣೆ ಕಡ್ಡಾಯವಾಗಿ ಪಾಲನೆ ಮಾಡಬೇಕು. ತಪ್ಪಿದರೆ ಐಪಿಸಿ ಸೆಕ್ಷನ್, ರಾಷ್ಟ್ರೀಯ ವಿಪತ್ತು ನಿರ್ವಹಣ ಕಾಯ್ದೆಯಡಿ ಕೇಸ್ ದಾಖಲಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

## ಕೂಪನ್ ಇದ್ದರೇ ಸಂಚಾರ ಅವಕಾಶ

ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್, ಇಂದಿರಾನಗರ, ಕೋರಮಂಗಲದಲ್ಲಿ ಕಟ್ಟುನಿಟ್ಟಾಗಿ ಕಾನೂನು ಜಾರಿಗೆ ತರಲಾಗುತ್ತದೆ. ಇಲ್ಲಿನ ಪಬ್, ಹೋಟೆಲ್, ಕ್ಲಬ್, ರೆಸಾರ್ಟ್, ಮಾಲ್‌ಗಳು ತಮ್ಮ ಗ್ರಾಹಕರಿಂದ ಮುಂಗಡ ಬುಕ್ಕಿಂಗ್ ಮಾಡಿಸಿಕೊಂಡು ಪಾಸ್, ಕೂಪನ್ ವಿತರಣೆ ಮಾಡಬೇಕು. ಅಂತಹ ವ್ಯಕ್ತಿಗಳಿಗೆ ಮಾತ್ರ ಈ ಸ್ಥಳದಲ್ಲಿ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗುತ್ತದೆ. ಅನಗತ್ಯ ಓಡಾಟಕ್ಕೆ ಅವಕಾಶ ಇರುವುದಿಲ್ಲ.

## ಅಡ್ಡಾದಿಡ್ಡಿ ಸಂಚಾರಕ್ಕೆ ಬ್ರೇಕ್

ನಗರದಲ್ಲಿ ಅನಗತ್ಯ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಕಾರು, ದ್ವಿಚಕ್ರ ವಾಹನಗಳಲ್ಲಿ ಜಾಲಿ ರೇಡ್, ಡ್ರ್ಯಾಗ್ ರೇಸ್, ನಿಷೇಧಿಸಲಾಗಿದೆ. ಮುಂಜಾಗ್ರತ ಕ್ರಮವಾಗಿ ಮೇಲ್ಸೆತುವೆಗಳನ್ನು ಮುಚ್ಚಲಾಗುತ್ತದೆ. ನಗರದ ಎಲ್ಲೆಡೆ ಬಿಗಿ ಭದ್ರತೆ ಒದಗಿಸಲಾಗುತ್ತದೆ. ನಾಕಬಂದಿ ಮಾಡಿ ವಾಹನ ತಪಾಸಣೆ ನಡೆಸಲಾಗುತ್ತದೆ. ಡ್ರಂಕ್ ಆ್ಯಂಡ್ ಡ್ರೈವ್ ತಪಾಸಣೆ ನಡೆಸಿ ವಾಹನ ಜಪ್ತಿ ಮಾಡಲು ಪೊಲೀಸರು ನಿರ್ಧರಿಸಿದ್ದಾರೆ.

ವಿದೇಶದಲ್ಲಿ ಕರೊನಾ ಸೋಂಕು ಹೊಸ ರೂಪಾಂತರ ಪಡೆದಿದ್ದು, ಕಠಿಣ ನಿಬಂಧನೆಗಳ ನಡುವೆ ಹೊಸ ವರ್ಷಾಚರಣೆಗೆ ಅನುಮತಿ ನೀಡಲಾಗಿದೆ. ಕಡ್ಡಾಯವಾಗಿ ಪಾಲನೆ ಮಾಡಬೇಕು.

| ಕಮಲ್ ಪಂತ್ ನಗರ ಪೊಲೀಸ್ ಆಯುಕ್ತ

Bengaluru Edition
Dec 29, 2020 Page No. 2
Powered by : eReleGo.com

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

ಸುದ್ದಿ ಕಾರ್ನರ್

# ಸೋಂಕಿತರಿಗಿಂತ ದುಪ್ಪಟ್ಟು ಗುಣಮುಖ

**ಬೆಂಗಳೂರು:** ಬೆಂಗಳೂರಿನಲ್ಲಿ ಸೋಮವಾರ 309 ಹೊಸ ಸೋಂಕಿತರು ಪತ್ತೆಯಾಗಿದ್ದು, ಅದಕ್ಕಿಂತಲೂ ದುಪ್ಪಟ್ಟು ಅಂದರೆ 654 ಜನರು ಗುಣಮುಖರಾಗಿದ್ದಾರೆ. ಒಟ್ಟು ಕರೊನಾ ಸೋಂಕಿತರ ಸಂಖ್ಯೆ 3.86 ಲಕ್ಷ ಹಾಗೂ ಒಟ್ಟು ಗುಣಮುಖರಾದವರ ಸಂಖ್ಯೆ 3.74 ಲಕ್ಷ ಆಗಿದೆ. ವಿವಿಧ ಆಸ್ಪತ್ರೆ ಹಾಗೂ ಹೋಂ ಕ್ವಾರಂಟೈನ್‌ನಲ್ಲಿ 8,225 ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದು, ಈ ಪೈಕಿ 93 ಸೋಂಕಿತರು ಐಸಿಯುನಲ್ಲಿದ್ದಾರೆ.ಸೋಮವಾರ 6 ಸೋಂಕಿತರು ಮೃತಪಟ್ಟಿದ್ದಾರೆ. ಒಟ್ಟು ಮೃತರ ಸಂಖ್ಯೆ 4,304ಕ್ಕೆ ಏರಿದೆ.

» **ರಾಜಧಾನಿಯಲ್ಲಿ 309 ಹೊಸ ಪ್ರಕರಣ**

Bengaluru Edition
Dec 29, 2020 Page No. 2
Powered by : eReleGo.com

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

**ಶಾಸಕ ಮುನಿರತ್ನ ಭರವಸೆ** | **ಆರ್‌ಎಚ್‌ಸಿಎಸ್ ಲೇಔಟ್‌ನಲ್ಲಿ ಜನಸಂಪರ್ಕ ಸಭೆ**

# ಅಭಿವೃದ್ಧಿ ಕಾಮಗಾರಿಗಳ ಆರಂಭ ಶೀಘ್ರ

■ **ವಿಜಯವಾಣಿ ಸುದ್ದಿಜಾಲ** ಯಶವಂತಪುರ

ಹೊರವರ್ತುಲ ರಸ್ತೆಯ ಅಂಬೇಡ್ಕರ್ ಕಾಲೇಜು ಸಮೀಪ ಅಂಡರ್‌ಪಾಸ್ ನಿರ್ಮಾಣ, ಎಲ್ಲ ಅಡ್ಡರಸ್ತೆಗಳ ಅಭಿವೃದ್ಧಿ, ಸಿಮೆಂಟ್ ರಸ್ತೆ ಡಾಂಬರೀಕರಣ ಕಾಮಗಾರಿಗೆ ಶೀಘ್ರ ಚಾಲನೆ ನೀಡಲಾಗುವುದು ಎಂದು ಶಾಸಕ ಮುನಿರತ್ನ ತಿಳಿಸಿದ್ದಾರೆ.

ಜ್ಞಾನಭಾರತಿ ವಾರ್ಡ್‌ನ 'ಡಿ' ಗ್ರೂಪ್, ಆರ್‌ಎಚ್‌ಸಿಎಸ್ ಬಡಾವಣೆ ಯಲ್ಲಿ ಹಮ್ಮಿಕೊಂಡಿದ್ದ ಜನಸಂಪರ್ಕ ಸಭೆಯಲ್ಲಿ ಪಾಲ್ಗೊಂಡು ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಮಾತನಾಡಿದರು.

» **ಜನರ ಸಮಸ್ಯೆ ಆಲಿಸಲು ಪ್ರತಿವಾರ ಪಾದಯಾತ್ರೆ**

ವಾರ್ಡ್ ವ್ಯಾಪ್ತಿಯ ಅಂಬೇಡ್ಕರ್ ಕಾಲೇಜು ಬಳಿ ಮತ್ತು ಅನ್ನಪೂರ್ಣೇಶ್ವರಿನಗರ ಬಳಿ ಸಂಚಾರದಟ್ಟಣೆಯಿಂದ ನಾಗರಿಕರಿಗೆ ಅನಾನುಕೂಲವಾಗುತ್ತಿದ್ದು, ಎರಡು ಕಡೆ ಕೆಳರಸ್ತೆ ಕಾಮಗಾರಿಯನ್ನು ಕೈಗೆತ್ತಿಗೊಳ್ಳಲಾಗುವುದು. ವಾರ್ಡ್ ವ್ಯಾಪ್ತಿಯಲ್ಲಿ ಬೀದಿದೀಪಗಳಿಗೆ ಎಲ್ಇಡಿ ಲೈಟ್, ಎರಡು ಸ್ಥಳಗಳಲ್ಲಿ ಯೋಗ ಮತ್ತು ಧ್ಯಾನಕೇಂದ್ರ ಪ್ರಾರಂಭಿಸಲಾಗುವುದು ಎಂದರು.

ಪ್ರತಿ ಶನಿವಾರ ಮತ್ತು ಭಾನುವಾರ ಜನರ ಮನೆ ಬಳಿಗೆ ಹೋಗಿ ಅವರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲಿಯೇ ಪರಿಹಾರ ದೊರಕಿಸಿಕೊಡಲು ಪ್ರಯತ್ನಿಸಲಾಗುವುದು. ಈ ನಿಟ್ಟಿನಲ್ಲಿ ಪ್ರತಿ ವಾರ ಒಂದೊಂದು ವಾರ್ಡ್ ವ್ಯಾಪ್ತಿಯಲ್ಲಿ ಪಾದಯಾತ್ರೆ ನಡೆಸಲಾಗುವುದು ಎಂದು ಹೇಳಿದರು.

ಕ್ಷೇಮಾಭಿವೃದ್ಧಿ ಸಂಘಗಳ ಒಕ್ಕೂಟದ ಅಧ್ಯಕ್ಷ ಜಯರಾಮಯ್ಯ, ಬಿಜೆಪಿ ಮುಖಂಡ ಎಂ. ಮಂಜುನಾಥ್, ಪಿ. ಕಾಳೇಗೌಡ ಇತರರಿದ್ದರು.



ಜ್ಞಾನಭಾರತಿ ವಾರ್ಡ್‌ನ 'ಡಿ' ಗ್ರೂಪ್, ಆರ್‌ಎಚ್‌ಸಿಎಸ್ ಬಡಾವಣೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಜನಸಂಪರ್ಕ ಸಭೆಯಲ್ಲಿ ಶಾಸಕ ಮುನಿರತ್ನ ಸಭಿಕರನ್ನುದ್ದೇಶಿಸಿ ಮಾತನಾಡಿದರು.

Bengaluru Edition
Dec 29, 2020 Page No. 2
Powered by : eReleGo.com

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1
ಕನ್ನಡ ದಿನಪತ್ರಿಕೆ

# ನಾಲ್ಕು ರಸ್ತೆಗಳಲ್ಲಿ ಸ್ವಚ್ಛ ವಾಯು ಬೀದಿ

■ **ವಿಜಯವಾಣಿ ಸುದ್ದಿಜಾಲ** ಬೆಂಗಳೂರು

ವಾಯುಮಾಲಿನ್ಯ ನಿಯಂತ್ರಿಸುವುದಕ್ಕಾಗಿ ಚರ್ಚ್ ಸ್ಟ್ರೀಟ್‌ನಲ್ಲಿ ಜಾರಿಗೆ ತರಲಾಗಿರುವ 'ಸ್ವಚ್ಛ ವಾಯು ಬೀದಿ' (ಕ್ಲೀನ್ ಏರ್‌ಸ್ಟ್ರೀಟ್) ಮಾದರಿಯನ್ನು ಗಾಂಧಿ ಬಜಾರ್, ಅವೆನ್ಯೂ ರಸ್ತೆ, ಮಲ್ಲೇಶ್ವರ 8ನೇ ಅಡ್ಡರಸ್ತೆ ಹಾಗೂ ಜಯನಗರದ ರಸ್ತೆಯೊಂದರಲ್ಲೂ ಅನುಷ್ಠಾನಗೊಳಿಸಲು ನಗರ ಭೂಸಾರಿಗೆ ನಿರ್ದೇಶನಾಲಯ (ಡಲ್ಟ್) ಚಿಂತನೆ ನಡೆಸಿದೆ.

ಬಸವನಗುಡಿಯ ಗಾಂಧಿಬಜಾರ್ ಮತ್ತು ಮಲ್ಲೇಶ್ವರದಲ್ಲಿ ಯೋಜನೆ ಅನುಷ್ಠಾನ ಸಂಬಂಧ ಶೀಘ್ರದಲ್ಲೇ ಚರ್ಚೆ ಆರಂಭಿಸಲಾಗುತ್ತದೆ. ಉಳಿದೆರಡು ರಸ್ತೆಗಳಲ್ಲಿ ಸಾಧಕ-ಬಾಧಕಗಳ ಅಧ್ಯಯನ ಮಾಡಿ ನಂತರ ಸಭೆ ನಡೆಸಲಾಗುತ್ತದೆ.

**ಚರ್ಚ್‌ಸ್ಟ್ರೀಟ್‌ನಲ್ಲಿ ಅನುಷ್ಠಾನಗೊಳಿಸಿರುವ 'ಸ್ವಚ್ಛ ವಾಯು ಬೀದಿ' ಯೋಜನೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ವಾಯು, ಶಬ್ದಮಾಲಿನ್ಯಗಳು ಕಡಿಮೆಯಾಗಿವೆ. ಇನ್ನೂ ನಾಲ್ಕು ರಸ್ತೆಗಳಲ್ಲಿ ಯೋಜನೆ ಅನುಷ್ಠಾನಕ್ಕೆ ಪ್ರಸ್ತಾವನೆಯಿದ್ದು, ಆ ಬಗ್ಗೆ ಚರ್ಚಿಸಲಾಗುವುದು.**

| ವಿ. ಮಂಜುಳಾ 'ಡಲ್ಟ್' ಆಯುಕ್ತೆ

ವಾಹನಗಳ ದಟ್ಟಣೆಯಿರುವ ರಸ್ತೆಗಳಲ್ಲಿ ವಾರಾಂತ್ಯದ ದಿನಗಳಂದು ವಾಹನ ಸಂಚಾರಕ್ಕೆ ನಿಷೇಧ ಹೇರಿ 'ಸ್ವಚ್ಛ ವಾಯು ಬೀದಿ' ಪರಿಕಲ್ಪನೆ ಜಾರಿ ಮಾಡಲಾಗುತ್ತಿದೆ. ಚರ್ಚ್‌ಸ್ಟ್ರೀಟ್‌ನಲ್ಲಿ ಈಗಾಗಲೇ ಜಾರಿಯಾಗಿದ್ದು, ಫೆಬ್ರವರಿ ಅಂತ್ಯದವರೆಗೆ ವಾರಾಂತ್ಯ ಹಾಗೂ ಸರ್ಕಾರಿ ರಜಾದಿನಗಳಂದು ವಾಹನ ಸಂಚಾರ ನಿಷೇಧವಿರಲಿದೆ. ಇಲ್ಲಿ ಲಭಿಸಿದ ಯಶಸ್ಸಿನಿಂದ ಇನ್ನೂ ನಾಲ್ಕು ರಸ್ತೆಗಳಲ್ಲಿ ಅದೇ ಮಾದರಿಯನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ. ಆ ಕುರಿತು ಶೀಘ್ರದಲ್ಲಿ ಸ್ಥಳೀಯರು, ಬಿಬಿಎಂಪಿ, ಜನಪ್ರತಿನಿಧಿಗಳ ಅಭಿಪ್ರಾಯ ಸಂಗ್ರಹಿಸಲಿದೆ.

**ಇಡೀ ವರ್ಷಕ್ಕೆ ವಿಸ್ತರಣೆ:** ಚರ್ಚ್‌ಸ್ಟ್ರೀಟ್‌ನಲ್ಲಿನ 'ಸ್ವಚ್ಛ ವಾಯು ಬೀದಿ' ಯೋಜನೆಯನ್ನು ಫೆಬ್ರವರಿಗೆ ಅಂತ್ಯವಾಗಿಸದೇ, ಮತ್ತಷ್ಟು ತಿಂಗಳು ಮುಂದುವರಿಸಲು 'ಡಲ್ಟ್' ಚಿಂತಿಸಿದೆ. ಅದಕ್ಕಾಗಿ ಸ್ಥಳೀಯ ವ್ಯಾಪಾರಿಗಳೊಂದಿಗೆ ಚರ್ಚಿಸಲಿದೆ. ಅವರಿಂದ ಒಪ್ಪಿಗೆ ದೊರೆತರೆ, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ನಿರ್ಧಾರ ಮಾಡಲಾಗುತ್ತದೆ.

Bengaluru Edition
Dec 29, 2020 Page No. 3
Powered by : eReleGo.com

ವಿಶ್ವವಾಣಿ

## ರಸ್ತೆಗಳ ಸಮರ್ಪಕ ನಿರ್ವಹಣೆಗೆ ಟೆಂಡರ್ ಆಹ್ವಾನ

# ರಸ್ತೆ ಗುಂಡಿ ಮುಚ್ಚಲು ಗೌರವ್‌ಗುಪ್ತಾ ಸೂಚನೆ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ರಸ್ತೆ ಮೂಲಭೂತ ಸೌಕರ್ಯ ವಿಭಾಗದಿಂದ ವಾರ್ಷಿಕ ರಸ್ತೆ ನಿರ್ವಹಣೆ ಕುರಿತು ಆಡಳಿತಾಧಿಕಾರಿ ಗೌರವ್‌ಗುಪ್ತಾ ಪ್ರಗತಿಪರಿಶೀಲನಾ ಸಭೆ ನಡೆಸಿದರು.

ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಪ್ರಗತಿಯಲ್ಲಿದ್ದು, ಬಹುತೇಕ ಕಡೆ ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ. ಇನ್ನೂ ತ್ವರಿತವಾಗಿ ಗುಣಮಟ್ಟ ಮತ್ತು ಪ್ರಮಾಣ ಸರಿಯಾಗಿರುವಂತೆ ನೋಡಿಕೊಂಡು ನಿಗದಿತ ಸಮಯದಲ್ಲಿ ಗುಂಡಿಗಳನ್ನು ಮುಚ್ಚಲು ಕ್ರಮವಹಿಸಬೇಕು. ಡಾಂಬರು ಮಿಶ್ರಣ ಘಟಕ (ಹಟ್ ಮಿಕ್ಸ್ ಪ್ಲಾಂಟ್)ನಿಂದ ಎಲ್ಲಾ 8 ವಲಯಗಳಿಗೂ ಪ್ರತಿನಿತ್ಯ ಎರಡೆರಡು ಲೋಡ್‌ಗಳು ಕಳುಹಿಸಿ 10 ದಿನದೊಳಗೆ ಉಳಿದೆಲ್ಲಾ ಗುಂಡಿಗಳನ್ನು ಮುಚ್ಚಬೇಕು ಎಂದು ಸೂಚನೆ ನೀಡಿದರು.

ಬೀದಿ ದೀಪಗಳ ನಿರ್ವಹಣೆ ಕಾರ್ಯ ಅಪೇಕ್ಷಿತ ಮಟ್ಟದಲ್ಲಿ ನಿರ್ವಹಣೆಯಾಗದೇ ಇರುವುದರಿಂದ ಟೆಂಡರ್ ಪ್ರಕ್ರಿಯೆಗೆ ವೇಗ ನೀಡಿ ಬೀದಿ ದೀಪಗಳ ನಿರ್ವಹಣೆಗೆ ತ್ವರಿತವಾಗಿ ಕಾರ್ಯಾದೇಶ ನೀಡಬೇಕು. ಜತೆಗೆ ಬೀದಿ ದೀಪ ಅಳವಡಿಸುವ ಸಂಬಂಧ ಆಯಾ ವಲಯ ಮುಖ್ಯ ಅಭಿಯಂತರರುಗಳು ಆ ಬಗ್ಗೆ ಹೆಚ್ಚು ಗಮನವರಿಸಬೇಕು ಹಾಗೂ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಯಾಂತ್ರಿಕ ಕಸ ಗುಡಿಸುವ ಯಂತ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಲು ಹಾಗೂ ಆರ್ಟಿರಿಯಲ್ ಹಾಗೂ ಸಬ್ ಆರ್ಟಿರಿಯಲ್ ರಸ್ತೆಗಳ ಪೈಕಿ ಯಾವ ಯಾವ ರಸ್ತೆಗಳಲ್ಲಿ ಯಾಂತ್ರಿಕ ಕಸ ಗುಡಿಸುವ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ಎಂಬುದನ್ನು ಪಟ್ಟಿ ಮಾಡಿ ಪ್ರತಿ ನಿತ್ಯ ಎಷ್ಟು ಕಿ.ಮೀ ಕಸ ಗುಡಿಸುತ್ತಿವೆ ಎಂಬ ವರದಿಯನ್ನು ತಯಾರಿಸಬೇಕು ಎಂದು ಸೂಚನೆ ನೀಡಿದರು.

ಪ್ರಮುಖ ಆರ್ಟಿರಿಯಲ್ ರಸ್ತೆಗಳಲ್ಲಿ ಕರ್ಬ್ ಸ್ಟೋನ್‌ಗಳಿಗೆ ಬಣ್ಣ ಬಳಿಯುವ ಹಾಗೂ ಲೈನ್ ಮಾರ್ಕಿಂಗ್ ಮಾಡುವ ಸಂಬಂಧ ಯೋಜನೆಯನ್ನು ರೂಪಿಸಿ ಕೆಲಸ ಮಾಡಲು ಸೂಕ್ತ ಕ್ರಮ ವಹಿಸಬೇಕು ಎಂದು ಆಡಳಿತಾದಿಕಾರಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರು ಎಂ.ಆರ್.ವೆಂಕಟೇಶ್, ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಮುಖ್ಯ ಅಭಿಯಂತರ ಪ್ರಹ್ಲಾದ್, ಯೋಜನಾ ವಿಭಾಗದ ಮುಖ್ಯ ಅಭಿಯಂತರ ರಮೇಶ್ ಇದ್ದರು.

ವಿಶ್ವವಾಣಿ

# ವಾಯು ಗುಣಮಟ್ಟ ಕುಸಿತ: 20 ನಗರ ಡೇಂಜರ್

**ಬೆಂಗಳೂರು:** ಸಿಲಿಕಾನ್ ಸಿಟಿ ಎಷ್ಟು ಸುರಕ್ಷಿತ ಎನ್ನುವುದು ಪ್ರಶ್ನೆ ಇದೀಗ ಎದುರಾಗಿದೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಒಂದು ವರದಿ ಈ ಪ್ರಶ್ನೆ ಮತ್ತು ಆತಂಕವನ್ನು ಸೃಷ್ಟಿಸಿದೆ. ಬೆಂಗಳೂರಿನ ವಾಯು ಗುಣಮಟ್ಟದಲ್ಲಿ ಕುಸಿತ ಕಂಡಿದೆ. ಬೆಂಗಳೂರಿನ 20 ಪ್ರದೇಶಗಳು ಡೇಂಜರ್ ಜೋನ್‌ನಲ್ಲಿವೆ ಎಂಬ ಸಂಗತಿಗಳು 2019-20 ರ ವಾರ್ಷಿಕ ವರದಿಯಲ್ಲಿ ಬಯಲಾಗಿವೆ.

ಗಾಳಿಯಲ್ಲಿ ಮಾಲಿನ್ಯಕಾರಕ ವಸ್ತುಗಳು ಹೆಚ್ಚಾಗಿರುವುದು ಗುಣಮಟ್ಟ ಕುಸಿಯೋದಕ್ಕೆ ಪ್ರಮುಖ ಕಾರಣ. ವಾತಾವರಣದಲ್ಲಿರುವ ಗಂಧಕದ ಡೈಆಕ್ಸೈಡ್, ನೈಟ್ರೇಟ್‌ಗಳು, ಮಾಲಿನ್ಯಕಾರಕ ಕಣಗಳು, ಅಮೋನಿಯಾ, ಹಾಗೂ ಸೀಸದ ಪ್ರಮಾಣದ ಆಧಾರದಲ್ಲಿ ಗುಣಮಟ್ಟ ಸೂಚ್ಯಂಕವನ್ನು ನಿರ್ಧರಿಸಲಾಗುತ್ತದೆ. ಆದರೆ ಮಾಲಿನ್ಯಕಾರಕ ಕಣಗಳು ಅಂದರೆ, ವಾಹನಗಳ ಹೊಗೆ, ಕಾಮಗಾರಿಗಳಿಂದ ಉಂಟಾಗುವ ಧೂಳು ಹಾಗೂ ಇತರೆ ಮಾದರಿಯ ಧೂಳು



ಹೆಚ್ಚಾಗಿದೆ. ಇದು ಹಲವು ರೋಗಗಳಿಗೆ ಆದಿ ಆಡಲಿದೆ. ಆದರಲ್ಲೂ ಮುಖ್ಯವಾಗಿ ಶ್ವಾಸಕೋಶ ಸಂಬಂಧಿ ರೋಗಿಗಳಿಗೆ ಹೆಚ್ಚಿನ ಸಮಸ್ಯೆ, ಹೃದಯ ಸಂಬಂಧಿ ಕಾಯಿಲೆಯವರಿಗೆ ಮತ್ತಷ್ಟು ತೊಂದರೆ, ಮಕ್ಕಳಿಗೆ ಉಸಿರಾಟದ ಸಮಸ್ಯೆ ಉಂಟಾಗುವ ಸಾಧ್ಯತೆ, ಚರ್ಮಕ್ಕೆ ಸಂಬಂಧಿಸಿದ ಖಾಯಿಲೆ ಹೆಚ್ಚಾಗುವುದು, ಮುಖದ ಕಾಂತಿ ಕಳೆದುಕೊಳ್ಳುವುದು ಹೀಗೆ ಹಲವು ಬಗೆಯ ಸಮಸ್ಯೆಗಳು ಬೆಂಗಳೂರು ಮಂದಿ ಎದುರಿಸಬೇಕಾಗುತ್ತದೆ. ಬೆಂಗಳೂರಿನ ಈ ಆತಂಕಕಾರಿ ಪರಿಸ್ಥಿತಿಯಿಂದ ಹೊರಬರಲು ಸರಕಾರದ ಪ್ರಯತ್ನಕ್ಕೆ ಸಾರ್ವಜನಿಕರೂ ಕೈಜೋಡಿಸುವ ಅಗತ್ಯತೆ ಇದೆ. ನಗರದಲ್ಲಿ ಜನಸಂಖ್ಯೆಯಷ್ಟೇ ಮಿತಿ ಮೀರಿದ

## ಟಾಪ್ 10 ಏರಿಯಾಗಳು

ವೈಟ್ ಫೀಲ್ಡ್ ಕೈಗಾರಿಕಾ ಪ್ರದೇಶ
ಯಲಹಂಕ - ರೈಲ್ ವೀಲ್ ಫ್ಯಾಕ್ಟರಿ
ಸೆಂಟ್ರಲ್ ಸಿಲ್ಕ್ ಬೋರ್ಡ್
ಹೊಸೂರು ರಸ್ತೆ
ಪೀಣ್ಯ ಕೈಗಾರಿಕಾ ಪ್ರದೇಶ
ನಗರ ರೈಲು ನಿಲ್ದಾಣ - ಮೆಜೆಸ್ಟಿಕ್
ದೊಮ್ಮಲೂರು ಮೈಸೂರು ರಸ್ತೆ
ಯುವಿಸಿಇ - ಕೆ.ಆರ್ ಸರ್ಕಲ್
ವಿಕ್ಟೋರಿಯಾ ಆಸ್ಪತ್ರೆ - ಕೆಆರ್ ಮಾರುಕಟ್ಟೆ

ಸಂಖ್ಯೆಯಲ್ಲಿ ವಾಹನಗಳಿವೆ. ಸಾಧ್ಯವಾದಷ್ಟೂ ಜನರು ತಮ್ಮ ಸ್ವಂತ ವಾಹನ ಬಳಕೆ ಬಿಟ್ಟು ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಉಪಯೋಗಿಸುವುದೂ ಜವಾಬ್ದಾರಿಯುತ ನಾಗರಿಕರ ಕರ್ತವ್ಯವಾಗಿದೆ.

ವಿಶ್ವವಾಣಿ





ಕಠಿಣ ನಿಯಮವನ್ನು ಜಾರಿಗೊಳಿಸಿದ ಸರಕಾರ

| ಡಿ.31ರ ಸಂಜೆ 6 ಗಂಟೆಯಿಂದ ಜ.1ರ ಬೆಳಗ್ಗೆ 6ರ ತನಕ ನಿಷೇಧಾಜ್ಞೆ |

ವಿಶೇಷ ಡಿಜೆಗೆ ನಿರ್ಬಂಧ, ನಿಯಮ ಮೀರಿದರೆ ಕಠಿಣ ಕ್ರಮ

# ರಾಜಧಾನಿಯಲ್ಲಿ ಹೊಸ ವರ್ಷದ ಪಾರ್ಟಿಗೆ 144

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ನಿರೀಕ್ಷೆಯಂತೆ ರಾಜಧಾನಿ ಬೆಂಗಳೂರಿನಲ್ಲಿ ನೂತನ ವರ್ಷ ಸಂಭ್ರಮಾಚರಣೆಗೆ ಬ್ರೇಕ್ ಹಾಕಿದ್ದು, ಡಿ.31ರ ಸಂಜೆಯಿಂದ ಜ.1ರ ಬೆಳಗ್ಗೆ ತನಕ ನಿಷೇಧಾಜ್ಞೆ ಹೇರಿ ಆದೇಶ ಹೊರಡಿಸಲಾಗಿದೆ.

ಈ ಬಗ್ಗೆ ಸೋಮವಾರ ಸಂಜೆ ಮಾರ್ಗಸೂಚಿಯನ್ನು ಪ್ರಕಟಗೊಳಿಸಿರುವ ರಾಜ್ಯ ಸರಕಾರ, ಯಾವುದೇ ಕಾರಣಕ್ಕೂ ನಿಯಮ ಮೀರದಂತೆ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಡಿ. 31ರ ಸಂಜೆ 6 ಗಂಟೆಯಿಂದ ಜ.1ರ ಬೆಳಗ್ಗೆ ಆರು ಗಂಟೆವರೆಗೆ ಸೆಕ್ಷನ್ 144 ಜಾರಿಯಲ್ಲಿರಲಿದೆ. ರಾಜಧಾನಿಯಲ್ಲಿ ಸಾರ್ವಜನಿಕ ಸ್ಥಳದಲ್ಲಿ ಯಾವುದೇ ಸಂಭ್ರಮಾಚರಣೆಗೆ ಅವಕಾಶ ಇರುವುದಿಲ್ಲ, ಇಡೀ ಬೆಂಗಳೂರು ಕಣ್ಗಾವಲಿನಲ್ಲಿ ಇರಲಿದ್ದು, 10 ಸಾವಿರ ಪೊಲೀಸರನ್ನು ನಿಯೋಜನೆ ಮಾಡಲಾಗಲಿದೆ.

ನಗರದ ಕೆಲವೆಡೆ ವಿಶೇಷ ನಿಗಾ ಇಡಲಾಗಿದ್ದು, ಎಂಜಿ ರಸ್ತೆ, ಕಮರ್ಷಿಯಲ್ ಸ್ಟ್ರೀಟ್, ಚರ್ಚ್ ಸ್ಟ್ರೀಟ್, ಕೋರಮಂಗಲ, ಇಂದಿರಾನಗರಗಳಲ್ಲಿ ಹೆಚ್ಚಿನ ಬಂದೋಬಸ್ತ್ ಮಾಡಲಾಗುವುದು. ಈ ಏರಿಯಾಗಳಲ್ಲಿ ಕೂಪನ್ ಬುಕ್ಕಿಂಗ್ ಕಡ್ಡಾಯವಾಗಿದೆ. ಸಂಭ್ರಮಾಚರಣೆ ವೇಳೆ ವಿಶೇಷ ಡಿಜೆಗೆ ನಿರ್ಬಂಧ ಹಾಕಲಾಗಿದ್ದು, ನಿಯಮ ಮೀರಿದರೆ ಮಾಲೀಕರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಕಮಲ್‌ಪಂತ್ ಎಚ್ಚರಿಕೆ ನೀಡಿದ್ದಾರೆ.

**ಅನವಶ್ಯಕ ಸಂಚಾರಕ್ಕೆ ಅವಕಾಶವಿಲ್ಲ:** ಈ ಬಗ್ಗೆ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬೆಂಗಳೂರು ಪೊಲೀಸ್ ಆಯುಕ್ತ ಕಮಲ್ ಪಂತ್, ಮಾಲ್‌ಗಳು, ಹೋಟೆಲ್, ಕ್ಲಬ್, ಪಬ್‌ಗಳಲ್ಲಿ ಕರೋನಾ ಮಾರ್ಗಸೂಚಿ ಪಾಲನೆ ಕಡ್ಡಾಯವಾಗಿದೆ. ಜ.31ರ ರಾತ್ರಿ ಅನವಶ್ಯಕ ಸಂಚಾರಕ್ಕೆ ಯಾವುದೇ ಅವಕಾಶವಿಲ್ಲ. ವ್ಹೀಲಿಂಗ್, ಡ್ರ್ಯಾಗ್ ರೇಸ್‌ಗೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ನಿಯಮ ಮೀರಿ ಸಂಚಾರ ಮಾಡಿದರೆ, ವಾಹನ ಜಪ್ತಿ ಮಾಡಲಾಗುವುದು. ಯಾವುದೇ ಸಾರ್ವಜನಿಕ ಸ್ಥಳ ರಸ್ತೆ, ಪಾರ್ಕ್ ಬಳಿ ಯಾವುದೇ ಸಂಭ್ರಮಾಚರಣೆ ನಡೆಸಲು ಅವಕಾಶ ನೀಡಲಾಗಿಲ್ಲ, ಡಿಜೆ ಹಾಗೂ ಯಾವುದೇ ಸಂಗೀತ ಕಾರ್ಯಕ್ರಮಗಳಿಗೆ ಅವಕಾಶ ನೀಡಲಾಗುವುದಿಲ್ಲ, ಆದರೆ, ಅಪಾರ್ಟ್‌ಮೆಂಟ್ ಕಾಂಪ್ಲೆಕ್ಸ್, ಖಾಸಗಿ ಕ್ಲಬ್‌ಗಳಲ್ಲಿ ಕಾರ್ಯಕ್ರಮಕ್ಕೆ ಅವಕಾಶ ಇದೆ ಎಂದು ಸ್ಪಷ್ಟಪಡಿಸಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಕೋವಿಡ್ ಹೆಚ್ಚುತ್ತಿರುವ ಹಿನ್ನೆಲೆ ಜನರ ಆರೋಗ್ಯ ದೃಷ್ಟಿಯಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಯಾವುದಕ್ಕೆ ನಿರ್ಬಂಧ ವಿಧಿಸಲಾಗಿದೆ?

- ಐದು ಅಥವಾ ಐದಕ್ಕಿಂತ ಹೆಚ್ಚು ಜನರು ಸೇರುವುದು ಮತ್ತು ಸಾರ್ವಜನಿಕ ರಸ್ತೆಯಲ್ಲಿ ಹೊಸ ವರ್ಷಾಚರಣೆ ನಡೆಸುವುದಕ್ಕೆ ನಿರ್ಬಂಧ.
- ಸಾರ್ವಜನಿಕ ಸ್ಥಳ, ರಸ್ತೆ ಅಥವಾ ಖಾಲಿ ಸ್ಥಳಗಳಲ್ಲಿ ಹೊಸ ವರ್ಷಾಚರಣೆಗೆ ಜನರು ಒಂದೆಡೆ ಸೇರುವಂತಿಲ್ಲ.
- ಹೊಸ ವರ್ಷಾಚರಣೆಗೆಂದು ತೆರೆದ ಜಾಗಗಳು, ಪಾರ್ಕ್, ಮೈದಾನಗಳಲ್ಲಿ ಹೆಚ್ಚಿನ ಜನರು ಸೇರುವಂತಿಲ್ಲ.
- ವಸತಿ ಸಂಕೀರ್ಣಗಳಲ್ಲಿ ನಿವಾಸಿಗಳಿಗೆ ಮತ್ತು ಖಾಸಗಿ ಕ್ಲಬ್‌ಗಳಲ್ಲಿ ತಮ್ಮ ಸದಸ್ಯರು ಸಂಭ್ರಮಾಚರಣೆ ನಡೆಸಲು ಅಡ್ಡಿಯಿಲ್ಲ. ಆದರೆ ಯಾವುದೇ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತಿಲ್ಲ.
- ಹೋಟೆಲ್, ಮಾಲ್, ರೆಸ್ಟೋರೆಂಟ್, ಕ್ಲಬ್, ಪಬ್, ಕ್ಲಬ್ ಹೌಸ್‌ಗಳು ಹೊಸ ವರ್ಷಾಚರಣೆ ಕಾರ್ಯಕ್ರಮದಲ್ಲಿ ಡಿಜೆ, ಕಾರ್ಯಕ್ರಮಗಳು, ಸಂಗೀತ, ನೃತ್ಯ ಸೇರಿದಂತೆ ಯಾವುದೇ ರೀತಿಯ ವಿಶೇಷ ಪ್ರದರ್ಶನ ಹಮ್ಮಿಕೊಳ್ಳುವಂತಿಲ್ಲ. ಆದರೆ ಎಂದಿನಂತೆ ವ್ಯವಹಾರಗಳನ್ನು ಮುಂದುವರಿಸಲು ಅಡ್ಡಿಯಿಲ್ಲ.
- ಯಾವುದೇ ಸಂಸ್ಥೆಗಳು ಮುಂಗಡ ಬುಕ್ಕಿಂಗ್ ಮಾಡಿರುವ ಅತಿಥಿಗಳಿಗೆ ಮಾತ್ರ ಆಗಮನಕ್ಕೆ ಅವಕಾಶ. ಇದಕ್ಕೆ ಬುಕ್ಕಿಂಗ್‌ನ ಖಾತರಿ ನೀಡಬೇಕು.
- ಸೂಚಿಸಲಾದ ಪ್ರದೇಶಗಳಲ್ಲಿ ಮುಂಗಡ ಬುಕ್ಕಿಂಗ್, ಅತಿಥಿಗಳ ಓಡಾಟದ ಮೇಲೆ ಉಪ ಪೊಲೀಸ್ ಆಯುಕ್ತರು ಕಣ್ಣಿಡಲಿದ್ದಾರೆ.
- ಯಾವುದೇ ಸಂಸ್ಥೆಗಳ ಹೊರಗೆ ಜನಸಂದಣಿ ಇರುವಂತಿಲ್ಲ. ಒಳಗೆ ಪ್ರವೇಶಿಸಲು ಜನರು ಹೊರಗೆ ಕಾಯುತ್ತಾ ಕೂರುವಂತಿಲ್ಲ.
- ಜನರ ಸುರಕ್ಷತೆಗೆ ಸರಕಾರ ಹೊರಡಿಸಿರುವ ಮಾರ್ಗಸೂಚಿಗಳನ್ನು ಎಲ್ಲಾ ಮಾಲ್, ಹೋಟೆಲ್, ರೆಸ್ಟೋರೆಂಟ್, ಪಬ್‌ಗಳು ಕಡ್ಡಾಯವಾಗಿ ಪಾಲಿಸಲೇಬೇಕು.
- ಹೊಸ ವರ್ಷಾಚರಣೆ ಹಿನ್ನೆಲೆಯಲ್ಲಿ ಸಂಚಾರ ನಿರ್ಬಂಧಗಳು ಪ್ರತ್ಯೇಕವಾಗಿ ಬಿಡುಗಡೆ ಮಾಡಲಾಗುವುದು. ಇದನ್ನೂ ಕಡ್ಡಾಯವಾಗಿ ಪಾಲಿಸಬೇಕು.

> ರೂಪಾಂತರಿ ಕರೋನಾ ಕಾಲಿಟ್ಟಿರುವುದರಿಂದ ಇನ್ನಷ್ಟು ಎಚ್ಚರವಹಿಸಬೇಕಾಗಿದೆ. ಆದ್ದರಿಂದ ಈ ವರ್ಷ ಯಾರೂ ಸಂಭ್ರಮದ ವರ್ಷಾಚರಣೆಗೆ ನಿಯಂತ್ರಣ ಹೇರಲಾಗಿದೆ. ಆದ್ದರಿಂದ ಸಾರ್ವಜನಿಕರು ಸರಕಾರದ ನಿಯಮವನ್ನು ಪಾಲಿಸಬೇಕು. ಒಂದು ವೇಳೆ ನಿಯಮವನ್ನು ಉಲ್ಲಂಘಿಸಿದರೆ, ಕಠಿಣ ಕ್ರಮ ಅನಿವಾರ್ಯ.
>
> **- ಕಮಲ್ ಪಂತ್**
>
> ಬೆಂಗಳೂರು ಪೊಲೀಸ್ ಆಯುಕ್ತ

ವಿಶ್ವವಾಣಿ

## ರೂಪಾಂತರಿ ವೈರಸ್ ಬಗ್ಗೆ ಆತಂಕ ಹೆಚ್ಚಿಸುವ ಬೆಳವಣಿಗೆಗಳು ಕರ್ನಾಟಕದಲ್ಲಿ। ಯುಕೆಯಿಂದ ಬಂದವರಲ್ಲಿ ಮತ್ತೆ ಒಬ್ಬರಲ್ಲಿ ಸೋಂಕು

# 14 ಸೋಂಕಿತರಲ್ಲಿ ಯಾರಿಗೆ ಹೊಸ ರೂಪದ ಕರೋನಾ?

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಬ್ರಿಟನ್‌ನಲ್ಲಿ ಕಾಣಿಸಿಕೊಂಡಿರುವ ಕರೋನಾ ವೈರಾಣುವಿನ ಹೊಸ ಪ್ರಭೇದದ ಬಗ್ಗೆಯೆ ವ್ಯಾಪಕ ಚರ್ಚೆ ನಡೆಯುತ್ತಿದೆ. ಇದರ ನಡುವೆ ಬ್ರಿಟನ್ ರೂಪಾಂತರಿ ವೈರಸ್ ಬಗ್ಗೆ ಆತಂಕ ಹೆಚ್ಚಿಸುವ ಬೆಳವಣಿಗೆಗಳು ಕರ್ನಾಟಕದಲ್ಲಿ ನಡೆದಿದೆ. 14 ಸೋಂಕಿತರಲ್ಲಿ ಯಾರಿಗೆ ರೂಪಾಂತರಿ ಕರೋನಾ ತಗುಲಿದೆ ಎಂಬುದು ಮಂಗಳವಾರ ಐಸಿಎಂಆರ್ ವರದಿ ಬಿಡುಗಡೆ ಮಾಡಲಿದೆ.



ಯುಕೆಯಿಂದ ರಾಜ್ಯಕ್ಕೆ ಬಂದವರಲ್ಲಿ ಮತ್ತೆ ಒಬ್ಬರಲ್ಲಿ ಸೋಂಕು ಕಾಣಿಸಿಕೊಂಡಿದ್ದು, ಅಲ್ಲಿಂದ ವಾಪಸ್ ಬಂದವರಲ್ಲಿ ಈವರೆಗೂ 27 ಮಂದಿಯಲ್ಲಿ ಕರೋನಾ ಸೋಂಕು ದೃಢಪಟ್ಟಿದೆ. ಸೋಮವಾರ 179 ಮಂದಿಯನ್ನು ಆರ್‌ಟಿಪಿಸಿಆರ್ ಪರೀಕ್ಷೆಗೆ ಒಳಪಡಿಸಲಾಗಿದ್ದು, 120 ಮಂದಿಯ ವರದಿ ನೆಗೆಟಿವ್ ಬಂದಿದೆ. ಇನ್ನೂ 58 ಮಂದಿಯ ವರದಿಗಾಗಿ ಕಾಯಲಾಗುತ್ತಿದೆ.

ಈವರೆಗೂ 1,766 ಮಂದಿಗೆ ಕರೋನಾ ಪರೀಕ್ಷೆ ನಡೆಸಲಾಗಿದೆ. ಈ ಪೈಕಿ 27 ಮಂದಿಗೆ ಸೋಂಕು ಕಾಣಿಸಿಕೊಂಡಿದ್ದು, ಎಲ್ಲರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಉಳಿದಂತೆ 1,384 ಮಂದಿಯ ಪರೀಕ್ಷಾ ವರದಿ ನೆಗೆಟಿವ್ ಬಂದಿದ್ದು, 355 ಮಂದಿಯ ವರದಿ ಬಾಕಿ ಇದ್ದು, ಎಲ್ಲರನ್ನೂ ಕ್ವಾರಂಟೈನ್‌ಗೆ ಒಳಪಡಿಸಲಾಗಿದೆ.

**ಬ್ರಿಟನ್ ಪ್ರಯಾಣಿಕರಲ್ಲಿ ಸೋಂಕಿತರ ಸಂಖ್ಯೆ 27ಕ್ಕೆ ಏರಿಕೆ:** ಬ್ರಿಟನ್‌ನಿಂದ ಬೆಂಗಳೂರಿಗೆ ಬಂದಿದ್ದ ಇಬ್ಬರು ವ್ಯಕ್ತಿಗಳಲ್ಲಿ ಕರೋನಾ ಸೋಂಕು ಇರುವುದು ಬೆಳಕಿಗೆ ಬಂದಿದೆ. ಇಬ್ಬರ ರೂಪಾಂತರಿ ಕರೋನಾ ಸೋಂಕು ಪತ್ತೆ ಕಾರ್ಯ ನಡೆಯುತ್ತಿದೆ. ಬೆಂಗಳೂರು ದಕ್ಷಿಣ ವಲಯದಲ್ಲಿ ಪಾಸಿಟಿವ್ ಪತ್ತೆಯಾಗಿದೆ.

ಒಂದು ವಾರದ ಹಿಂದೆ ಬೆಂಗಳೂರಿಗೆ ಬಂದಿದ್ದರು. ರಾಜ್ಯದಲ್ಲಿ ಭಾನುವಾರದವರೆಗೂ 15 ಕೇಸ್ ಪಾಸಿಟಿವ್ ಇತ್ತು. ಎರಡು ದಿನಗಳಲ್ಲಿ 12ಕೇಸ್ ದಾಖಲಾಗಿದೆ. ಬ್ರಿಟನ್‌ನಿಂದ ರಾಜ್ಯಕ್ಕೆ ಬಂದವರಲ್ಲಿ ಒಟ್ಟು 27 ಕೇಸ್ ಪತ್ತೆಯಾಗಿದೆ. ಪ್ರಾಥಮಿಕ ಸಂಪರ್ಕದಲ್ಲಿ ಇದ್ದ ಮಹಿಳೆಗೆ ಪಾಸಿಟಿವ್ ಆಗಿದ್ದು, ಬ್ರಿಟನ್‌ನಿಂದ ಬಂದ ವ್ಯಕ್ತಿಯ ಜತೆ ಪ್ರಾಥಮಿಕ ಸಂಪರ್ಕದಲ್ಲಿದ್ದರು.

ಉದಯವಾಣಿ
ಜನಮನದ ಜೀವನಾಡಿ

# ರಸ್ತೆಗುಂಡಿ ಮುಚ್ಚಲು ಹೊಸ ಡೆಡ್‌ಲೈನ್

**ಬೆಂಗಳೂರು:** ಮುಂದಿನ ಹತ್ತು ದಿನಗಳ ಒಳಗಾಗಿ ನಗರದಲ್ಲಿರುವ ರಸ್ತೆಗುಂಡಿಗಳನ್ನು ಮುಚ್ಚಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್‌ಗುಪ್ತ ಅವರು ಪಾಲಿಕೆಯ ಅಧಿಕಾರಿಗಳಿಗೆ ಹೊಸ ಡೆಡ್‌ಲೈನ್ ನೀಡಿದ್ದಾರೆ.

ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆಗುಂಡಿ, ಬೀದಿದೀಪ ಅಳವಡಿಕೆ, ಯಾಂತ್ರಿಕ ಕಸ ಗುಡಿಸುವ ಯಂತ್ರ ಹಾಗೂ ವಾರ್ಷಿಕ ರಸ್ತೆ ನಿರ್ವಹಣೆ ಸೇರಿದಂತೆ ಮತ್ತಿತರ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯನ್ನು ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಸೋಮವಾರ ನಡೆಸಿದರು.



ಈ ವೇಳೆ ಅಧಿಕಾರಿಗಳೊಂದಿಗೆ ಮಾತನಾಡಿದ ಅವರು, ನಗರದಲ್ಲಿ ರಸ್ತೆಗುಂಡಿ ಮುಚ್ಚುವ ಪ್ರಕ್ರಿಯೆಗೆ ವೇಗ ನೀಡಬೇಕು. ಕೂಡಲೇ ಡಾಂಬರು ಮಿಶ್ರಣ ಘಟಕ(ಹಟ್ ಮಿಕ್ಸ್ ಪ್ಲಾಂಟ್)ನಿಂದ ಎಲ್ಲ 8 ವಲಯಗಳಿಗೂ ಪ್ರತಿ ನಿತ್ಯ ಎರಡು ಲೋಡ್‌ಗಳಷ್ಟು ಡಾಂಬರು ಕಳುಹಿಸಿ, 10 ದಿನದ ಒಳಗಾಗಿ ರಸ್ತೆಗುಂಡಿ ಮುಚ್ಚಬೇಕು ಎಂದು ಎಲ್ಲ ವಲಯದ ಮುಖ್ಯ ಎಂಜಿನಿಯರ್‌ಗಳಿಗೆ ನಿರ್ದೇಶನ ನೀಡಿದರು.

**ವಾರ್ಷಿಕ ರಸ್ತೆ ನಿರ್ವಹಣೆ:** ಪಾಲಿಕೆ ವ್ಯಾಪ್ತಿಯ ಆರ್ಟೀರಿಯಲ್ ಹಾಗೂ ಸಬ್ ಆರ್ಟೀರಿಯಲ್ ರಸ್ತೆಗಳ ಸಮರ್ಪಕ ನಿರ್ವಹಣೆಗಾಗಿ ಟೆಂಡರ್ ಆಹ್ವಾನಿಸಲಾಗಿದೆ. ಇದರ ನಿರ್ವಹಣೆ ಕಾರ್ಯವನ್ನು ಪ್ರಾರಂಭಿಸಲು ಸೂಚನೆ ನೀಡಿದರು. ಇದೇ ವೇಳೆ ಪ್ರಮುಖ ರಸ್ತೆಗಳಲ್ಲಿನ ಕಲ್ಲುಗಳಿಗೆ ಬಣ್ಣ ಬಳಿಯುವ ಹಾಗೂ ಲೈನ್ ಮಾರ್ಕಿಂಗ್‌ಗೆ ಕ್ರಮ ವಹಿಸಲು ಸೂಚನೆ ನೀಡಿದರು.

ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಎಂ.ಆರ್. ವೆಂಕಟೇಶ್, ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಮುಖ್ಯ ಎಂಜಿನಿಯರ್ ಪ್ರಹ್ಲಾದ್ ಹಾಗೂ ಯೋಜನಾ ವಿಭಾಗದ ಮುಖ್ಯ ಎಂಜಿನಿಯರ್ ರಮೇಶ್ ಸೇರಿದಂತೆ ಇತರರಿದ್ದರು.

## ಪ್ರಮುಖ ನಿರ್ದೇಶನಗಳು

- ಬೀದಿ ದೀಪಗಳ ಅಳವಡಿಕೆ ನಿರ್ವಹಣೆ ನಿರೀಕ್ಷಿತ ಮಟ್ಟದಲ್ಲಿ ಆಗುತ್ತಿಲ್ಲ. ಹೀಗಾಗಿ, ಟೆಂಡರ್ ಪ್ರಕ್ರಿಯೆಗೆ ವೇಗ ನೀಡಿ.
- ಯಾಂತ್ರಿಕ ಕಸ ಗುಡಿಸುವ ಯಂತ್ರದ ಸಮರ್ಪಕವಾಗಿ ಕಾರ್ಯನಿರ್ವಹಿಸಲು ಹಾಗೂ ಅದರ ಮೇಲೆ ಕಾರ್ಯಪಾಲಕ ಅಭಿಯಂತರರು( ರಸ್ತೆ ಮೂಲಭೂತ ಸೌಕರ್ಯ) ರವರು ನಿಗಾವಹಿಸಲು ಸೂಚನೆ. ನಗರದ ಪ್ರಮುಖ, ಆರ್ಟೀರಿಯಲ್ ಹಾಗೂ ಸಬ್ ಆರ್ಟೀರಿಯಲ್ ರಸ್ತೆಗಳ ಪೈಕಿ ಯಾವ ಯಾವ ರಸ್ತೆಗಳಲ್ಲಿ ಯಾಂತ್ರಿಕ ಕಸ ಗುಡಿಸುವ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ಎಂಬುದನ್ನು ಪಟ್ಟಿ ಮಾಡಿ ಪ್ರತಿ ನಿತ್ಯ ಎಷ್ಟು ಕಿ.ಮೀ ಕಸ ಗುಡಿಸುತ್ತಿವೆ ಎಂಬ ವರದಿ ನೀಡಲು ಸೂಚನೆ.

ಉದಯವಾಣಿ
ಜನಮನದ ಜೀವನಾಡಿ

# ಬ್ರಿಟನ್‌ನಿಂದ ಬಂದ 16 ಮಂದಿಗೆ ಸೋಂಕು

**ಬೆಂಗಳೂರು:** ಬ್ರಿಟನ್‌ನಿಂದ ನಗರಕ್ಕೆ ಬಂದವರಲ್ಲಿ ಕೊರೊನಾ ದೃಢಪಡುವುದು ಮುಂದುವರಿದಿದ್ದು, ಸೋಮವಾರ ಮತ್ತೊಬ್ಬರಿಗೆ ಕೊರೊನಾ ಸೋಂಕು ದೃಢಪಟ್ಟಿದೆ. ಈ ಮೂಲಕ ಒಟ್ಟು ಸೋಂಕಿತರ ಸಂಖ್ಯೆ 16ಕ್ಕೆ ಏರಿಕೆಯಾದಂತಾಗಿದೆ. ಬ್ರಿಟನ್‌ನಿಂದ ಇಲ್ಲಿಯವರೆಗೆ ಒಟ್ಟು 2,376 ಜನ ಬಂದಿದ್ದು, ಇವರಲ್ಲಿ 1,594 ಜನ ಬೆಂಗಳೂರಿಗೆ ಸೇರಿದ್ದಾರೆ. ಇವರಲ್ಲಿ ಇನ್ನು 146 ಜನರನ್ನು ಇನ್ನಷ್ಟೇ ಸೋಂಕು ಪರೀಕ್ಷೆಗೆ ಒಳಪಡಿಸಬೇಕಾಗಿದೆ. 303 ಜನರ ಸೋಂಕು ಪರೀಕ್ಷಾ ವರದಿ ಬಾಕಿ ಇದೆ. ಅಲ್ಲದೆ, ಬ್ರಿಟನ್‌ನಿಂದ ಬಂದು ನಾಪತ್ತೆ ಆಗಿರುವ 212 ಜನರು ಇನ್ನೂ ಪತ್ತೆ ಆಗಿಲ್ಲ. ಉಳಿದಂತೆ 931 ಜನರ ಸೋಂಕು ಪರೀಕ್ಷಾ ವರದಿ ನೆಗೆಟಿವ್, 303 ಜನರ ವರದಿ ಬಾಕಿ ಇದೆ ಎಂದು ಪಾಲಿಕೆಯ ಆರೋಗ್ಯ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ.

**ಬ್ರಿಟನ್‌ನಿಂದ ಬಂದವರ ವಿವರ**

| ಎಲ್ಲಿ | ಎಷ್ಟು |
|---|---|
| ಬೆಂಗಳೂರು | 1,594 |
| ಬೆಂಗಳೂರು ಗ್ರಾಮಾಂತರ | 85 |
| ಬೇರೆ ಜಿಲ್ಲೆ | 515 |
| ಹೊರರಾಜ್ಯ | 118 |
| ಎರಡುಬಾರಿ ದಾಖಲು | 64 |
| ಒಟ್ಟು | 2,376 |

ಉದಯವಾಣಿ
ಜನಮನದ ಜೀವನಾಡಿ

# ಲೆಕ್ಕಪರಿಶೋಧನಾಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು:** ಪಾಲಿಕೆಯಲ್ಲಿ ಖಾಲಿ ಇರುವ ಲೆಕ್ಕಪರಿಶೋಧನಾಧಿಕಾರಿ ಹುದ್ದೆಗಳಿಗೆ ಅರ್ಹ ಲೆಕ್ಕಾಧೀಕ್ಷಕರಿಗೆ ಮುಂಬಡ್ತಿ ನೀಡಲು ತೀರ್ಮಾನಿಸಲಾಗಿದ್ದು, ಅರ್ಜಿ ಆಹ್ವಾನಿಸಲಾಗಿದೆ. ವೇತನ (ಬಟವಾಡೆ) ನಿರ್ವಹಣಾಧಿಕಾರಿಗಳು ಲೆಕ್ಕಪರಿಶೋಧನಾಧಿಕಾರಿ ಹುದ್ದೆಗೆ ಅರ್ಹರಿದ್ದಲ್ಲಿ ಅಂತಹ ಲೆಕ್ಕಾಧೀಕ್ಷಕರ ಸೇವಾ ಪುಸ್ತಕ, ವಿದ್ಯಾರ್ಹತೆ ಪ್ರಮಾಣ ಪತ್ರ, ಇಲಾಖೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ಪ್ರಮಾಣ ಪತ್ರಗಳು, 2017-18 ರಿಂದ 2019-20 ವರೆಗೆ ಮೂರು ವರ್ಷ ಕಾರ್ಯ ನಿರ್ವಹಣಾ ವರದಿ ಸಲ್ಲಿಸಲು ಹಾಗೂ ಇದರೊಂದಿಗೆ ಮುಂಬಡ್ತಿ ಇಚ್ಛೆ ಅಥವಾ ಇಲ್ಲ ಎಂಬ ಪತ್ರ ಮತ್ತು ದೃಢೀಕರಣ ಪತ್ರದೊಂದಿಗೆ ಏಳು ದಿನಗಳಲ್ಲಿ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಈ ಹುದ್ದೆಗೆ ಸಲ್ಲಿಕೆಯಾಗುವ ಅರ್ಜಿಗಳಲ್ಲಿ ಅರ್ಹರನ್ನು ಗುರುತಿಸಿ, ಮುಂಬಡ್ತಿ ಸಮಿತಿಯಲ್ಲಿ ಚರ್ಚೆ ಮಾಡಿ ಅಂತಿಮ ತೀರ್ಮಾನ ತೆಗೆದುಕೊಳ್ಳುತ್ತೇವೆ ಎಂದು ಬಿಬಿಎಂಪಿ ಆಡಳಿತ ವಿಭಾಗದ ಉಪ ಆಯುಕ್ತ ಲಿಂಗಮೂರ್ತಿ ತಿಳಿಸಿದರು.

ಉದಯವಾಣಿ
ಜನಮನದ ಜೀವನಾಡಿ

# ಲೆಕ್ಕಪರಿಶೋಧನಾಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು:** ಪಾಲಿಕೆಯಲ್ಲಿ ಖಾಲಿ ಇರುವ ಲೆಕ್ಕಪರಿಶೋಧನಾಧಿಕಾರಿ ಹುದ್ದೆಗಳಿಗೆ ಅರ್ಹ ಲೆಕ್ಕಾಧೀಕ್ಷಕರಿಗೆ ಮುಂಬಡ್ತಿ ನೀಡಲು ತೀರ್ಮಾನಿಸಲಾಗಿದ್ದು, ಅರ್ಜಿ ಆಹ್ವಾನಿಸಲಾಗಿದೆ. ವೇತನ (ಬಟವಾಡೆ) ನಿರ್ವಹಣಾಧಿಕಾರಿಗಳು ಲೆಕ್ಕಪರಿಶೋಧನಾಧಿಕಾರಿ ಹುದ್ದೆಗೆ ಅರ್ಹರಿದ್ದಲ್ಲಿ ಅಂತಹ ಲೆಕ್ಕಾಧೀಕ್ಷಕರ ಸೇವಾ ಪುಸ್ತಕ, ವಿದ್ಯಾರ್ಹತೆ ಪ್ರಮಾಣ ಪತ್ರ, ಇಲಾಖೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ಪ್ರಮಾಣ ಪತ್ರಗಳು, 2017-18 ರಿಂದ 2019-20 ವರೆಗೆ ಮೂರು ವರ್ಷ ಕಾರ್ಯ ನಿರ್ವಹಣಾ ವರದಿ ಸಲ್ಲಿಸಲು ಹಾಗೂ ಇದರೊಂದಿಗೆ ಮುಂಬಡ್ತಿ ಇಚ್ಛೆ ಅಥವಾ ಇಲ್ಲ ಎಂಬ ಪತ್ರ ಮತ್ತು ದೃಢೀಕರಣ ಪತ್ರದೊಂದಿಗೆ ಏಳು ದಿನಗಳಲ್ಲಿ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಈ ಹುದ್ದೆಗೆ ಸಲ್ಲಿಕೆಯಾಗುವ ಅರ್ಜಿಗಳಲ್ಲಿ ಅರ್ಹರನ್ನು ಗುರುತಿಸಿ, ಮುಂಬಡ್ತಿ ಸಮಿತಿಯಲ್ಲಿ ಚರ್ಚೆ ಮಾಡಿ ಅಂತಿಮ ತೀರ್ಮಾನ ತೆಗೆದುಕೊಳ್ಳುತ್ತೇವೆ ಎಂದು ಬಿಬಿಎಂಪಿ ಆಡಳಿತ ವಿಭಾಗದ ಉಪ ಆಯುಕ್ತ ಲಿಂಗಮೂರ್ತಿ ತಿಳಿಸಿದರು.

ಉದಯವಾಣಿ
ಜನಮನದ ಜೀವನಾಡಿ

# ನಗರದಲ್ಲಿ ಹೆಚ್ಚಳಗೊಂಡ ಶಬ್ದ ಮಾಲಿನ್ಯ

## ಮಾಲಿನ್ಯ ನಿಯಂತ್ರಣ ಮಂಡಳಿಯ ಸಮೀಕ್ಷೆಯಿಂದ ಬಹಿರಂಗ | ರಾತ್ರಿ ವೇಳೆಯೂ ಅಧಿಕಗೊಂಡ ಮಾಲಿನ್ಯ

**ಬೆಂಗಳೂರು:** ನಗರದ ಸೂಕ್ಷ್ಮ ಪ್ರದೇಶಗಳಲ್ಲಿ 2019-20ನೇ ಸಾಲಿನಲ್ಲಿ ಶಬ್ದ ಮಾಲಿನ್ಯ ಪ್ರಮಾಣ ಹೆಚ್ಚಾಗಿರುವುದು ಮಾಲಿನ್ಯ ನಿಯಂತ್ರಣ ಮಂಡಳಿಯ ಸಮೀಕ್ಷೆಯಲ್ಲಿ ಬೆಳಕಿಗೆ ಬಂದಿದೆ.

ನಗರದಲ್ಲಿರುವ ಆಸ್ಪತ್ರೆಗಳು, ಶಾಲಾ- ಕಾಲೇಜುಗಳು, ಧಾರ್ಮಿಕ ಕೇಂದ್ರಗಳು, ಕೋರ್ಟ್ ಹಾಗೂ ಶೈಕ್ಷಣಿಕ ಸಂಸ್ಥೆಗಳ 100 ಮೀ. ವ್ಯಾಪ್ತಿಯನ್ನು ಸೂಕ್ಷ್ಮ ಪ್ರದೇಶ ಎಂದು ಪರಿಗಣಿಸಲಾಗುತ್ತದೆ. ಈ ಪ್ರದೇಶಗಳಲ್ಲಿ ರಾಷ್ಟ್ರೀಯ ಶಬ್ದ ಮಾಲಿನ್ಯ ಪ್ರಮಾಣಕ್ಕಿಂತ ಹೆಚ್ಚು ಶಬ್ದ ದಾಖಲಾಗಿರುವುದು ಆತಂಕಕ್ಕೆ ಕಾರಣವಾಗಿದೆ.

ಸಾಮಾನ್ಯವಾಗಿ ವಾಣಿಜ್ಯ, ವಸತಿ ಹಾಗೂ ಕೈಗಾರಿಕಾ ಪ್ರದೇಶದಲ್ಲೇ ಹೆಚ್ಚು ಶಬ್ದ ಮಾಲಿನ್ಯ ದಾಖಲಾಗಿ, ಸೂಕ್ಷ್ಮ ಪ್ರದೇಶಗಳಲ್ಲಿ ಶಬ್ದ ಮಾಲಿನ್ಯ ಕಡಿಮೆ ದಾಖಲಾಗುತ್ತದೆ. ಆದರೆ, 2019-20ನೇ ಸಾಲಿನಲ್ಲಿ ಇದಕ್ಕೆ ತದ್ವಿರುದ್ಧ ಫಲಿತಾಂಶ ಬೆಳಕಿಗೆ ಬಂದಿದೆ ಎಂದು ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳು ತಿಳಿಸಿದ್ದಾರೆ.

ಮಂಡಳಿಯ ಪರಿವೇಷ್ಟಕ ವಾಯುವಿನ ಗುಣಮಟ್ಟ ಮಾಪನದಿಂದ ಈ ವಿಷಯ ಬೆಳಕಿಗೆ ಬಂದಿದೆ. ಸೂಕ್ಷ್ಮ ಪ್ರದೇಶಗಳಲ್ಲಿ ಬೆಳಗ್ಗೆ 55 ಡೆಸಿಬಲ್ ಹಾಗೂ ರಾತ್ರಿ ವೇಳೆಯಲ್ಲಿ 45 ಡೆಸಿಬಲ್ ದಾಖಲಾಗಬೇಕು. ಆದರೆ (ರಾತ್ರಿ 10ರಿಂದ ಬೆಳಗ್ಗೆ 6ರವರೆಗೆ) ಈ ಪ್ರಮಾಣಕ್ಕಿಂತ ಬೆಳಗ್ಗೆ ಸಮಯದಲ್ಲಿ 17.8ರಿಂದ 32.8 ಪ್ರತಿಶತ ಹಾಗೂ ರಾತ್ರಿ ವೇಳೆ 35.0ರಿಂದ 73.2 ಪ್ರತಿಶತ ಶಬ್ದ ಮಾಲಿನ್ಯ ಪ್ರಮಾಣ ಹೆಚ್ಚಳವಾಗಿದೆ.



ಮಾಪನ ಕೇಂದ್ರದ ಅಂಕಿ- ಅಂಶಗಳ ಪ್ರಕಾರ ವಸತಿ ಪ್ರದೇಶಗಳಲ್ಲಿ ಹಗಲಿನಲ್ಲಿ 55 ಡೆಸಿಬಲ್, ರಾತ್ರಿ 45 ಡೆಸಿಬಲ್‌ನಷ್ಟು ಶಬ್ದ ಇರಬೇಕು. ಆದರೆ, ಹೆಚ್ಚುತ್ತಿರುವ ವಾಹನ ದಟ್ಟಣೆ, ಕಾಮಗಾರಿ ನಿರ್ಮಾಣದಿಂದಾಗಿ ಈ ಬ್ಯಾಕ್‌ಗ್ರೌಂಡ್ ಶಬ್ದಮಾಲಿನ್ಯ ನಿಗದಿತ ಪ್ರಮಾಣಕ್ಕಿಂತ ಹೆಚ್ಚಾಗಿದೆ.

ಈ ಸಂಬಂಧ ಪ್ರತಿಕ್ರಿಯಿಸಿದ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಕಾರ್ಯದರ್ಶಿ ಶ್ರೀನಿವಾಸುಲು ಅವರು, ನಗರದಲ್ಲಿ ಶಬ್ದ ನಿಯಮ-2000 ಪ್ರಕಾರ ಶಬ್ದ ಪ್ರಮಾಣ ಹೆಚ್ಚಾಗದಂತೆ ಯೋಜನೆ ರೂಪಿಸಲಾಗುತ್ತಿದೆ. ನಗರದಲ್ಲಿ 88 ಲಕ್ಷಕ್ಕೂ ಅಧಿಕ ವಾಹನಗಳಿದ್ದು, ಶಬ್ದ ಮಾಲಿನ್ಯ ಹೆಚ್ಚಾಗುತ್ತಿದೆ. ಅಲ್ಲದೆ, ಶೇ.40 ವಾಯುಮಾಲಿನ್ಯ ಉಂಟಾಗುತ್ತಿದೆ. ಶಬ್ದದ ಗರಿಷ್ಠಮಟ್ಟ ಮೀರಿರುವ ವಾಹನಗಳ ವಿರುದ್ಧ ಮಾಲಿನ್ಯ ನಿಯಂತ್ರಣ ಮಂಡಳಿ, ಆರ್‌ಟಿಒ ಹಾಗೂ ಪೊಲೀಸ್ ಇಲಾಖೆ ಕ್ರಮಕ್ಕೆಗೊಳ್ಳಲಿದೆ ಎಂದು ಮಾಹಿತಿ ನೀಡಿದರು.

| ಬೆಂಗಳೂರಿನಲ್ಲಿ ಶಬ್ದ ಮಾಲಿನ್ಯ ಏರಿಕೆ ಪ್ರಮಾಣ | | |
|---|---|---|
| ಪ್ರದೇಶಗಳು | ಹಗಲು | ರಾತ್ರಿ |
| ವಾಣಿಜ್ಯ ಪ್ರದೇಶ | ಶೇ.0.9 - ಶೇ.8.6 | ಶೇ.11.6 - ಶೇ.18.4 |
| ವಸತಿ ಪ್ರದೇಶ | ಶೇ.0.9 - ಶೇ.18.2 | ಶೇ.28.4 - ಶೇ.44 |
| ಸೂಕ್ಷ್ಮ ಪ್ರದೇಶ | ಶೇ.17.8 - ಶೇ.32.8 | ಶೇ.35.0 - ಶೇ.73.2 |
| ನಗರದಲ್ಲಿ ಶಬ್ದ ಗರಿಷ್ಠ ಪ್ರಮಾಣದ ವಿವರ | | |
| ಮೈಸೂರು ರಸ್ತೆಯ ಆರ್‌ವಿಸಿಇ ಕಾಲೇಜು | ಶೇ.17.8 | ಶೇ.35 |
| ನಿಮ್ಹಾನ್ಸ್ | ಶೇ.32.8 | ಶೇ.73.2 |
| ಬಿಟಿಎಮ್ ಲೇಔಟ್ | ಶೇ.18.2 | ಶೇ.44 |
| ದೊಮ್ಮಲೂರು | ಶೇ.12 | ಶೇ.28.7 |
| ಎಸ್.ಜಿ.ಹಳ್ಳಿ | ಶೇ.7.3 | ಶೇ.28.4 |
| ಮಾರತಹಳ್ಳಿ | ಶೇ.3.8 | ಶೇ.19.6 |
| ಯಶವಂತಪುರ | ಶೇ.8.6 | ಶೇ.18.4 |
| ಚರ್ಚ್‌ಸ್ಟ್ರೀಟ್ | ಶೇ.0.9 | ಶೇ.11.6 |

## ಸಮಗ್ರ ಮಾಹಿತಿಗೆ 'ಕೆಎಸ್‌ಪಿಸಿಬಿ' ಆ್ಯಪ್

**ಬೆಂಗಳೂರು:** ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕಾರ್ಯವೈಖರಿ ತಿಳಿಸಲು ಹಾಗೂ ಪರಿಸರ ಮಾಲಿನ್ಯ ನಿಯಂತ್ರಣ ಕ್ರಮದ ಬಗ್ಗೆ ಮಾಹಿತಿಯನ್ನು ಒಂದೇ ಸೂರಿನಡಿ ಪರಿಚಯಿಸುವ ಉದ್ದೇಶದಿಂದ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್‌ಪಿಸಿಬಿ)ಯು 'ಕೆಎಸ್‌ಪಿಸಿಬಿ ಆ್ಯಪ್' ಪರಿಚಯಿಸಲು ಮುಂದಾಗಿದೆ.

ರಾಜ್ಯದಲ್ಲಿ ಗಾಳಿ ಗುಣ್ಣಮಟ್ಟ ತಿಳಿದುಕೊಳ್ಳುವ ಉದ್ದೇಶದಿಂದ ಅಳವಡಿಸಲಾಗಿರುವ ಗಾಳಿ ಸೂಚ್ಯಾಂಕ ಗುಣಮಟ್ಟ ಮಾಪನ, ಮಂಡಳಿಯ ಕಾಯ್ದೆ ನಿಯಮ, ಸುತ್ತೋಲೆ, ಅಧಿಕಾರಿಗಳ ವಿವರ, ದೂರು ಹಾಗೂ ಸಲಹೆಗಳ ಮೂಲಕ ಮಂಡಳಿ ಮತ್ತು ಸಾರ್ವಜನಿಕರ ನಡುವೆ ಸಂಪರ್ಕ ಕಲ್ಪಿಸುವ ನಿಟ್ಟಿನಲ್ಲಿ ಈ ಆ್ಯಪ್ ಸಹಕಾರಿ ಆಗಲಿದೆ ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಕಾರ್ಯದರ್ಶಿ ಶ್ರೀನಿವಾಸುಲು ತಿಳಿಸಿದರು.

ರಾಜ್ಯದಲ್ಲಿ 50 ಸಾವಿರಕ್ಕೂ ಹೆಚ್ಚು ಉದ್ದಿಮೆಗಳು ರಾಜ್ಯ ಮಾಲಿನ್ಯ ನಿಯಂತ್ರಣ ವ್ಯವಸ್ಥೆಗೆ ಒಳಪಟ್ಟಿವೆ. ನೂತನ ಆ್ಯಪ್‌ನ ಮೂಲಕ ಕೈಗಾರಿಕೆಗಳ ಮಾಲೀಕರು ಹಾಗೂ ಸಾರ್ವಜನಿಕರೊಂದಿಗೆ ಸಂಪರ್ಕ ಸಾಧಿಸಲು ಸಾಧ್ಯವಾಗಲಿದೆ. ಆ್ಯಪ್ ಅಭಿವೃದ್ಧಿಪಡಿಸಲು ಜಿಪಿಎಸ್ ತಂತ್ರಜ್ಞಾನ ಸಹ ಬಳಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಸಿಎಂ ಯಡಿಯೂರಪ್ಪ ಅವರು ಮಂಗಳವಾರ (ಡಿ.29ಕ್ಕೆ) ಮಾಲಿನ್ಯ ನಿಯಂತ್ರಣ ಮಂಡಳಿಯ ನೂತನ ಆ್ಯಪ್ ಬಿಡುಗಡೆ ಮಾಡಲಿದ್ದಾರೆ ಎಂದು ಕೆಎಸ್‌ಪಿಸಿಬಿ ಅಧಿಕಾರಿಗಳು ತಿಳಿಸಿದ್ದಾರೆ.

### ನದಿಮೂಲಗಳ ಸಂರಕ್ಷಣೆ

ಅರ್ಕಾವತಿ ಹಾಗೂ ವೃಷಭಾವತಿ ನದಿ ಮೂಲಗಳಲ್ಲಿ ಅನಧಿಕೃತವಾಗಿ ಟ್ಯಾಂಕರ್‌ಗಳ ಮೂಲಕ ಕಲುಷಿತ ನೀರು ಎಲ್ಲೆಂದರಲ್ಲಿ ಬಿಡುವಂತಿಲ್ಲ, ಕಡ್ಡಾಯವಾಗಿ ಕೊಳಚೆ ನೀರು ಸಂಸ್ಕರಣಾ ಘಟಕಗಳಲ್ಲಿ ಸಂಸ್ಕರಣೆ ಮಾಡಬೇಕು. ಹೀಗಾಗಿ, ಕೈಗಾರಿಕೆಗಳಿಂದ ಉತ್ಪತ್ತಿಯಾಗುವ ಕೊಳಚೆ ನೀರು ಸಾಗಿಸುವ ಒಟ್ಟು 30 ಟ್ಯಾಂಕರ್‌ಗಳಿಗೆ ಜಿಪಿಎಸ್ ತಂತ್ರಾಂಶ ಅಳವಡಿಸಲಾಗಿದೆ. ಅದೇ ರೀತಿ ಅಪಾಯಕಾರಿ ತ್ಯಾಜ್ಯವನ್ನು ವೈಜ್ಞಾನಿಕವಾಗಿ ದಹನ ಮಾಡುವ 8 ಘಟಕಗಳಿಗೆ ವಸ್ತು ಸಾಗಾಣಿಕೆ ಮಾಡುವ 25 ವಾಹನಗಳಿಗೆ ಜಿಪಿಎಸ್ ಅವಳವಡಿಸಲಾಗಿದೆ ಎಂದು ಶ್ರೀನಿವಾಸುಲು ತಿಳಿಸಿದರು.

ಉದಯವಾಣಿ
ಜನಮನದ ಜೀವನಾಡಿ

# ಹೊಸವರ್ಷದ ಸಂಭ್ರಮಕ್ಕೆ ಬ್ರೇಕ್

## ನಗರ ಕಮಿಷನರೇಟ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ | ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆಗಳಲ್ಲಿ ಪೊಲೀಸ್ ಕಣ್ಗಾವಲು

**ಬೆಂಗಳೂರು:** ಕೋವಿಡ್-19 ಹಿನ್ನೆಲೆ ಈ ಬಾರಿ ಹೊಸ ವರ್ಷಾಚರಣೆಗೆ ಸಂಪೂರ್ಣ ಬ್ರೇಕ್ ಬಿದ್ದಿದ್ದು, ಡಿ.31ರ ಸಂಜೆ 6 ಗಂಟೆಯಿಂದ 2021 ಜ.1ರ ಮುಂಜಾನೆ ಆರು ಗಂಟೆವರೆಗೂ ಬೆಂಗಳೂರು ನಗರ ಕಮಿಷನರೇಟ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಜತೆಗೆ ನಗರದ ಸಾರ್ವಜನಿಕ ಸ್ಥಳಗಳಲ್ಲಿ ಸಂಭ್ರಮಾಚರಣೆಗೆ ಅವಕಾಶವಿಲ್ಲ, ಒಂದು ವೇಳೆ ನಿಯಮ ಉಲ್ಲಂಘನೆ ಮಾಡಿದರೆ ಕಾನೂನು ಕ್ರಮಕೈಗೊಳ್ಳಬೇಕಾಗುತ್ತದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಎಚ್ಚರಿಕೆ ನೀಡಿದ್ದಾರೆ.

ಸೋಮವಾರಸಂಜೆ ಸುದ್ದಿಗೋಷ್ಠಿ ನಡೆಸಿದ ಅವರು, ಕೋವಿಡ್-19 ಹಿನ್ನೆಲೆಯಲ್ಲಿ ಹೊಸವರ್ಷಾಚರಣೆಗೆ ಹೊಸ ಮಾರ್ಗಸೂಚಿ ಹೊರಡಿಸಲಾಗಿದೆ. ನಿಷೇಧಾಜ್ಞೆ ಹಿನ್ನೆಲೆಯಲ್ಲಿ ಐದಕ್ಕಿಂತ ಹೆಚ್ಚು ಮಂದಿ ಒಟ್ಟಿಗೆ ಸೇರುವಂತಿಲ್ಲ, ಓಡಾಡುವಂತಿಲ್ಲ, ಮಾರಕಾಸ್ತ್ರ ಸ್ಫೋಟಕ ವಸ್ತುಗಳನ್ನು ಕೊಂಡೊಯ್ಯುವಂತಿಲ್ಲ,

ಇದರೊಂದಿಗೆ ಪಾರ್ಕ್, ರಸ್ತೆಗಳು ಸೇರಿ ಸಾರ್ವಜನಿಕ ಸ್ಥಳಗಳಲ್ಲಿ ಆಚರಣೆಗೆ ಅವಕಾಶವಿಲ್ಲ, ವಸತಿ ಸಮುಚ್ಚಯ, ಅಪಾರ್ಟ್‌ಮೆಂಟ್ ಆವರಣ ಹಾಗೂ ಖಾಸಗಿ ಕ್ಲಬ್‌ಗಳ ಆವರಣದಲ್ಲಿ ಕೋವಿಡ್-19 ನಿಯಮಾನುಸಾರ ಮಾತ್ರ ಅವಕಾಶವಿದೆ. ಆದರೆ, ಸಾಂಸ್ಕೃತಿಕ ಕಾರ್ಯಕ್ರಮ ಸೇರಿ ಇತರೆ ಬೇರೆ ಯಾವುದೇ ವಿಶೇಷ ಕಾರ್ಯಕ್ರಮಕ್ಕೆ ಅವಕಾಶವಿಲ್ಲ ಎಂದು ಹೇಳಿದರು.

ಹೋಟೆಲ್, ಮಾಲ್, ರೆಸ್ಟೋರೆಂಟ್, ಬಾರ್‌ಗಳಲ್ಲಿ ಮುಂಗಡ ಕಾಯ್ದಿರಿಸಿಕೊಂಡಿರುವ ಶೇ.50 ಮಂದಿಗೆ ಮಾತ್ರ ಅವಕಾಶ ನೀಡಲಾಗಿದ್ದು, ಆವರಣದಲ್ಲೇ ಕಾರ್ಯಕ್ರಮ ಆಯೋಜಿಸಿಕೊಳ್ಳಬೇಕು. ಗ್ರಾಹಕರು ಯಾರು ಹೊರಗಡೆ ಬಾರದಂತೆ ಹೋಟೆಲ್ ಸಿಬ್ಬಂದಿ ನಿರ್ವಹಿಸಬೇಕು. ಜತೆಗೆ ಇತರೆ ಇವೆಂಟ್, ಶೋ, ಸಂಗೀತ ಕಾರ್ಯಕ್ರಮಗಳು, ವಿಶೇಷ ಬ್ಯಾಂಡ್ ಮ್ಯೂಸಿಕ್, ನೃತ್ಯ, ಡಿಜೆ(ಬೇರೆ ದಿನಗಳಲ್ಲಿ ಬಳಸುವ ಪರವಾನಿಗೆ ಪಡೆದ ಡಿಜೆ ಹೊರತುಪಡಿಸಿ)ಗೆ ಅವಕಾಶವಿಲ್ಲ ತಮಗೆ ಅವಕಾಶ ನೀಡಿರುವ ಕಾಲವಕಾಶದಲ್ಲೇ ಕಾರ್ಯಕ್ರಮ ಮುಗಿಸಬೇಕು. ಮಾಸ್ಕ್, ಸ್ಯಾನಿಟೈಸರ್, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಸೇರಿ ಎಲ್ಲ ರೀತಿಯ ಕೋವಿಡ್-19ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಇಲ್ಲವಾದರೆ ಹೋಟೆಲ್ ಹಾಗೂ ಕಾರ್ಯಕ್ರಮ ಆಯೋಜಕರ ವಿರುದ್ಧ ಪ್ರಕರಣದ ಜತೆಗೆ ಭಾರಿ ದಂಡ ವಿಧಿಸಲಾಗುವುದು. ಪರವಾನಿಗೆ ಕೂಡ ರದ್ದು ಪಡಿಸುವ ಸಾಧ್ಯತೆಯಿದೆ ಎಂದು ಹೇಳಿದರು.

**ಎಂ.ಜಿ.ರಸ್ತೆ ಬಂದ್:** ಡಿ.31ರ ರಾತ್ರಿ 7ಗಂಟೆಯಿಂದಲೇ ಅನಿಲ್ ಕುಂಬ್ಳೆ ವೃತ್ತದಿಂದ ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್ ಸಂಪರ್ಕಿಸುವ ಎಲ್ಲ ರಸ್ತೆಗಳ ಸಂಚಾರವನ್ನು ನಿರ್ಬಂಧಿಸಲಾಗುವುದು. ಈ ಭಾಗದ ಹೋಟೆಲ್, ಪಬ್, ರೆಸ್ಟೋರೆಂಟ್, ಬಾರ್‌ಗೆ ಹೋಗಲು ಕಡ್ಡಾಯವಾಗಿ ಮುಂಗಡ ಕಾಯ್ದಿರಿಸಿದ ಕೂಪನ್ ಅನ್ನು ಗ್ರಾಹಕರು ತಮ್ಮೊಂದಿಗೆ ಕೊಂಡೊಯ್ಯಬೇಕು. ಇಲ್ಲವಾದರೆ ಪ್ರವೇಶಕ್ಕೆ ನಿರ್ಬಂಧಿಸಲಾಗುವುದು. ಕೋರಮಂಗಲ, ಇಂದಿರಾನಗರ ಇತರೆಡೆಗೂ ಅವಕಾಶವಿಲ್ಲ, ಬ್ಯಾರಿಕೇಡ್‌ಗಳನ್ನು ಹಾಕಲಾಗುತ್ತದೆ. ಅಲ್ಲದೆ, ಬಿಬಿಎಂಪಿ ಮತ್ತು ಪೊಲೀಸ್ ಸಿಬ್ಬಂದಿ ಜಂಟಿಯಾಗಿ ಎಲ್ಲೆಡೆ ತಪಾಸಣೆ ಕೈಗೊಳ್ಳಲಿದ್ದಾರೆ. ಯಾರಾದರೂ ನಿಯಮ ಉಲ್ಲಂಘಿಸಿದರೆ ಅವರ ವಿರುದ್ಧ ಕಾನೂನು ಕ್ರಮಕೈಗೊಳ್ಳುತ್ತೇವೆ ಎಂದು ಹೇಳಿದರು.

**ಪೊಲೀಸ್ ಬಂದೋಬಸ್ತ್:** ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್, ಇಂದಿರಾನಗರ, ಕೋರಮಂಗಲ ವ್ಯಾಪ್ತಿಯಲ್ಲಿ ನಾಲ್ಕು ಸಾವಿರಕ್ಕೂ ಅಧಿಕ ಪೊಲೀಸರು ಕರ್ತವ್ಯ ನಿರ್ವಹಿಸಲಿದ್ದಾರೆ. ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರು ನಿಯೋಜಿಸಲಾಗಿದೆ. ಹೊಯ್ಸಳ ವಾಹನಗಳು, ಗಸ್ತು ಪೊಲೀಸರು ನಿರಂತರವಾಗಿ ಎಲ್ಲೆಡೆ ಗಸ್ತು ತಿರುಗಲಿದ್ದಾರೆ. ಒಟ್ಟಾರೆ 11 ಸಾವಿರಕ್ಕೂ ಅಧಿಕ ಪೊಲೀಸರು ಎಲ್ಲೆಡೆ ಕಾರ್ಯನಿರ್ವಹಿಸಲಿದ್ದಾರೆ ಎಂದು ಹೇಳಿದರು.



ಹೊಸ ವರ್ಷಾಚರಣೆ ಸಂದರ್ಭದಲ್ಲಿ ಕೋವಿಡ್-19 ಹರಡದಂತೆ ತಡೆಗಟ್ಟಲು ಮಾರ್ಗಸೂಚಿಗಳನ್ನು ಜಾರಿ ಮಾಡುವ ಕುರಿತಂತೆ ಗೃಹಸಚಿವ ಬಸವರಾಜ ಬೊಮ್ಮಾಯಿ ಸಭೆ ನಡೆಸಿದರು. ಸಚಿವ ಡಾ. ಸುಧಾಕರ್, ನಗರಾಯುಕ್ತ ಕಮಲ್‌ಪಂತ್, ಡಿಜಿಪಿ ಪ್ರವೀಣ್ ಸೂದ್ ಇತರರಿದ್ದರು.

### ಜವಾಬ್ದಾರಿಯಿಂದ ಕಾರ್ಯನಿರ್ವಹಿಸೋಣ

ಕೋವಿಡ್-19 ಹಿನ್ನೆಲೆಯಲ್ಲಿ ಹೊಸವರ್ಷಾಚರಣೆ ಸಂದರ್ಭದಲ್ಲಿ ಪ್ರತಿಯೊಬ್ಬರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸೋಣ. ಯಾರು ಅನಗತ್ಯವಾಗಿ ಹೊರಗಡೆ ಬರಬೇಡಿ. ಇದಲ್ಲಿಯೇ ಆಚರಣೆ ಮಾಡಿ ಎಂದು ಸಾರ್ವಜನಿಕರಲ್ಲಿ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಮನವಿ ಮಾಡಿದರು.

### ಮೇಲ್ಸೇತುವೆ ಬಂದ್, ಡ್ರಂಕ್ ಆ್ಯಂಡ್ ಡ್ರೈವ್ ತಪಾಸಣೆ

ಆಸ್ಪತ್ರೆ ಹಾಗೂ ಇನ್ನಿತರೆ ತುರ್ತು ಸೇವೆಗಳಿಗೆ ಯಾವುದೇ ಅಡ್ಡಿಯಿಲ್ಲ. ಅನಗತ್ಯವಾಗಿ ಓಡಾಡುವುದು ಮಾಡುವಂತಿಲ್ಲ. ಕಚೇರಿಯಿಂದ ಮನೆಗೆ ಹೋಗಲು ಅವಕಾಶವಿದೆ. ಕಡ್ಡಾಯವಾಗಿ ತಮ್ಮ ಗುರುತಿನ ಚೀಟಿ ಕೊಂಡೊಯ್ಯಬೇಕು. ಜತೆಗೆ ಡಿ.31ರ ರಾತ್ರಿಯಿಂದ ಜ.1ರ ಮಂಜಾನೆವರೆಗೆ ನಗರದ ಎಲ್ಲ ಮೇಲು ಸೇತುವೆಗಳಲ್ಲಿ ಸಂಚಾರ ನಿರ್ಬಂಧಿಸಲಾಗಿದೆ. ರಸ್ತೆ ಖಾಲಿ ಇವೆ ಎಂದು ಬೈಕ್ ವೀಲ್ಹಿಂಗ್, ಡ್ರ್ಯಾಗ್ ರೇಸ್ ಮಾಡುವಂತಿಲ್ಲ. ಮಾಡಿದರೆ, ವಾಹನ ಜಪ್ತಿ ಜತೆಗೆ ಪ್ರಕರಣ ದಾಖಲಿಸಲಾಗುವುದು. ಹೀಗಾಗಿ ಪೋಷಕರು ತಮ್ಮ ಮಕ್ಕಳ ಬಗ್ಗೆ ಜಾಗೃತೆವಹಿಸಬೇಕು. ಮದ್ಯ ಸೇವಿಸಿ ವಾಹನ ಚಾಲನೆ ಮಾಡುವವರ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಲಾಗುವುದು. ಡ್ರಂಕ್ ಆ್ಯಂಡ್ ಡ್ರೈವ್ ತಪಾಸಣೆ ಕಟ್ಟುನಿಟ್ಟಾಗಿ ಪಾಲನೆಯಾಗಲಿದೆ. ಪ್ರಮುಖ ಜಂಕ್ಷನ್‌ಗಳಲ್ಲಿ ಸಿಸಿಟಿವಿ ಕ್ಯಾಮೆರಾ ದೃಶ್ಯ ಆಧರಿಸಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣ ದಾಖಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಸಂಯುಕ್ತ ಕರ್ನಾಟಕ

### 10 ದಿನದೊಳಗೆ ಮುಚ್ಚಬೇಕು । ನಿತ್ಯ ಲೋಡ್‌ಗಳಷ್ಟು ಡಾಂಬರು

# ರಸ್ತೆಗುಂಡಿಗಳ ಮೋಕ್ಷಕ್ಕೆ ಗಡುವು

ಸಂ.ಕ.ಸಮಾಚಾರ ಬೆಂಗಳೂರು

ನಗರದಲ್ಲಿರುವ ಎಲ್ಲ ರಸ್ತೆ ಗುಂಡಿಗಳನ್ನು ಇನ್ನು 10 ದಿನದೊಳಗೆ ಮುಚ್ಚಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಗುಂಡಿ, ಬೀದಿದೀಪ ಅಳವಡಿಕೆ, ಯಾಂತ್ರಿಕ ಕಸ ಗುಡಿಸುವ ಯಂತ್ರ ಹಾಗೂ ವಾರ್ಷಿಕ ರಸ್ತೆ ನಿರ್ವಹಣೆ ಸೇರಿದಂತೆ ಮತ್ತಿತರ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಮುಂದಿನ ಹತ್ತು ದಿನಗಳ ಒಳಗಾಗಿ ನಗರದಲ್ಲಿರುವ ಎಲ್ಲ ರಸ್ತೆಗುಂಡಿಗಳನ್ನು ಮುಚ್ಚಬೇಕು ಎಂದು ಅಧಿಕಾರಿಗಳಿಗೆ ಹೊಸ ಗಡುವು ನೀಡಿದರು.



ನಗರದಲ್ಲಿ ರಸ್ತೆಗುಂಡಿ ಮುಚ್ಚುವ ಪ್ರಕ್ರಿಯೆ ಪ್ರಗತಿಯಲ್ಲಿದ್ದರೂ ವೇಗವಿಲ್ಲ. ಇದಕ್ಕೆ ವೇಗ ನೀಡಬೇಕು. ಕೂಡಲೇ ಡಾಂಬರು ಮಿಶ್ರಣ ಘಟಕನಿಂದ ಎಲ್ಲ 8 ವಲಯಗಳಿಗೂ ಪ್ರತಿನಿತ್ಯ ಎರಡೆರಡು ಲೋಡ್‌ಗಳಷ್ಟು ಡಾಂಬರು ಕಳುಹಿಸಿ 10 ದಿನದ ಒಳಗಾಗಿ ರಸ್ತೆ ಗುಂಡಿ ಮುಚ್ಚಬೇಕು ಎಂದು ಎಲ್ಲ ವಲಯದ ಮುಖ್ಯ ಎಂಜಿನಿಯರ್‌ಗಳಿಗೆ ನಿರ್ದೇಶನ ನೀಡಿದರು.

ಬೀದಿದೀಪಗಳ ಅಳವಡಿಕೆ ನಿರ್ವಹಣೆ ನಿರೀಕ್ಷಿತ ಮಟ್ಟದಲ್ಲಿ ಆಗುತ್ತಿಲ್ಲ. ಹೀಗಾಗಿ, ಟೆಂಡರ್ ಪ್ರಕ್ರಿಯೆಗೆ ವೇಗ ನೀಡಬೇಕು. ಯಾಂತ್ರಿಕ ಕಸ ಗುಡಿಸುವ ಯಂತ್ರದ ಸಮರ್ಪಕವಾಗಿ ಕಾರ್ಯನಿರ್ವಹಿಸಲು ಹಾಗೂ ಅದರ ಮೇಲೆ ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ)ರವರು ನಿಗಾವಹಿಸಬೇಕು. ನಗರದ ಪ್ರಮುಖ, ಆರ್ಟೀರಿಯಲ್ ಹಾಗೂ ಸಬ್ ಆರ್ಟೀರಿಯಲ್ ರಸ್ತೆಗಳ ಪೈಕಿ ಯಾವ ಯಾವ ರಸ್ತೆಗಳಲ್ಲಿ ಯಾಂತ್ರಿಕ ಕಸ ಗುಡಿಸುವ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ಎಂಬುದನ್ನು ಪಟ್ಟಿ ಮಾಡಿ ಪ್ರತಿನಿತ್ಯ ಎಷ್ಟು ಕಿ.ಮೀ ಕಸ ಗುಡಿಸುತ್ತಿವೆ ಎಂಬ ವರದಿ ನೀಡಬೇಕು ಎಂದು ಸೂಚಿಸಿದರು.

ಪಾಲಿಕೆ ವ್ಯಾಪ್ತಿಯ ಆರ್ಟೀರಿಯಲ್ ಹಾಗೂ ಸಬ್ ಆರ್ಟೀರಿಯಲ್ ರಸ್ತೆಗಳ ಸಮರ್ಪಕ ನಿರ್ವಹಣೆಗಾಗಿ ಟೆಂಡರ್ ಆಹ್ವಾನಿಸಲಾಗಿದೆ. ಇದರ ನಿರ್ವಹಣೆ ಕಾರ್ಯವನ್ನು ಪ್ರಾರಂಭಿಸಲು ಸೂಚನೆ ನೀಡಿದರು. ಇದೇ ವೇಳೆ ಪ್ರಮುಖ ರಸ್ತೆಗಳಲ್ಲಿನ ಕಲ್ಲುಗಳಿಗೆ ಬಣ್ಣ ಬಳಿಯುವ ಹಾಗೂ ಲೈನ್ ಮಾರ್ಕಿಂಗ್‌ಗೆ ಕ್ರಮ ವಹಿಸಲು ಸೂಚನೆ ನೀಡಿದರು.

> “ಕೂಡಲೇ ಡಾಂಬರು ಮಿಶ್ರಣ ಘಟಕನಿಂದ ಎಲ್ಲ 8 ವಲಯಗಳಿಗೂ ಪ್ರತಿನಿತ್ಯ ಎರಡೆರಡು ಲೋಡ್‌ಗಳಷ್ಟು ಡಾಂಬರು ಕಳುಹಿಸಿ 10 ದಿನದ ಒಳಗಾಗಿ ರಸ್ತೆ ಗುಂಡಿ ಮುಚ್ಚಬೇಕೆಂದು ಎಲ್ಲ ವಲಯದ ಮುಖ್ಯ ಎಂಜಿನಿಯರ್‌ಗಳಿಗೆ ನಿರ್ದೇಶನ ನೀಡಲಾಗಿದೆ.
>
> ■ ಗೌರವ್‌ಗುಪ್ತ । ಪಾಲಿಕೆ ಆಡಳಿತಾಧಿಕಾರಿ

ಸಂಯುಕ್ತ ಕರ್ನಾಟಕ

# 2 ದಿನದಲ್ಲಿ ಬ್ರಿಟನ್‌ನಿಂದ ಬಂದವರ ಪತ್ತೆ

- ಪತ್ತೆಗೆ ಹಲವು ಮಾರ್ಗೋಪಾಯಗಳು
- ಇನ್ನೂ ಪತ್ತೆಯಾಗದ 200 ಮಂದಿ
- ತಂತ್ರಜ್ಞಾನದ ಮೊರೆ, ಪೊಲೀಸರ ನೆರವು
- 26 ಸೋಂಕಿತರು ಆರೋಗ್ಯವಾಗಿದ್ದಾರೆ
- ತಲೆಮರೆಸಿಕೊಂಡವರ ವಿರುದ್ಧ ಕ್ರಮ

**ಸಂ.ಕ. ಸಮಾಚಾರ ಬೆಂಗಳೂರು**

ಬ್ರಿಟನ್‌ನಿಂದ ಕರ್ನಾಟಕಕ್ಕೆ ಬಂದು ನಾಪತ್ತೆಯಾಗಿರುವವರನ್ನು ಇನ್ನು ಎರಡು ದಿನದಲ್ಲಿ ಪತ್ತೆ ಮಾಡಲು ಸರ್ಕಾರ ಹಲವಾರು ಮಾರ್ಗಗಳಿಗೆ ಶರಣಾಗಿದೆ.

ಡಿಸೆಂಬರ್ 1ನೇ ತಾರೀಕಿನಿಂದ ಇಲ್ಲಿಯವರೆಗೆ ಬಂದ ಪ್ರಯಾಣಿಕರಲ್ಲಿ 26 ಮಂದಿಗೆ ಸೋಂಕು ಕಾಣಿಸಿಕೊಂಡಿದೆ. ಇದು ರೂಪಾಂತರದ ಸೋಂಕೋ ಅಥವಾ ಇಲ್ಲವೋ ಎಂಬುದು ಇನ್ನೂ ಗೊತ್ತಾಗಿಲ್ಲ. ಆದರೆ, ಬ್ರಿಟನ್‌ನಿಂದ ಬಂದವರಲ್ಲಿ 200ಕ್ಕೂ ಹೆಚ್ಚು ಪ್ರಯಾಣಿಕರು ಎಲ್ಲಿದ್ದಾರೆ ಎಂಬುದು ಪತ್ತೆಯಾಗುತ್ತಿಲ್ಲ. ವಿದೇಶದಿಂದ ಬಂದ ಪ್ರಯಾಣಿಕರಲ್ಲಿ ಕೆಲವರ ಫೋನ್‌ಗಳು ಸ್ವಿಚ್ ಆಫ್ ಆಗಿವೆ. ಇದು ಆತಂಕಕ್ಕೆ ಕಾರಣವಾಗಿರುವುದರಿಂದ ಸರ್ಕಾರ ನಾಪತ್ತೆಯಾಗಿರುವ ಎಲ್ಲರನ್ನೂ ಪತ್ತೆ ಮಾಡಲು ತಂತ್ರಜ್ಞಾನದ ಮೊರೆ ಜೊತೆಗೆ ಅವರ ಪ್ರಯಾಣದ ವೇಳೆ ನೀಡಲಾಗಿರುವ ವಿಳಾಸವನ್ನು ಪತ್ತೆ ಮಾಡಲು ತೀರ್ಮಾನಿಸಿದ್ದು, ಇದಕ್ಕಾಗಿ ಪೊಲೀಸರ ನೆರವನ್ನು ಪಡೆದುಕೊಳ್ಳಲಾಗುತ್ತಿದೆ.

ಈ ಕುರಿತು ಆರೋಗ್ಯ ಸಚಿವ ಡಾ. ಕೆ. ಸುಧಾಕರ್ ಸುದ್ದಿಗಾರರಿಗೆ ಮಾಹಿತಿ ನೀಡಿ ಯುಕೆಯಿಂದ ಬಂದವರನ್ನು ಎರಡು ದಿನಗಳೊಳಗೆ ಪತ್ತೆ ಹಚ್ಚಲಾಗುತ್ತದೆ. ಈ ಬಗ್ಗೆ ಪೊಲೀಸ್ ಹಿರಿಯ ಅಧಿಕಾರಿಗಳಿಗೆ ತಾಕೀತು ಮಾಡಲಾಗಿದೆ. ಯುಕೆಯಿಂದ ಬಂದವರ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಲಾಗಿದೆ. ಈ ಬಗ್ಗೆ ಗೃಹ ಸಚಿವರ ಜೊತೆ ಚರ್ಚೆ ನಡೆಸಲಾಗಿದೆ ಎಂದರು.

ಕೊರೊನಾ ರೂಪಾಂತರ ತಳಿ ರಾಜ್ಯಕ್ಕೆ ಪ್ರವೇಶ ವಾಗಿದೆಯೇ ಎಂಬುದರ ಕುರಿತು ಕೇಂದ್ರದಿಂದ ಈ ಬಗ್ಗೆ ಸ್ಪಷ್ಟತೆ ಸಿಗಲಿದೆ. ಮಂಗಳವಾರ ಸಂಜೆ ವೇಳೆಗೆ ಸ್ಪಷ್ಟ ಮಾಹಿತಿ ಲಭಿಸಲಿದೆ. ಆದರೆ, ಯುಕೆಯಿಂದ ಬಂದ ಹಲವು ಪ್ರಯಾಣಿಕರು ತಮ್ಮ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡಿದ್ದಾರೆ. ಇವರು ಯಾವುದೇ ಕಾರಣಕ್ಕೂ ತಲೆಮರೆಸಿಕೊಳ್ಳುವಂತಿಲ್ಲ. ತಾವಾಗಿಯೇ ಬಂದು ಕೊರೊನಾ ಪರೀಕ್ಷೆ ಮಾಡಿಸಿಕೊಳ್ಳುವ ಮೂಲಕ ಸರ್ಕಾರದೊಂದಿಗೆ ಸಹಕರಿಸಿ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕಾಗುತ್ತದೆ. ಇಲ್ಲವಾದಲ್ಲಿ ಸರ್ಕಾರ ತನ್ನದೇ ಆದ ಮಾರ್ಗದ ಮೂಲಕ ಅವರನ್ನೆಲ್ಲ ಪತ್ತೆ ಹಚ್ಚಿ ಮುಂದಿನ ಕ್ರಮಗಳನ್ನು ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಯುಕೆಯಿಂದ ಬಂದಿರುವ 26 ಮಂದಿಗೆ ಕೊರೊನಾ ಬಂದಿದ್ದು, ಅವರನ್ನೆಲ್ಲರನ್ನೂ ಆಸ್ಪತ್ರೆಗೆ ದಾಖಲು ಮಾಡಿದ್ದೇವೆ. ಅವರೆಲ್ಲರೂ ಆರೋಗ್ಯವಾಗಿದ್ದಾರೆ. ಎಲ್ಲರಿಗೂ ರೋಗದ ಲಕ್ಷಣ ಇದ್ದು, ಗಂಭೀರವಾಗಿಲ್ಲ ಎಂದು ಮಾಹಿತಿ ನೀಡಿದರು.

ಸಂಯುಕ್ತ ಕರ್ನಾಟಕ

# ಶಾಲಾ–ಕಾಲೇಜುಗಳು ಸಜ್ಜು

ಸಂ.ಕ.ಸಮಾಚಾರ ಬೆಂಗಳೂರು

ಜನವರಿ 1ರಿಂದ ಶಾಲಾ–ಕಾಲೇಜುಗಳ ಆರಂಭಕ್ಕೆ ಸರ್ಕಾರ ಸೂಚಿಸಿರುವ ಹಿನ್ನೆಲೆಯಲ್ಲಿ ಬಿಬಿಎಂಪಿ ಶಾಲೆ ಕಾಲೇಜುಗಳಲ್ಲಿ ಪಾಠ ಪ್ರವಚನಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಪ್ರತಿ 15 ವಿದ್ಯಾರ್ಥಿಗಳ ತಂಡ ರಚನೆ ಮಾಡಿಕೊಂಡು ಪ್ರತ್ಯೇಕ ಕೊಠಡಿಯಲ್ಲಿ ತರಗತಿ ನಡೆಸಬೇಕು. ಕಡ್ಡಾಯವಾಗಿ ಥರ್ಮಲ್ ಸ್ಕ್ಯಾನಿಂಗ್, ಕೋವಿಡ್ ಮುನ್ನೆಚ್ಚರಿಕೆ ಬಗ್ಗೆ ನಿಗಾ ವಹಿಸುವುದಕ್ಕೆ ಮೆಂಟರ್ ನೇಮಕ ಸೇರಿದಂತೆ ರಾಜ್ಯ ಸರ್ಕಾರ ನೀಡಿದ ಎಲ್ಲ ಮಾರ್ಗ ಸೂಚಿಗಳನ್ನು ಅನುಸರಿಸಬೇಕೆಂದು ಬಿಬಿಎಂಪಿಯ ಶಾಲಾ–ಕಾಲೇಜು ಮುಖ್ಯಸ್ಥರಿಗೆ ಶಿಕ್ಷಣ ವಿಭಾಗದ ವಿಶೇಷ ಆಯುಕ್ತ ಜೆ. ಮಂಜುನಾಥ ನಿರ್ದೇಶಿಸಿದ್ದಾರೆ.

ಹೊಸ ವರ್ಷದಿಂದ ಹತ್ತನೇ ತರಗತಿ ಹಾಗೂ ದ್ವಿತೀಯ ಪಿಯುಸಿ ತರಗತಿ ಆರಂಭಿಸುವುದಕ್ಕೆ ರಾಜ್ಯ ಸರ್ಕಾರ ಮತ್ತು ಶಿಕ್ಷಣ ಇಲಾಖೆ ಸೂಚಿಸಿದ ಹಿನ್ನೆಲೆಯಲ್ಲಿ ಬಿಬಿಎಂಪಿಯ 32 ಪ್ರೌಢ ಶಾಲೆ ಮತ್ತು 15 ಪದವಿ ಪೂರ್ವ ಕಾಲೇಜುಗಳ ಮುಖ್ಯಸ್ಥರೊಂದಿಗೆ ವಿಶೇಷ ಆಯುಕ್ತ ಜೆ.ಮಂಜುನಾಥ ಸಭೆ ನಡೆಸಿದ ಅವರು, ಈ ವೇಳೆ ಕಡ್ಡಾಯವಾಗಿ ರಾಜ್ಯ ಸರ್ಕಾರದ ನೀಡಿದ ಮಾರ್ಗಸೂಚಿಗಳನ್ನು ಅನುಸರಿಬೇಕು. 15 ರಿಂದ 20 ವಿದ್ಯಾರ್ಥಿಗಳ ತಂಡ ಪ್ರತ್ಯೇಕ ತಂಡ ರಚನೆ ಮಾಡಿಕೊಂಡು ತರಗತಿಗಳನ್ನು ನಡೆಸಬೇಕು. ಕೊಠಡಿಗಳು ಕೊರತೆ ಇರುವ ಶಾಲೆ ಮತ್ತು ಕಾಲೇಜುಗಳಲ್ಲಿ ಮಾತ್ರ ಎರಡು ಪಾಳಿಯಲ್ಲಿ ತರಗತಿ ನಡೆಸುವಂತೆ ನಿರ್ದೇಶಿಸಲಾಗಿದೆ.



ಕ್ಲೀವ್ ಲ್ಯಾಂಡ್ ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಹತ್ತನೇ ತರಗತಿಯ ವಿದ್ಯಾರ್ಥಿಗಳಿಗೆ ಎರಡು ಪಾಳಿಯಲ್ಲಿ ತರಗತಿ ನಡೆಸುವುದಕ್ಕೆ ಸೂಚಿಸಲಾಗಿದೆ. ಉಳಿದಂತೆ ಎಲ್ಲ ಶಾಲಾ–ಕಾಲೇಜುಗಳು ಕೊಠಡಿ ವ್ಯವಸ್ಥೆ ಇದೆ. ದೈಹಿಕ ಶಿಕ್ಷಕರು ಅಥವಾ ಚಿತ್ರಕಲಾ ಶಿಕ್ಷಕರನ್ನು ಮೆಂಟರ್‌ಗಳಾಗಿ ನೇಮಿಸಲಾಗಿದ್ದು, ಅವರು ಕೋವಿಡ್ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ನಿಗಾ ವಹಿಸಲಿದ್ದಾರೆ. ಆರ್‌ಆರ್ ನಗರ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಗೆ ಖರೀದಿ ಮಾಡಲಾಗಿದ್ದ 700 ಥರ್ಮಲ್ ಸ್ಕ್ಯಾನರ್‌ಗಳನ್ನು ಎಲ್ಲ ಶಾಲಾ ಕಾಲೇಜುಗಳಿಗೆ ಹಂಚಿಕೆ ಮಾಡಲಾಗಿದೆ. ಹತ್ತನೇ ತರಗತಿಯಲ್ಲಿ ಒಟ್ಟು 2,190 ಹಾಗೂ ದ್ವಿತೀಯ ಪಿಯುಸಿಯಲ್ಲಿ 2,070 ವಿದ್ಯಾರ್ಥಿಗಳಿದ್ದಾರೆ ಎಂದು ಮಾಹಿತಿ ನೀಡಿದರು.

ಬಿಬಿಎಂಪಿಯ ಸುಮಾರು 600ಕ್ಕೂ ಹೆಚ್ಚು ಶಿಕ್ಷಕರು ನಗರ ಕೊರೋನಾ ಸೋಂಕು ನಿಯಂತ್ರಣ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು. ಈ ಪೈಕಿ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಸುಮಾರು 300ಕ್ಕೂ ಶಿಕ್ಷಕರನ್ನು ಕೋವಿಡ್ ಕೆಲಸದಿಂದ ಬಿಡುಗಡೆ ಮಾಡಲಾಗಿದ್ದು, ಅವರು ಬೋಧನೆ ಕಾರ್ಯದಲ್ಲಿ ತೊಡಗಿಕೊಳ್ಳಲಿದ್ದಾರೆ. ಶಿಶು ವಿಹಾರ, ಪ್ರಾಥಮಿಕ ಶಾಲಾ ಶಿಕ್ಷಕರು ಕೋವಿಡ್ ಕಾರ್ಯದಲ್ಲಿ ಮುಂದುವರೆಯಲಿದ್ದಾರೆ ಎಂದು ವಿಶೇಷ ಆಯುಕ್ತರು ಮಾಹಿತಿ ನೀಡಿದ್ದಾರೆ.



2020
karnataka.com/c/57347

ಸಂಯುಕ್ತ ಕರ್ನಾಟಕ

# 31ರಂದು ನಿಷೇಧಾಜ್ಞೆ

- ಹೊಸ ವರ್ಷಾಚರಣೆಗೆ ಅಂಕುಶ
- ವ್ಹೀಲಿಂಗ್, ಡ್ರ್ಯಾಗ್ ರೇಸ್‌ಗೆ ಬ್ರೇಕ್
- ಎಲ್ಲಾ ಮೇಲ್ಸೇತುವೆಗಳು ಬಂದ್
- ಐದಕ್ಕಿಂತ ಹೆಚ್ಚು ಜನರು ಸೇರುವಂತಿಲ್ಲ
- ಡಿಜೆ–ಸಂಗೀತ ಕಾರ್ಯಕ್ರಮಕ್ಕಿಲ್ಲ ಅವಕಾಶ
- ಮದ್ಯ ಸೇವಿಸಿ ವಾಹನ ಚಲಾಯಿಸುವಂತಿಲ್ಲ
- ತುರ್ತು ಸೇವೆಗಳ ವಾಹನಗಳಿಗೆ ಅವಕಾಶ

**ಸಂ.ಕ.ಸಮಾಚಾರ ಬೆಂಗಳೂರು**

ಕೊರೊನಾ ಭೀತಿಯ ನಡುವೆಯೂ ಹೊಸ ವರ್ಷಾಚರಣೆ ಮಾಡಲು ಸಜ್ಜಾಗಿದ್ದವರಿಗೆ ಸರ್ಕಾರ ನಿಷೇಧಾಜ್ಞೆ ಅಸ್ತ್ರವನ್ನು ಪ್ರಯೋಗಿಸಿದ್ದು ಡಿ.31ರ ಸಂಜೆ 6ರಿಂದ ಜನವರಿ ಬೆಳಗ್ಗೆ 6ರವರೆಗೆ ಬೆಂಗಳೂರಿನಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದೆ.

ಹೊಸ ವರ್ಷಾಚರಣೆಯನ್ನು ಸಂಭ್ರಮದಿಂದ ಆಚರಿಸುವಂತಿಲ್ಲ. ಪಟಾಕಿ ಸಿಡಿಸುವಂತಿಲ್ಲ. 2020ರ ಸ್ವಾಗತಕ್ಕೆ ಸಿದ್ಧವಾಗಿದ್ದಂತೆ ಈ ಬಾರಿ ಆಚರಣೆ ಮಾಡುವಂತಿಲ್ಲ. ನೃತ್ಯ ಸಂಗೀತ ಕಾರ್ಯಕ್ರಮಗಳಿಗೆ ಅವಕಾಶವಿಲ್ಲ. ವಿಶೇಷವಾಗಿ ಜೋರಾದ ಶಬ್ದದ ಪಾಶ್ಚಾತ್ಯ ಸಂಗೀತ ಕಾರ್ಯಕ್ರಮಗಳನ್ನು ನಿಷೇಧಿಸಲಾಗಿದೆ.

ಹೊಸ ವರ್ಷಾರಣೆಗೆ ಮಾರ್ಗಸೂಚಿ ಕುರಿತಂತೆ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಪತ್ರಿಕಾಗೋಷ್ಠಿಯಲ್ಲಿ ವಿವರಿಸಿ, ಡಿ.31ರಂದು ಬೆಂಗಳೂರಿನಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆಯಲ್ಲದೆ ಸಾರ್ವಜನಿಕ ಹೊಸ ವರ್ಷಾಚರಣೆ ನಿಷೇಧ ಹೇರಲಾಗಿದೆ. ವಿಶೇಷ ಕಾರ್ಯಕ್ರಮಕ್ಕೆ ಅವಕಾಶ ಇಲ್ಲ. ಈ ಹಿಂದಿನಂತೆ ಸರ್ಕಾರ ನಿಗದಿಪಡಿಸಿರುವ ರಾತ್ರಿ 11ರವರೆಗೆ ಬಾರ್, ರೆಸ್ಟೋರೆಂಟ್, ಪಬ್ ಓಪನ್ ಇರಲಿವೆ ಎಂದ ಅವರು, ವಸತಿ ಸಂಕೀರ್ಣಗಳಲ್ಲಿ ನಿವಾಸಿಗಳು ಸೇರಿ ಆವರಣದೊಳಗೆ ಆಚರಿಸಿಕೊಳ್ಳಬಹುದು. ಆದರೆ, ಕೊರೊನಾ ನಿಯಮಾವಳಿಗಳನ್ನು ಉಲ್ಲಂಘನೆ ಮಾಡುವಂತಿಲ್ಲ.

ನಗರದ ಎಲ್ಲ ರೆಸ್ಟೋರೆಂಟ್‌ಗಳಲ್ಲಿ ಕೋವಿಡ್ ನಿಯಮ ಕಡ್ಡಾಯವಾಗಿದೆ. ರೆಸ್ಟೋರೆಂಟ್‌ಗಳಲ್ಲಿ ಮುಂಗಡ ಬುಕ್ಕಿಂಗ್ ಇರಬೇಕು. ಬುಕ್ಕಿಂಗ್ ಕೂಪನ್ ಇದ್ದರೆ ಮಾತ್ರ ರೆಸ್ಟೋರೆಂಟ್‌ಗಳಿಗೆ ಪ್ರವೇಶ. ಕೂಪನ್ ಇಲ್ಲವಾದರೆ ಅಂತಹವರಿಗೆ ಪ್ರವೇಶ ನೀಡುವಂತಿಲ್ಲ. ಇದು ಪಬ್, ಬಾರ್‌ಗಳಿಗೂ ಅನ್ವಯವಾಗಲಿದೆ. ಕೂಪನ್ ಪಡೆದವರು ನಿಗದಿತ ಸಮಯದಲ್ಲಿ ಹೋಟೆಲ್, ಪಬ್‌ಗಳಲ್ಲಿ ಕುಳಿತಿರಬೇಕು. ಹೊರಗೆ ಬರುವಂತಿಲ್ಲ ಎಂದು ತಿಳಿಸಿದರು.



ಕೇವಲ ಪ್ರಮುಖ ರಸ್ತೆಗಳಲ್ಲಿ ಮಾತ್ರ ಇದು ಅನ್ವಯವಾಗುವುದಿಲ್ಲ. ಇಡೀ ಬೆಂಗಳೂರಿಗೆ ಅನ್ವಯವಾಗಲಿದೆ. ನಿಯಮಾವಳಿ ಉಲ್ಲಂಘಿಸಿ ಪಾರ್ಟಿಗಳನ್ನು ಮಾಡಿದಲ್ಲಿ ಪೊಲೀಸರು ಅಂತಹವರಿಗೆ ತಕ್ಕಶಾಸ್ತಿ ಮಾಡಲಿದ್ದಾರೆ. ಡಿ.31ರ ಸಂಜೆಯಿಂದಲೇ ಎಲ್ಲ ರಸ್ತೆಗಳಲ್ಲಿ ಡ್ರಂಕ್ ಅಂಡ್ ಡ್ರೈವ್ ತಪಾಸಣೆ ಮಾಡಲಾಗುತ್ತದೆ ಮದ್ಯ ಸೇವಿಸಿ ವಾಹನ ಚಲಾಯಿಸಿದಲ್ಲಿ ವಾಹನ ಜಪ್ತಿ ಮಾಡಲಾಗುತ್ತದೆ. ಇನ್ನು ಡಿ. 31ರ ರಾತ್ರಿಯಿಂದ ಎಲ್ಲ ಮೇಲ್ಸೇತುವೆಗಳ ಮೇಲೆ ವಾಹನ ಸಂಚಾರವನ್ನು ನಿರ್ಬಂಧಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.

> “ನಿಷೇಧಾಜ್ಞೆ ಜಾರಿ ಮಾಡಿರುವುದರಿಂದ ಎಂ.ಜಿ ರೋಡ್, ಬ್ರಿಗೇಡ್ ರೋಡ್, ಚರ್ಚ್ ಸ್ಟ್ರೀಟ್, ಇಂದಿರಾನಗರ, ಕೋರಮಂಗಲದಲ್ಲಿ ಜನಸಂದಣಿ ಸೇರುವಂತಿಲ್ಲ. 5 ಮಂದಿಗಿಂತ ಹೆಚ್ಚು ಗುಂಪು ಸೇರಿದರೆ ಅವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳಲಾಗುತ್ತದೆ.
>
> ■ **ಕಮಲ್‌ಪಂತ್**
> । ನಗರ ಪೊಲೀಸ್ ಆಯುಕ್ತ

# ಮುಂಬಡ್ತಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಬಿಬಿಎಂಪಿಯಲ್ಲಿ ಖಾಲಿ ಇರುವ ಲೆಕ್ಕಪರಿಶೋಧನಾಧಿಕಾರಿ ಹುದ್ದೆಗಳಿಗೆ ಅರ್ಹ ಲೆಕ್ಕಾಧೀಕ್ಷರುಗಳಿಗೆ ಮುಂಬಡ್ತಿ ನೀಡಲು ತೀರ್ಮಾನಿಸಲಾಗಿದ್ದು, ಅರ್ಜಿಗಳನ್ನು ಆಹ್ವಾನಿಸಿದೆ.

ಬಟವಾಡೆ ಅಧಿಕಾರಿಗಳು ತಮ್ಮ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಲೆಕ್ಕಪರಿಶೋಧನಾಧಿಕಾರಿ ಹುದ್ದೆಗೆ ಅರ್ಹರಿದ್ದಲ್ಲಿ ಅಂತಹ ಲೆಕ್ಕಾಧೀಕ್ಷಕರ ಸೇವಾ ಪುಸಕ್ತ, ವಿದ್ಯಾರ್ಹತೆ ಪ್ರಮಾಣಪತ್ರ, ಇಲಾಖೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ಪ್ರಮಾಣ ಪತ್ರಗಳು, 2017–18 ರಿಂದ 2019–20 ವರೆಗೆ ಮೂರು ವರ್ಷ ಕಾರ್ಯ ನಿರ್ವಾಹಣಾ ವರದಿ ಸಲ್ಲಿಸಬೇಕು. ಜತೆಗೆ ಮುಂಬಡ್ತಿ ಇಚ್ಛೆ ಇರುವ ಅಥವಾ ಇಲ್ಲದಿರುವ ಬಗ್ಗೆ ಪತ್ರ ಮತ್ತು ನಿಗದಿತ ನಮೂನೆ ಭರ್ತಿ ಮಾಡಿ ದೃಢಿಕರಣದೊಂದಿಗೆ ಏಳು ದಿನದಲ್ಲಿ ಸಲ್ಲಿಕೆ ಮಾಡುವಂತೆ ಸೂಚಿಸಲಾಗಿದೆ ಎಂದು ಬಿಬಿಎಂಪಿ ಆಡಳಿತ ವಿಭಾಗದ ಉಪ ಆಯುಕ್ತ ಲಿಂಗಮೂರ್ತಿ ಮಾಹಿತಿ ನೀಡಿದ್ದಾರೆ.

ಹೊಸ ದಿಗಂತ



## ಅನುದಾನ ಒದಗಿಸಲು ಶಿಕ್ಷಣ ಇಲಾಖೆ ಹಿಂದೇಟು | ನಗರ ಜಿಲ್ಲಾ ಪಂಚಾಯಿತಿ, ಬಿಬಿಎಂಪಿ ಮಧ್ಯೆ ಸಮನ್ವಯ ಕೊರತೆ

# ನಿರ್ವಹಣೆ ಗೊಂದಲ: ಸರ್ಕಾರಿ ಶಾಲೆಗಿಲ್ಲ ಮೇಲ್ದರ್ಜೆ ಭಾಗ್ಯ

• ಡಿ.ವಿ. ಸಂಜೀವ್



**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಗೆ ಸೇರಿರುವ ಹೊಸ ಪ್ರದೇಶಗಳಲ್ಲಿರುವ ಸರ್ಕಾರಿ ಶಾಲೆಗಳನ್ನು ಬೆಂಗಳೂರು ನಗರ ಜಿಲ್ಲೆ ತೆಕ್ಕೆಯಿಂದ ಪಾಲಿಕೆಗೆ ವಹಿಸುವ ಪ್ರಸ್ತಾವ ಕಾಗದದಲ್ಲೇ ಉಳಿದಿದೆ. ಅನುದಾನದ ಕೊರತೆ ಹಾಗೂ ನಿರ್ವಹಣೆ ಹೊಣೆಗಾರಿಕೆ ವರ್ಗಾವಣೆ ಆಗದ ಕಾರಣ ಇಂತಹ ಶಾಲೆಗಳು ಮೇಲ್ದರ್ಜೆಗೇರುವ ಭಾಗ್ಯದಿಂದ ವಂಚಿತವಾಗಿವೆ.

2008ರಲ್ಲಿ ಹೊಸ ಪ್ರದೇಶಗಳನ್ನು ಬಿಬಿಎಂಪಿಗೆ ಸೇರಿಸಲಾಯಿತು. ಈ ವೇಳೆ ಕಂದಾಯ ಸ್ವತ್ತುಗಳ ಸಹಿತ ಆಸ್ಪತ್ರೆಗಳನ್ನು ಪಾಲಿಕೆ ವಹಿಸಿಕೊಂಡರೂ, ಅಲ್ಲಿದ್ದ ಸರ್ಕಾರಿ ಶಾಲೆಗಳನ್ನು ಸುಪರ್ದಿಗೆ ಪಡೆಯಲಿಲ್ಲ. ಈ ಕಾರಣದಿಂದಾಗಿ ಬಿಬಿಎಂಪಿಯ ಹೊಸ ಪ್ರದೇಶದಲ್ಲಿರುವ ಶಾಲೆಗಳನ್ನು ಈಗಲೂ ನಗರ ಜಿಲ್ಲೆಯೇ ನಿರ್ವಹಿಸುತ್ತಿದೆ. ಕಾಲಮಿತಿಯೊಳಗೆ ಬಿಬಿಎಂಪಿ ಸುಪರ್ದಿಗೆ ತೆಗೆದುಕೊಳ್ಳಲಾಗುವುದು ಎಂಬ ಸರ್ಕಾರದ ಭರವಸೆ ಇನ್ನೂ ಈಡೇರಿಲ್ಲ. ಈಗ ನಗರ ಜಿಪಂ ತನ್ನದಲ್ಲದ ವ್ಯಾಪ್ತಿಯಲ್ಲಿರುವ ಶಾಲೆಗಳಿಗೆ ವೃಥಾ ಕೋಟ್ಯಂತರ ರೂ. ಖರ್ಚು ಮಾಡಲು ತಗಾದೆ ತೆಗೆದಿದೆ.

ದಿಗಂತ ವಿಶೇಷ

**ನಿರ್ವಹಣಾ ವೆಚ್ಚ ಏರಿಕೆ:** ಪಾಲಿಕೆ ವ್ಯಾಪ್ತಿಯೊಳಗಿನ ಸರ್ಕಾರಿ ಶಾಲೆಗಳಿಗೆ ವಾರ್ಷಿಕವಾಗಿ ಕೇವಲ 12 ಸಾವಿರ ರೂ. ಮಾತ್ರ ನಿರ್ವಹಣಾ ವೆಚ್ಚಕ್ಕಾಗಿ ನೀಡಲಾಗುತ್ತಿದೆ. ಈ ಹಣದಲ್ಲಿ ಮಾಸಿಕ ವಿದ್ಯುತ್ ಬಿಲ್, ಕುಡಿಯುವ ನೀರಿನ ಬಿಲ್, ಶೌಚಾಲಯ ಸ್ವಚ್ಛತೆ ಸೇರಿ ವಾರ್ಷಿಕ 60 ಸಾವಿರ ರೂ.ಗಳಿಂದ 1 ಲಕ್ಷ ರೂ. ಹೊರೆ ಬರಲಿದೆ. ಇಷ್ಟು ಹಣವನ್ನು ಸರ್ಕಾರ ನೀಡದ ಕಾರಣ ಕೆಲ ಶಾಲೆಗಳು ದಾನಿಗಳ ಮೊರೆ ಹೋಗಿವೆ. ಇದರ ಹೊರತಾಗಿ ಬಿಬಿಎಂಪಿ ಶಾಲೆಗಳಲ್ಲಿ ಸ್ವಲ್ಪಮಟ್ಟಿಗೆ ಅಧಿಕ ಹಣ ನೀಡುತ್ತಿದ್ದರೂ, ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮನೆ ಮಾಡಿದೆ. ಈ ಸಮಸ್ಯೆಯನ್ನು ನೀಗಿಸಲು ಶಿಕ್ಷಣ ಇಲಾಖೆ ಮುಂದಾಗಿಲ್ಲ.

**ನಿರ್ವಹಣೆ ವೆಚ್ಚ ಭರಿಸುವವರು ಯಾರು?:** ಬಿಬಿಎಂಪಿ ಹಳೆಯ 100 ವಾರ್ಡ್‌ಗಳಲ್ಲಿ 64 ಶಾಲೆಗಳಿವೆ. ಹೊಸ ಪ್ರದೇಶದಲ್ಲಿ 400 ಸರ್ಕಾರಿ ಶಾಲೆಗಳಿದ್ದು, ಇವುಗಳ ವಿಲೀನ ಆಗದೆ ನಗರ ಜಿಪಂ ನಿರ್ವಹಣೆಗೆ ದೊಡ್ಡ ಮೊತ್ತವನ್ನು ಭರಿಸುತ್ತಿದೆ. ಈ ಹೊಣೆಗಾರಿಕೆಯಿಂದ ಬಿಡುಗಡೆಗೊಳಿಸುವಂತೆ ನಗರ ಜಿಪಂ ಹಲವು ಬಾರಿ ಬಿಬಿಎಂಪಿ ಹಾಗೂ ಶಿಕ್ಷಣ ಇಲಾಖೆಗೆ ಮನವಿ ಸಲ್ಲಿಸಿದೆ. ಜನಪ್ರತಿನಿಧಿಗಳು ಕೂಡ ಸ್ಪಷ್ಟ ನಿರ್ಧಾರ ಕೈಗೊಳ್ಳುವಂತೆ ಸರ್ಕಾರದ ಮೇಲೆ ಒತ್ತಡ ಹೇರಿದ್ದಾರೆ. ವಿಧಾನಮಂಡಲದಲ್ಲಿ ವಿಷಯ ಪ್ರಸ್ತಾಪಗೊಂಡಾಗ ಶೀಘ್ರದಲ್ಲಿ ಪರಿಹಾರ ಒದಗಿಸುವ ಭರವಸೆ ನೀಡಿತ್ತಾದರೂ, ಈವರೆಗೆ ಯಾವುದೇ ನಿರ್ಧಾರ ಹೊರಬಿದ್ದಿಲ್ಲ. ಶಿಕ್ಷಣ ಇಲಾಖೆ ಅನುದಾನದ ಲಭ್ಯತೆ ಮುಂದೊಡ್ಡಿ ನಿಲುವು ಕೈಗೊಂಡಿಲ್ಲ. ನಿರ್ವಹಣೆ ವೆಚ್ಚ ಭರಿಸುವ ವಿಚಾರ ಬಗೆಹರಿಯದ ಕಾರಣ ಸಮಸ್ಯೆ ಕಗ್ಗಂಟಾಗಿಯೆ ಉಳಿದಿದೆ.



### ಪಾಲಿಕೆಗೆ ನೀಡಿ, ಸರ್ಕಾರಿ ಶಾಲೆ ಉಳಿಸಿ

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿಯ ಶಿಕ್ಷಣ ಸ್ಥಾಯಿ ಸಮಿತಿ ವತಿಯಿಂದ ಪಾಲಿಕೆ ವ್ಯಾಪ್ತಿಯೊಳಗಿನ ಸರ್ಕಾರಿ ಶಾಲೆಗಳನ್ನು ಬಿಬಿಎಂಪಿಗೆ ಹಸ್ತಾಂತರ ಮಾಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಆದರೆ, ಕೊರೋನಾ ಇರುವುದರಿಂದ ಆಸ್ಪತ್ರೆಗಳನ್ನು ಮಾತ್ರ ಬಿಬಿಎಂಪಿ ವಹಿಸಿಕೊಂಡಿದೆ. ಮುಂದಿನ ದಿನಗಳಲ್ಲಿ ಬಿಬಿಎಂಪಿ ಹಾಗೂ ಸರ್ಕಾರ ಚರ್ಚೆ ನಡೆಸಿ ಬಿಬಿಎಂಪಿ ನೀಡಬಹುದಾಗಿದೆ. ಕೋವಿಡ್‌ನಿಂದ ಆರ್ಥಿಕ ಸಂಕಷ್ಟದಲ್ಲಿರುವ ಪಾಲಕರಿಗೆ ಮಕ್ಕಳಿಗೆ ಸರ್ಕಾರಿ ಮತ್ತು ಪಾಲಿಕೆ ಶಾಲೆಗಳು ಅಗತ್ಯವಾಗಿದ್ದು, ಉತ್ತಮ ನಿರ್ವಹಣೆ ಮಾಡಿದಲ್ಲಿ ಮಕ್ಕಳ ದಾಖಲಾತಿ ಹೆಚ್ಚಾಗಲಿದೆ ಎಂದು ಜಿಲ್ಲಾ ಪಂಚಾಯಿತಿ ಶಿಕ್ಷಣ ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಜಿ.ನರಸಿಂಹಮೂರ್ತಿ ತಿಳಿಸಿದರು.



### ಸರ್ಕಾರಿ ಶಾಲೆ ಉಳಿಸಿ

ರಾಜಧಾನಿ ಬೆಂಗಳೂರಿನಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ ಕ್ಷೀಣಿಸುತ್ತಿದೆ. ಇದೇ ಹಾದಿಯಲ್ಲಿ ಕನ್ನಡ ಶಾಲೆಗಳು ಕೂಡ ವರ್ಷದಿಂದ ವರ್ಷಕ್ಕೆ ಕುಸಿಯತೊಡಗಿವೆ. ಗುಣಮಟ್ಟದ ಶಿಕ್ಷಣ ಹಾಗೂ ನಿರ್ವಹಣೆ ಕಾರಣದಿಂದ ಪಾಲಿಕೆ ಒಳಗೊಂಡಂತೆ ಸರ್ಕಾರಿ ಶಾಲೆಗಳು ಕಳಾಹೀನವಾಗಿವೆ. ಕೆಲವು ಮೇಲ್ದರ್ಜೆಗೇರಿದ್ದರೂ, ವಿದ್ಯಾರ್ಥಿಗಳ ಕೊರತೆ ಎದುರಿಸುತ್ತಿವೆ. ಈ ಅಂಶಗಳನ್ನು ಗಮನಿಸಿ ಸರ್ಕಾರ ಶಾಲೆ ಉಳಿಸಲು ಗಂಭೀರ ಹೆಜ್ಜೆ ಇಡಲಿ ಎಂಬುದು ಹೊಸದಿಗಂತ ಪತ್ರಿಕೆಯ ಕಳಕಳಿಯಾಗಿದೆ.

ಹೊಸ ದಿಗಂತ ಕಳಕಳಿ

"ಬಿಬಿಎಂಪಿ ವ್ಯಾಪ್ತಿಯೊಳಗಿನ ಎಲ್ಲಾ ಸರ್ಕಾರಿ ಶಾಲೆಗಳನ್ನು ಪಾಲಿಕೆಯ ನಿರ್ವಹಿಸುವಂತೆ ಕೋರಿ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಕೋವಿಡ್‌ನಿಂದ ಆರ್ಥಿಕ ಸಂಕಷ್ಟದಲ್ಲಿರುವ ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಲು ಮುಂದಾಗಿದ್ದಾರೆ. ನಿರ್ವಹಣೆ ಸಮಸ್ಯೆಗೆ ಪರಿಹಾರ ಒದಗಿಸಿದರೆ ಮಕ್ಕಳ ದಾಖಲಾತಿ ಹೆಚ್ಚಲಿದೆ.

■ ಟಿ.ಜಿ.ನರಸಿಂಹಮೂರ್ತಿ, ಬೆಂಗಳೂರು ನಗರ ಜಿಪಂ ಶಿಕ್ಷಣ ಸ್ಥಾಯಿ ಸಮಿತಿ ಅಧ್ಯಕ್ಷ

"ಬೆಂಗಳೂರು ನಗರ ಜಿಲ್ಲೆಯಲ್ಲಿನ ಸರ್ಕಾರಿ ಶಾಲೆಗಳನ್ನು ಪಾಲಿಕೆ ತೆಕ್ಕೆಗೆ ನೀಡುವುದು ಒಳ್ಳೆಯ ಬೆಳವಣಿಗೆ. ಇದರಿಂದ ಶಾಲೆಗಳು ಉತ್ತಮ ಮಟ್ಟಕ್ಕೆ ಏರುವ ವಿಶ್ವಾಸ ಇದೆ. ಈಗಾಗಲೇ ಆಸ್ಪತ್ರೆಗಳ ನಿರ್ವಹಣೆಯನ್ನು ಪಾಲಿಕೆಗೆ ಹಸ್ತಾಂತರಿಸಿರುವುದರಿಂದ ಶಾಲೆಗಳನ್ನು ಕೂಡ ಇದೇ ರೀತಿ ವಹಿಸುವುದು ಉತ್ತಮ ನಡೆಯಾದೀತು.

■ ಮುನೀಂದ್ರಕುಮಾರ್, ಬಿಬಿಎಂಪಿಯ ಮಾಜಿ ಆಡಳಿತ ಪಕ್ಷದ ನಾಯಕ



ಹೊಸ ದಿಗಂತ

ಹೊಸ ದಿಗಂತ 12
29 Dec 2020

# ಸೇತುವೆ ನಿರ್ಮಾಣಕ್ಕೆ ಶೀಘ್ರ ಚಾಲನೆ: ಮುನಿರತ್ನ

**ಬೆಂಗಳೂರು:** ಸಂಚಾರ ದಟ್ಟಣೆ ನಿವಾರಿಸಲು ಕೆಳ ಸೇತುವೆ ನಿರ್ಮಾಣ ಕಾಮಗಾರಿಗೆ ಶೀಘ್ರವೇ ಚಾಲನೆ ನೀಡಲಾಗುವುದು ಎಂದು ಶಾಸಕ ಮುನಿರತ್ನ ಹೇಳಿದರು. ಜ್ಞಾನಭಾರತಿ ವಾರ್ಡ್‌ನ ಡಿ ಗ್ರೂಪ್, ಆರ್‌ಎಚ್‌ಸಿಎಸ್ ಬಡಾವಣೆಯಲ್ಲಿ



ಹಮ್ಮಿಕೊಂಡಿದ್ದ ಜನ ಸಂಪರ್ಕ ಸಭೆಯಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ವಿಚಾರಿಸಿದರು. ಹೊರವರ್ತುಲ ರಸ್ತೆಯ ಅನ್ನಪೂರ್ಣೇಶ್ವರಿ ನಗರ, ಅಂಬೇಡ್ಕರ್ ಕಾಲೇಜು ಸಮೀಪ ಹೆಚ್ಚಿನ ಸಂಚಾರ ದಟ್ಟಣೆ ಇದೆ. ಇಲ್ಲಿ ಹೊಸದಾಗಿ ಅಂಡರ್‌ಪಾಸ್ ನಿರ್ಮಿಸುವ ಕಾಮಗಾರಿಗೆ ಶೀಘ್ರ, ಚಾಲನೆ ನೀಡಲಾಗುವುದು. ಎಲ್ಲಾ ಪ್ರಮುಖ ರಸ್ತೆಗಳ ಅಭಿವೃದ್ಧಿ, ಡಾಂಬರೀಕರಣ ಕೈಗೊಳ್ಳಲಾಗುವುದು ಎಂದರು. ಪ್ರತಿ ಶನಿವಾರ ಮತ್ತು ಭಾನುವಾರ ಜನರ ಮನೆ ಬಳಿಗೆ ಹೋಗಿ ಅವರ ಕಷ್ಟ ಸುಖವನ್ನು ವಿಚಾರಿಸಿ ಸ್ಥಳದಲ್ಲಿಯೆ ಪರಿಹಾರ ದೊರಕಿಸಿಕೊಡುವ ಪ್ರಯತ್ನ ಮಾಡಲಾಗುವುದು. ನಾಗರಿಕರಿಗೆ ಯಾವುದೇ ಸಮಸ್ಯೆಯಾಗದಂತೆ ಪ್ರತಿವಾರ ಒಂದೊಂದು ವಾರ್ಡ್ ವ್ಯಾಪ್ತಿಯಲ್ಲಿ ಪಾದಯಾತ್ರೆ ಕೈಗೊಳ್ಳುತ್ತೇನೆ. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳಿಗೆ ಎಲ್‌ಇಡಿ ದೀಪ ಹಾಗೂ ಎರಡು ಕಡೆ ಯೋಗ ಮತ್ತು ಧ್ಯಾನಕೇಂದ್ರ ಆರಂಭಿಸಲಾಗುವುದು ಎಂದು ಶಾಸಕರು ವಿವರಿಸಿದರು. ಸ್ಥಳೀಯ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘಗಳ ಒಕ್ಕೂಟದ ಅಧ್ಯಕ್ಷ ಜಯರಾಮಯ್ಯ. ಬಿಜೆಪಿ ಮುಖಂಡ ಎಂ.ಮಂಜುನಾಥ್, ಪಿ.ಕಾಳೇಗೌಡ ಮತ್ತಿತರರಿದ್ದರು.

ಹೊಸ ದಿಗಂತ

# 654 ಸೋಂಕಿತರು ಮನೆಗೆ

**ಬೆಂಗಳೂರು:** ನಗರದಲ್ಲಿ ಸೋಮವಾರ 308 ಜನರಿಗೆ ಕೊರೋನಾ ಸೋಂಕು ದೃಢಪಟ್ಟಿದೆ. 654 ಸೋಂಕಿತರು ಆಸ್ಪತ್ರೆಯಿಂದ ಮನೆಗೆ ತೆರಳಿದ್ದು, 5 ಜನರು ಮೃತರಾಗಿದ್ದಾರೆ. ನಗರದಲ್ಲಿ ಒಟ್ಟು 3,86,908 ಸೋಂಕಿತರು ದೃಢಪಟ್ಟಿದ್ದು, ಒಟ್ಟು 4,304 ಜನರು ಸೋಂಕಿಗೆ ಬಲಿಯಾಗಿದ್ದಾರೆ. ಇಲ್ಲಿಯವರೆಗೆ 3,74,378 ಜನರು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಕೋವಿಡ್-19ಕ್ಕೆ ಮೀಸಲಾದ ಆಸ್ಪತ್ರೆಗಳು, ಆರೋಗ್ಯ ಕೇಂದ್ರಗಳು ಹಾಗೂ ಆರೈಕೆ ಕೇಂದ್ರಗಳು ಒಳಗೊಂಡಂತೆ 8,225 ಜನ ಸಕ್ರಿಯ ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದಾರೆ. ಸೋಮವಾರದ ಬಿಬಿಎಂಪಿ ವರದಿಯಲ್ಲಿ 12,20,322 ಜನರನ್ನು ಪ್ರಾಥಮಿಕ ಸಂಪರ್ಕಿತರನ್ನು ಗುರುತಿಸಲಾಗಿದ್ದು, ದ್ವಿತೀಯ ಸಂಪರ್ಕಿತರನ್ನು 14,21,165 ಜನರನ್ನು ಗುರುತಿಸಲಾಗಿದೆ. ಇದರಲ್ಲಿ ಪಾಸಿಟಿವ್ ಪ್ರಮಾಣ ಶೇ.6.85 ರಷ್ಟಿದೆ. ಕೊರೋನಾಕ್ಕೆ ಮೃತರಾಗುತ್ತಿರುವ ಪ್ರಮಾಣ ಶೇ.1.11 ರಷ್ಟಿದ್ದು, ಗುಣಮುಖಿ ಹೊಂದುತ್ತಿರುವವರ ಪ್ರಮಾಣ ಶೇ.96.76ಕ್ಕೆ ಏರಿದೆ.

ಹೊಸ ದಿಗಂತ

ಹೊಸ ದಿಗಂತ



29 Dec 2020

## ಅಧಿಕಾರಿಗಳಿಗೆ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಸೂಚನೆ

# ರಸ್ತೆಗುಂಡಿ ಮುಚ್ಚಲು 10 ದಿನ ಗಡುವು



**ಬೆಂಗಳೂರು:** ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಬಹುತೇಕ ಕಡೆ ಮುಚ್ಚಲಾಗಿದೆ. ಈ ಕಾರ್ಯಕ್ಕೆ ವೇಗ ನೀಡಿ ನಿಗದಿತ ಸಮಯದಲ್ಲಿ ಎಲ್ಲಾ ಗುಂಡಿಗಳನ್ನು ಮುಚ್ಚಲು ಕ್ರಮವಹಿಸಬೇಕು ಎಂದು ಆಡಳಿತಾಧಿಕಾರಿ ಗೌರವ್ ಗುಪ್ತಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಮೂಲಭೂತ ಸೌಕರ್ಯ ವಿಭಾಗದಿಂದ ರಸ್ತೆ ಗುಂಡಿ, ಬೀದಿ ದೀಪ ಅಳವಡಿಗೆ, ಯಾಂತ್ರಿಕ ಕಸ ಗುಡಿಸುವ ಯಂತ್ರ, ಹಾಗೂ ವಾರ್ಷಿಕ ರಸ್ತೆ ನಿರ್ವಹಣೆ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ಈ ಸಂಬಂಧ ನಾಳೆಯಿಂದಲೇ ಡಾಂಬರು ಮಿಶ್ರಣ ಘಟಕ(ಹಟ್ ಮಿಕ್ಸ್ ಪ್ಲಾಂಟ್)ದಿಂದ ಎಲ್ಲಾ 8 ವಲಯಗಳಿಗೂ ಪ್ರತಿ ನಿತ್ಯ ಎರಡು ಲೋಡ್ ಕಳುಹಿಸಿ 10 ದಿನಗಳಲ್ಲಿ ಎಲ್ಲಾ ಗುಂಡಿಗಳನ್ನು ಮುಚ್ಚಬೇಕು ಎಂದರು. ನಗರದ ಬೀದಿ ದೀಪಗಳ ನಿರ್ವಹಣೆ ಕಾರ್ಯವು ಅಪೇಕ್ಷಿತ ಮಟ್ಟದಲ್ಲಿ ನಿರ್ವಹಿಸುತ್ತಿಲ್ಲ, ಹೀಗಾಗಿ, ಟೆಂಡರ್ ಪ್ರಕ್ರಿಯೆಗೆ ವೇಗೆ ನೀಡಿ ಬೀದಿ ದೀಪಗಳ ನಿರ್ವಹಣೆಗೆ ತ್ವರಿತವಾಗಿ ಕಾರ್ಯಾದೇಶ ನೀಡಬೇಕು. ಜೊತೆಗೆ ಬೀದಿ ದೀಪ ಅಳವಡಿಸುವ ಸಂಬಂಧ ಆಯಾ ವಲಯ ಮುಖ್ಯ ಅಭಿಯಂತರರು ಹೆಚ್ಚು ಗಮನಹರಿಸಬೇಕು ಎಂದು ಸೂಚನೆ ನೀಡಿದರು. ಪಾಲಿಕೆ ವ್ಯಾಪ್ತಿಯ ಆರ್ಟಿರಿಯಲ್ ಹಾಗೂ ಸಬ್ ಆರ್ಟಿರಿಯಲ್ ರಸ್ತೆಗಳ ಸಮರ್ಪಕ ನಿರ್ವಹಣೆಗಾಗಿ ಈಗಾಗಲೇ ಟೆಂಡರ್ ಆಹ್ವಾನಿಸಿದ್ದು, ಟೆಂಡರ್ ಪ್ರಕ್ರಿಯೆಯನ್ನು ತ್ವರಿತಗೊಳಿಸಿ, ನಿರ್ವಹಣೆ ಕಾರ್ಯವನ್ನು ಪ್ರಾರಂಭಿಸಲು ಸೂಚನೆ ನೀಡಿದರು.

ಹೊಸ ದಿಗಂತ

ಹೊಸ ದಿಗಂತ



29 Dec 2020

## ನಗರ ಪೊಲೀಸ್ ಆಯುಕ್ತರ ಸ್ಪಷ್ಟನೆ | ನಿಯಮ ಉಲ್ಲಂಘನೆಗೆ ಕಠಿಣ ಕ್ರಮ

# ಹೊಸ ವರ್ಷಾಚರಣೆಗೆ ಸಂಗೀತ, ನೃತ್ಯ ಇಲ್ಲ

**ಬೆಂಗಳೂರು:** ರೂಪಾಂತರ ಕೊರೋನಾ ಸೋಂಕಿನ ಭೀತಿ ಇರುವ ಹಿನ್ನೆಲೆಯಲ್ಲಿ ನಗರದಲ್ಲಿ ಈ ಬಾರಿ ಹೊಸ ವರ್ಷಾಚರಣೆ ಸಂದರ್ಭದಲ್ಲಿ ರಸ್ತೆಯಲ್ಲಿ ಆಚರಣೆ ಮಾಡುವುದನ್ನು ನಿಷೇಧಿಸಲಾಗಿದೆ. ಲೈವ್‌ಬ್ಯಾಂಡ್, ಮ್ಯೂಸಿಕ್, ಡಿಜೆ ಕಾರ್ಯಕ್ರಮಗಳನ್ನು ಆಯೋಜಿಸುವಂತಿಲ್ಲ ಎಂದು ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ತಿಳಿಸಿದರು.



ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೋವಿಡ್-19 ನಿಯಮ ಉಲ್ಲಂಘಿಸಿದರೆ ಅಂತವರ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಡಿ.31 ಸಂಜೆ 6ರಿಂದ ಜ.1ರ ಬೆಳಗ್ಗೆ 6ರ ವರೆಗೆ ಈ ಮಾರ್ಗಸೂಚಿಗಳು ಅನ್ವಯವಾಗಲಿವೆ. ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದು ಪಬ್, ಬಾರ್, ರೆಸ್ಟೋರೆಂಟ್‌ಗಳು ಕಾರ್ಯಕ್ರಮ ಆಯೋಜಿಸಬೇಕು ಎಂದು ತಿಳಿಸಿದರು.

ಹೊಸ ವರ್ಷಾರಣೆಯ ಸಂದರ್ಭದಲ್ಲಿ ಜನ ಸೇರುವ(ಪಾರ್ಟಿ) ಹಾಗೂ ದೊಡ್ಡ ಸಮಾರಂಭಗಳನ್ನು ನಿಷೇಧಿಸಲಾಗಿದೆ. ಸಂಘಟನಾಕಾರರು ನಿಯಮ ಉಲ್ಲಂಘನೆ ಮಾಡಿದರೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆಯಡಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಎಚ್ಚರಿಕೆ ನೀಡಿದರು.

**ಸಭೆ-ಸಮಾರಂಭ ನಿಷೇಧ:** ಡಿ.30 ರಿಂದ ಜ.2ರವರೆಗೆ ಎಲ್ಲ ರೀತಿಯ ವಿಶೇಷ ಸಣ್ಣ ಮತ್ತು ದೊಡ್ಡ ಔತಣ ಕೂಟ, ಕಾರ್ಯಕ್ರಮ ಹಾಗೂ ಸಭೆ, ಸಮಾರಂಭಗಳು ಸಂಪೂರ್ಣ ನಿಷೇಧಿಸಲಾಗಿದೆ. ಹೋಟೆಲ್, ಕ್ಲಬ್, ಬಾರ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ವಿಶೇಷ ಸಂಘಟಿತ ಸಭೆ ಅಥವಾ ಟಿಕೆಟ್ ಪಡೆದ ಕಾರ್ಯಕ್ರಮಕ್ಕೆ ಅವಕಾಶ ಇರುವುದಿಲ್ಲ. ಮುಚ್ಚಿದ ಸ್ಥಳಗಳಲ್ಲಿ ಶೇ.50ರಷ್ಟು ಅಂದರೆ ಕೇವಲ 200 ಜನಕ್ಕೆ ಮಾತ್ರ ಅವಕಾಶ ನೀಡಬೇಕು. ಜನ ಒಟ್ಟುಗೂಡುವ ಯಾವುದೇ ರೀತಿಯ ಮನೋರಂಜನಾ ಕಾರ್ಯಕ್ರಮಗಳನ್ನು ನಡೆಸುವಂತಿಲ್ಲ. ತೆರೆದ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಡಿಜೆ, ಡ್ಯಾನ್ಸ್ ಹಾಗೂ ವಿಶೇಷ ಒಟ್ಟುಗೂಡುವಿಕೆ ಕಾರ್ಯಕ್ರಮ ನಡೆಸುವಂತಿಲ್ಲ. ನಗರದ ಕ್ಲಬ್, ಬಾರ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ನಿತ್ಯ ತೆರೆದಿರುವುದಕ್ಕೆ ಅನುಮತಿ. ಆದರೆ, ಕೋವಿಡ್ 19 ನಿಯಮಗಳ ಪಾಲನೆ ಮಾಡಬೇಕು.ಥರ್ಮಲ್ ಸ್ಕ್ಯಾನಿಂಗ್ ಹಾಗೂ ಸ್ಯಾನಿಟೈಸರ್ ಕಡ್ಡಾಯ. ಕಡ್ಡಾಯವಾಗಿ ಹಸಿರು ಪಟಾಕಿ ಬಳಸಬೇಕು.

**ಅಗತ್ಯ ಸೇವೆಗಳು ಲಭ್ಯ :** ರಾತ್ರಿ ಕಚೇರಿಯಿಂದ ಮನೆಗೆ ತೆರಳುವವರಿದ್ದರೆ, ಆಸ್ಪತ್ರೆಗೆ ಹೋಗುವವರಿದ್ದರೆ ಇಲ್ಲವೆ ಇತರೆ ಯಾವುದೇ ಅಗತ್ಯ ಸೇವೆಗಾಗಿ ಸಂಚಾರ ನಡೆಸಬಹುದು. ಅವರಿಗೆ ನಮ್ಮ ಕಡೆಯಿಂದ ಯಾವುದೇ ತೊಂದರೆ ಆಗುವುದಿಲ್ಲ, ಆದರೆ, ರಾತ್ರಿ ಜಾಲಿ ರೈಡ್ ಉದ್ದೇಶ ಇಟ್ಟುಕೊಂಡು ಸಂಚಾರ ನಡೆಸಿದರೆ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂದು ಎಚ್ಚರಿಕೆ ನೀಡಿದರು.

**ಎಲ್ಲ ಮೇಲ್ಸೇತುವೆಗಳು ಬಂದ್:** ಹೊಸ ವರ್ಷದ ಸಂಭ್ರಮಾಚರಣೆ ಮಾಡಲು ಕೆಲವರು ಮೇಲ್ಸೇತುವೆಗಳ ಮೇಲೆ ವಾಹನ ನಿಲ್ಲಿಸಿ ಗಲಾಟೆ ಮಾಡುತ್ತಾರೆ. ಇದನ್ನು ತಡೆಗಟ್ಟುವ ಉದ್ದೇಶದಿಂದ ಡಿ.31ರಂದು ರಾತ್ರಿ 8 ಗಂಟೆಯಿಂದ ಮೇಲ್ಸೇತುವೆಗಳು ಬಂದ್ ಮಾಡಲಾಗುವುದು. ನಗರದ ಚರ್ಚ್ ಸ್ಟ್ರೀಟ್, ಎಂಜಿ ರಸ್ತೆ, ಬ್ರಿಗೇಡ್ ರಸ್ತೆ ಹಾಗೂ ಈ ಪ್ರಮುಖ ರಸ್ತೆಗಳನ್ನು ಸಂಪರ್ಕಿಸುವ ಎಲ್ಲ ರಸ್ತೆಗಳು, ಕೋರಮಂಗಲ, ಇಂದಿರಾ ನಗರ ಹಾಗೂ ವೈಟ್‌ಫೀಲ್ಡ್ ರಸ್ತೆ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಗುಂಪು ಸೇರುವಂತಿಲ್ಲ, ಕಾಂಟ್ಯಾಕ್ಟ್ ಲೆಸ್ ಸೇವೆ ಹಾಗೂ ಆನ್‌ಲೈನ್ ಸೇವೆಗೆ ಒತ್ತು ನೀಡಬೇಕು. ಇ-ಟೋಕನ್ ನೀಡಬೇಕು.

### ಡಿ.31 ರಂದು 144 ಸೆಕ್ಷನ್ ಜಾರಿ

**ಹೊಸ ವರ್ಷಾಚರಣೆ ಹಿನ್ನೆಲೆಯಲ್ಲಿ ನಗರದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಡಿ.31 ರಂದು ಸಂಜೆ 6 ರಿಂದ ಜ.1 ಬೆಳಗ್ಗೆ 6ರವರಗೆ ನಿಷೇಧಾಜ್ಞೆ ಜಾರಿ(144 ಸೆಕ್ಷನ್) ಗೊಳಿಸಿ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಆದೇಶ ಹೊರಡಿಸಿದ್ದಾರೆ. ಬೆಂಗಳೂರು ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ 144 ಸೆಕ್ಷನ್ ಜಾರಿಯಲ್ಲಿದ್ದು, ಯಾರೊಬ್ಬರೂ ಸಾರ್ವಜನಿಕ ಸ್ಥಳದಲ್ಲಿ 5ಕ್ಕೂ ಹೆಚ್ಚು ಜನರು ಒಂದೆಡೆ ಸೇರುವಂತಿಲ್ಲ. ಅನುಮಾನಾಸ್ಪದ ರೀತಿಯಲ್ಲಿ ಕಂಡುಬಂದರೆ ಅಂತವರ ಮೇಲೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಆಯುಕ್ತರು ಎಚ್ಚರಿಕೆ ನೀಡಿದರು.**

ಜನದನಿಯ ಸಾರಥಿ
ವಾರ್ತಾ ಭಾರತಿ

ವಾರ್ತಾ ಭಾರತಿ

# ಬಿಬಿಎಂಪಿ ಚುನಾವಣಾ ಕಣಕ್ಕಿಳಿಯಲು ಎಂಐಎಂ ಸಿದ್ಧತೆ

ಬೆಂಗಳೂರು, ಡಿ.28:ಗ್ರೇಟರ್ ಹೈದರಾಬಾದ್ ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಗಮನಾರ್ಹ ಸಾಧನೆ ಮಾಡಿರುವ ಸಂಸದ ಅಸಾದುದ್ದೀನ್ ಉವೈಸಿ ನೇತೃತ್ವದ ಆಲ್ ಇಂಡಿಯಾ ಮಜ್ಲಿಸೆ ಇತ್ತೇಹಾದುಲ್ ಮುಸ್ಲಿಮೀನ್(ಎಐಎಂಐಎಂ) ಪಕ್ಷವು ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಕಣಕ್ಕಿಳಿಯಲು ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ.

ಇತ್ತೀಚೆಗೆ ಎಐಎಂಐಎಂ ಪಕ್ಷದ ಬೆಂಗಳೂರು ಘಟಕವನ್ನು ಪುನರ್ ರಚಿಸಿ ಆದೇಶ ಹೊರಡಿಸಿರುವ ಅಸದುದ್ದೀನ್ ಉವೈಸಿ, ತಳಮಟ್ಟದಿಂದ ಪಕ್ಷ ಸಂಘಟನೆ ಮಾಡಲು ಮುಂದಾಗಿದ್ದಾರೆ. ಅಲ್ಪಸಂಖ್ಯಾತರ ಬಾಹುಳ್ಯವಿರುವ ಪ್ರದೇಶಗಳಲ್ಲಿ ಪ್ರಮುಖವಾಗಿ ಯುವ ಮತದಾರರನ್ನು ಪಕ್ಷದತ್ತ ಆಕರ್ಷಿಸಲು ಪ್ರಯತ್ನಿಸಲಾಗುತ್ತಿದೆ.

ಕಳೆದ ಬಾರಿ ನಡೆದಂತಹ ಬಿಬಿಎಂಪಿ ಚುನಾವಣೆಯಲ್ಲಿ ಎಂಐಎಂ ಸ್ಪರ್ಧಿಸಿದ್ದರೂ, ನಿರೀಕ್ಷಿತಮಟ್ಟದ ಯಶಸ್ಸನ್ನು ಸಾಧಿಸಲು ವಿಫಲವಾಗಿತ್ತು. ಈ ಹಿನ್ನೆಲೆಯಲ್ಲಿ ಮುಂದಿನ ಚುನಾವಣೆಯಲ್ಲಿ ಜೆಡಿಎಸ್ ಪಕ್ಷದ ಜೊತೆ ಹೊಂದಾಣಿಕೆ ಮಾಡಿಕೊಂಡು ಎಂಐಎಂ ಸ್ಪರ್ಧಿಸಲು ಉತ್ಸುಕವಾಗಿದೆ. ಕಳೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಚಾಮರಾಜಪೇಟೆಯಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಅಲ್ತಾಫ್ ಖಾನ್ ಪರವಾಗಿ ಅಸದುದ್ದೀನ್ ಉವೈಸಿ ಪ್ರಚಾರ ಮಾಡಿದ್ದನ್ನು ಸ್ಮರಿಸಬಹುದು.

ಕಾಂಗ್ರೆಸ್ ಹಾಗೂ ಜೆಡಿಎಸ್ ನಡುವಿನ ರಾಜಕೀಯ ಸಂಬಂಧ ಹಳಸುತ್ತಿರುವುದರಿಂದ, ಅಲ್ಪಸಂಖ್ಯಾತರ ಮತಗಳನ್ನು ಪಕ್ಷದ ಕಡೆ ಸೆಳೆಯಲು ಜೆಡಿಎಸ್, ಎಂಐಎಂ ಜೊತೆ ಪಾಲಿಕೆ ಚುನಾವಣೆಗೆ ಸೀಮಿತವಾಗಿ ಸ್ಥಳೀಯವಾಗಿ ಮೈತ್ರಿ ಮಾಡಿಕೊಳ್ಳುವ ಬಗ್ಗೆ ಧನಾತ್ಮಕವಾಗಿ ಚಿಂತನೆ ನಡೆಸುತ್ತಿದೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಕೇಳಿ ಬರುತ್ತಿದೆ.

Bengaluru Edition
Dec 29, 2020 Page No.3

ಜನದನಿಯ ಸಾರಥಿ
ವಾರ್ತಾ ಭಾರತಿ

ಜನದನಿಯ ಸಾರಥಿ
ವಾರ್ತಾ ಭಾರತಿ

# ಹೊಸ ವರ್ಷಾಚರಣೆಗೆ ಮಾರ್ಗಸೂಚಿ ಸಾಮೂಹಿಕ ಸಂಭ್ರಮಾಚರಣೆ ನಿಷೇಧ

ಬೆಂಗಳೂರು, ಡಿ.28: ರೂಪಾಂತರ ಕೊರೋನ ಸೋಂಕು ಹರಡುವ ಭೀತಿ ಹಿನ್ನೆಲೆಯಲ್ಲಿ ಹೊಸ ವರ್ಷಾಚರಣೆಯ ಸಂಭ್ರಮವನ್ನು ಸಾರ್ವಜನಿಕ ಸ್ಥಳಗಳಲ್ಲಿ ಸಾಮೂಹಿಕವಾಗಿ ಆಚರಿಸಲು ರಾಜಧಾನಿ ಬೆಂಗಳೂರಿನಲ್ಲಿ ನಿಷೇಧ ಹೇರಲಾಗಿದೆ.

ಸೋಮವಾರ ಈ ಕುರಿತು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್, ಡಿ. 31ರ ಸಂಜೆ 6 ಗಂಟೆಯಿಂದ ಜ.1ರ ಬೆಳಗ್ಗೆ 6 ಗಂಟೆಯವರೆಗೆ 144 ಸೆಕ್ಷನ್ ಅಡಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, 5ಕ್ಕಿಂತ ಹೆಚ್ಚು ಮಂದಿ ಗುಂಪು ಸೇರುವುದನ್ನು ನಿಷೇಧಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಾರ್ವಜನಿಕ ಸ್ಥಳದಲ್ಲಿ ಆಚರಣೆಗೆ ನಿಷೇಧ ಹೇರಲಾಗಿದೆ ಎಂದ ಅವರು, ಅಪಾರ್ಟ್‌ಮೆಂಟ್‌ಗಳು, ಕ್ಲಬ್‌ಹೌಸ್‌ನಲ್ಲಿ ಹೊರಗಿನವರಿಗೆ ಯಾವುದೇ ತೊಂದರೆಯಾಗದಂತೆ ಹೊಸ ವರ್ಷಾಚರಣೆ ಮಾಡಬಹುದು. ಅದೇ ರೀತಿ ಪಬ್, ರೆಸ್ಟೋರೆಂಟ್‌ಗಳು ಎಂದಿನಂತೆ ಕಾರ್ಯನಿರ್ವಹಿಸಲಿದ್ದು, ರಾಜ್ಯ ಸರಕಾರ ಜಾರಿಗೊಳಿಸಿರುವ ಕೋವಿಡ್-19 ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದರು.

ಪಬ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ಶೇ.50ರಷ್ಟು ಗ್ರಾಹಕರು ಬರಲು ಮಾತ್ರ ಅವಕಾಶ ನೀಡಬೇಕು. ಜತೆಗೆ ಮೊದಲೇ ಕಾಯ್ದಿರಿಸಿದ ಕೂಪನ್ ಪಡೆದ ಗ್ರಾಹಕರು ಮಾತ್ರ ಹೊಟೇಲ್ ಒಳಗೆ ಇರಬೇಕು. ಅವರು ರಸ್ತೆಗೆ ಬಂದು ಗುಂಪು ಸೇರುವುದನ್ನು ಮಾಡಬಾರದು ಎಂದು ಕಮಲ್ ಪಂತ್ ಮಾಹಿತಿ ನೀಡಿದರು.

ರಾತ್ರಿ ಕಚೇರಿಯಿಂದ ಮನೆಗೆ ತೆರಳುವವರಿದ್ದರೆ, ಆಸ್ಪತ್ರೆಗೆ ಹೋಗುವವರಿದ್ದರೆ ಅಥವಾ ಇತರ ಯಾವುದೇ ಅಗತ್ಯ ಸೇವೆಗಾಗಿ ಸಂಚಾರ ನಡೆಸಬಹುದು. ಅವರಿಗೆ ನಮ್ಮ ಕಡೆಯಿಂದ ಯಾವುದೇ ತೊಂದರೆ ಆಗುವುದಿಲ್ಲ. ರಾತ್ರಿ ಜಾಲಿ ರೈಡ್‌ಉದ್ದೇಶ ಇಟ್ಟುಕೊಂಡು ಸಂಚಾರ ನಡೆಸಿದರೆ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂದು ಅವರು ಎಚ್ಚರಿಕೆ ನೀಡಿದರು.

**ಪರಿಶೀಲನೆ:** ಎಂದಿನಂತೆ ರಾತ್ರಿ ವೇಳೆ ಸಂಚಾರ ಪೊಲೀಸರು ವಾಹನಗಳ ತಪಾಸಣೆ ನಡೆಸಲಿದ್ದು, ಮದ್ಯದ ಅಮಲಿನಲ್ಲಿ ವಾಹನ ಚಾಲನೆ ಮಾಡುವವರ ಮೇಲೆ ತೀವ್ರ ನಿಗಾ ಇಡಲಾಗಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದೆಂದು ನುಡಿದರು.

## ಕಠಿಣ ನಿಯಮ

ನಗರದ ಎಂಜಿ ರೋಡ್, ಬ್ರಿಗೇಡ್ ರೋಡ್, ಚರ್ಚ್ ಸ್ಟ್ರೀಟ್, ಕೋರಮಂಗಲ, ಕಮರ್ಷಿಯಲ್ ಸ್ಟ್ರೀಟ್, ಇಂದಿರಾ ನಗರದಲ್ಲಿ ಹೆಚ್ಚಿನ ಪೊಲೀಸರನ್ನು ನಿಯೋಜಿಸಿ ನಿಷೇಧಾಜ್ಞೆ ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುವುದು ಎಂದು ಆಯುಕ್ತರು ತಿಳಿಸಿದರು.

## ಮೇಲ್ಸೇತುವೆ ಬಂದ್

ನಗರ ವ್ಯಾಪ್ತಿಯ ಎಲ್ಲ ಮೇಲ್ಸೇತುವೆ(ಫ್ಲೈ ಓವರ್)ಗಳಲ್ಲಿ ಡಿ.31ರ ರಾತ್ರಿ 8 ಗಂಟೆಯಿಂದ ಮರುದಿನ ಬೆಳಗ್ಗೆವರೆಗೂ ಸಂಚಾರ ಸ್ಥಗಿತಗೊಳಿಸಲು ನಿರ್ಧಾರ ಕೈಗೊಳ್ಳಲಾಗಿದೆ. ಜತೆಗೆ, ನಗರದ ಪ್ರಮುಖ ಪ್ರದೇಶಗಳಲ್ಲಿ ಪೊಲೀಸರನ್ನು ನಿಯೋಜಿಸಿ ನಾಕಾಬಂದಿ ತೀವ್ರಗೊಳಿಸಲಾಗುವುದು ಎಂದು ಕಮಲ್ ಪಂತ್ ಎಚ್ಚರಿಕೆ ನೀಡಿದರು.

## ಮಾರ್ಗಸೂಚಿ ಉಲ್ಲಂಘಿಸಿದರೆ ಕ್ರಮ



ನಗರದ ರಸ್ತೆಯಲ್ಲಿ ದ್ವಿಚಕ್ರ ವಾಹನಗಳಲ್ಲಿ ವ್ಹೀಲಿಂಗ್, ಡ್ರ್ಯಾಗ್ ರೇಸ್ ಮಾಡಿದರೆ ಕಠಿಣ ಕ್ರಮ ಕೈಗೊಳ್ಳುತ್ತೇವೆ. ಜತೆಗೆ, ಕೋವಿಡ್-19 ಮಾರ್ಗಸೂಚಿಗಳನ್ನು ಉಲ್ಲಂಘಿಸಿದರೆ, ವಿಪತ್ತು ನಿರ್ವಹಣಾ ಕಾಯ್ದೆಯಡಿ ಕ್ರಮ ತೆಗೆದುಕೊಳ್ಳಲಾಗುವುದು.

**। ಕಮಲ್ ಪಂತ್, ನಗರ ಪೊಲೀಸ್ ಆಯುಕ್ತ**

ಸಂಜೆವಾಣಿ
1982



ಪಾದರಾಯನಪುರದ ನಿವಾಸಿಗಳಿಗೆ ಕೋವಿಡ್–19 ಕುರಿತಂತೆ ವಿಶೇಷ ಜಾಗೃತಿ ಅಭಿಯಾನ.

# ಹೊಸ ರೂಪದ ಕೊರೊನಾ
## ಪಾದರಾಯನಪುರದಲ್ಲಿ ಜನ ಜಾಗೃತಿ

ಬೆಂಗಳೂರು, ಡಿ.28– ಬ್ರಿಟನ್ ದೇಶದ ರೂಪಾಂತರ ಕೊರೋನಾ ಸೋಂಕು ಹರಡುವ ಭೀತಿ ಹಿನ್ನೆಲೆ ನಗರದ ಪಾದರಾಯನಪುರದ ನಿವಾಸಿಗಳಲ್ಲಿ ಕೋವಿಡ್–19 ಮಾರ್ಗಸೂಚಿಗಳನ್ನು ಪಾಲನೆ ಮಾಡುವಂತೆ ವಿಶೇಷ ಜಾಗೃತಿ ಅಭಿಯಾನ ನಡೆಸಲಾಗುತ್ತಿದೆ.

ಕೊರೋನಾ ಸೋಂಕು ಆರಂಭ ಹಂತದಲ್ಲಿ ತೀವ್ರಟೀಕೆಗೆ ಒಳಗಾಗಿದ್ದ ಪಾದರಾಯನಪುರ ಪ್ರದೇಶದಲ್ಲಿ, ಸದ್ಯ ಕೋವಿಡ್ ಪ್ರಕರಣಗಳು ಗಣನೀಯವಾಗಿ ಸಂಪೂರ್ಣವಾಗಿ ಇಳಿಕೆ ಕಂಡಿವೆ. ಇದೀಗ ಮತ್ತೆ ರೂಪಾಂತರ ಕೊರೋನಾ ಸೋಂಕು ಹರಡುವ ಆತಂಕ ಎದುರಾಗುತ್ತಿರುವ ಹಿನ್ನೆಲೆ ಸ್ವಯಂಪ್ರೇರಿತವಾಗಿ ಅಲ್ಲಿನ ನಿವಾಸಿಗಳು ಎಚ್ಚರವಹಿಸಿ, ಹೊರಭಾಗಗಳಲ್ಲಿ ಆಗಮಿಸುವವರ ಮಾಹಿತಿ ಸಂಗ್ರಹಿಸಲು ಮುಂದಾಗಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಬಿಬಿಎಂಪಿ ಮಾಜಿ ಸದಸ್ಯ ಇಮ್ರಾನ್ ಪಾಷಾ, ಆರಂಭದಲ್ಲಿ ಕೆಲ ಸಣ್ಣ ಘಟನೆಗಳನ್ನೆ ಬಿಂಬಿಸಿ ಕೆಲವರು ಅಪಪ್ರಚಾರ ಮಾಡಿದ ಕಾರಣ ಇಲ್ಲಿನ ನಿವಾಸಿಗಳು ಭಾರೀ ತೊಂದರೆಗೆ ಸಿಲುಕಿದರು.

ಹಾಗಾಗಿ, ಈ ಬಾರಿ ಎಚ್ಚರವಹಿಸಿ ಜಾಗೃತಿ ಮೂಡಿಸುತ್ತಿದ್ದು, ಹೊರಭಾಗಗಳಿಂದ ಬರುವ ಪ್ರಯಾಣಿಕರ ಮೇಲೆ ನಿಗಾ ವಹಿಸಿರುವುದಲ್ಲದೆ, ಅವರ ಮಾಹಿತಿಯನ್ನು ಬಿಬಿಎಂಪಿ ಅಥವಾ ಪೊಲೀಸರಿಗೆ ನೀಡಲಾಗುವುದು ಎಂದು ತಿಳಿಸಿದರು. ಇಲ್ಲಿ ಕೂಲಿ ಕಾರ್ಮಿಕರೇ ಹೆಚ್ಚಿದ್ದು, ಜನಸಂದಣಿಯೂ ಅಧಿಕವಾಗಿದೆ. ಆದರೂ, ವ್ಯಾಪಾರ ವಾಹಿವಾಟು ನಡೆಯುವ ಕಡೆ ಸುರಕ್ಷಿತ ಅಂತರ, ಮಾಸ್ಕ್ ಧರಿಸುವುದು ಕಡ್ಡಾಯಗೊಳಿಸಲಾಗಿದೆ. ಜತೆಗೆ, ಪ್ರಾರ್ಥನಾ ಕೇಂದ್ರಗಳಲ್ಲೂ ಈ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಸಂಜೆವಾಣಿ
1982

# ಬಿಬಿಎಂಪಿಗೆ ದೊಡ್ಡತೋಗೂರು ಸರ್ಕಾರಕ್ಕೆ ಕೋರ್ಟ್ ನೋಟಿಸ್

ಬೆಂಗಳೂರು,ಡಿ.28–ಬಿಬಿಎಂಪಿ ವ್ಯಾಪ್ತಿಗೆ ದೊಡ್ಡತೋಗೂರು ಗ್ರಾಮ ಪಂಚಾಯಿತಿಯನ್ನು ಸೇರಿಸಲು ನಿರ್ದೇಶಿಸುವಂತೆ ಕೋರಿ ಸಲ್ಲಿಸಿರುವ ಅರ್ಜಿ ಸಂಬಂಧ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಈ ಕುರಿತು ದೊಡ್ಡತೋಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಮ್ಮದೇವನಹಳ್ಳಿ ನಿವಾಸಿ ಬಿ.ಎ.ಚೈತ್ರ ಅನಿಲ್ ಸೇರಿದಂತೆ ಪ್ರಮುಖರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಂಬಂಧ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ ನೇತೃತ್ವದ ವಿಭಾಗೀಯ ಪೀಠ, ಪ್ರತಿವಾದಿಗಳಾದ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ, ಪೌರಾಡಳಿತ ಇಲಾಖೆ ನಿರ್ದೇಶಕ, ದೊಡ್ಡತೋಗೂರು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗೆ ನೋಟಿಸ್ ಜಾರಿ ಮಾಡಿತು. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ದೊಡ್ಡತೋಗೂರು ಗ್ರಾಮ ಪಂಚಾಯಿತಿ ಬಿಬಿಎಂಪಿ ಸರಹದ್ದಿನಲ್ಲಿದ್ದು, ಹಲವು ಐಟಿ ಕಂಪೆನಿಗಳು ಇಲ್ಲಿ ಕಾರ್ಯನಿರ್ವಹಿಸುತ್ತಿವೆ. ಈ ಗ್ರಾ.ಪಂ. ವ್ಯಾಪ್ತಿಯಲ್ಲಿ ಕೃಷಿಭೂಮಿ ಇಲ್ಲವಾಗಿದ್ದು, ವಾಣಿಜ್ಯಾತ್ಮಕವಾಗಿ ಸಾಕಷ್ಟು ಅಭಿವೃದ್ಧಿಯಾಗಿದೆ.

ಅದೇರೀತಿ, ದೊಡ್ಡತೋಗೂರಿನಲ್ಲಿ 8 ಸಾವಿರ ಜನಸಂಖ್ಯೆ, ಬೆಟ್ಟದಾಸನಪುರದಲ್ಲಿ 6, ಮೈಲಸಂದ್ರದಲ್ಲಿ 4, ವಿಟ್ಟಸಂದ್ರ ಮತ್ತು ಹೊಮ್ಮದೇವನಹಳ್ಳಿಯಲ್ಲಿ ತಲಾ 4 ಸಾವಿರ ಜನಸಂಖ್ಯೆ ಇದೆ. ಅಲ್ಲದೆ, ಈ ಹಿಂದೆಯೂ ಈ ಗ್ರಾ.ಪಂಚಾಯಿತಿಯನ್ನು ಪುರಸಭೆಯಾಗಿ ಘೋಷಿಸಿದರು ಇದುವರೆಗೂ ಕಾರ್ಯರೂಪಕ್ಕೆ ಬಂದಿಲ್ಲ. ಅಷ್ಟೇ ಅಲ್ಲದೆ, ಈ ಬಾರಿ ಗ್ರಾಪಂಗೆ ಚುನಾವಣೆಯನ್ನೂ ಘೋಷಿಸಲಿಲ್ಲ. ಆದ್ದರಿಂದ ದೊಡ್ಡತೋಗೂರು ಗ್ರಾಮ ಪಂಚಾಯಿತಿಯನ್ನು ಬಿಬಿಎಂಪಿ ವ್ಯಾಪ್ತಿಗೆ ಸೇರಿಸಲು ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಮನವಿ ಮಾಡಿದರು. ತದನಂತರ, ಈ ಕುರಿತು ಪೀಠವು, ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಿ ವಿಚಾರಣೆಯನ್ನು ಮುಂದಿನ ವಾರ್ಷಿಕ ಸಾಲಿನ ಫೆ.4ಕ್ಕೆ ಮುಂದೂಡಿತು.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

# ರೂಪಾಂತರ ಕೊರೊನಾ ಇಂದು ವರದಿ ಬರುವ ಸಾಧ್ಯತೆ

**ಬೆಂಗಳೂರು, ಡಿ.28-** ರೂಪಾಂತರಗೊಂಡ ಬ್ರಿಟನ್ ವೈರಸ್‌ನ ಭೂತ ಭಾರತದಲ್ಲಿ ಹರಡಿದೆಯೇ ಎಂಬ ಬಗ್ಗೆ ಆರೋಗ್ಯ ಇಲಾಖೆ ಅಧಿಕೃತ ಮಾಹಿತಿ ರವಾನಿಸುವ ಸಾಧ್ಯತೆಯಿದೆ.

ಕಳೆದ ಬುಧವಾರ ಮೂವರು ಸೋಂಕಿತರು ಪತ್ತೆಯಾಗಿದ್ದು, ಅವರ ಗಂಟಲು ದ್ರವವನ್ನು ಜೆನಿಟಿಕ್ ಪರೀಕ್ಷೆಗಾಗಿ ರವಾನೆ ಮಾಡಲಾಗಿತ್ತು. ಇದಕ್ಕೆ 72 ಗಂಟೆಗಳ ಕಾಲಾವಕಾಶ ಬೇಕಾದ ಕಾರಣ ಇಂದು ಆರೋಗ್ಯ ಇಲಾಖೆಗೆ ಅಧಿಕೃತ ಮಾಹಿತಿ ರವಾನೆಯಾಗುವ ಸಾಧ್ಯತೆಯಿದೆ.

ಈ ಮೂವರಲ್ಲಿ ರೂಪಾಂತರಗೊಂಡ ವೈರಸ್‌ನ ಪ್ರಾರಂಭಿಕ ಲಕ್ಷಣಗಳಿರುವ ಶಂಕೆ ವ್ಯಕ್ತವಾಗಿದೆ. ವೈರಸ್ ಅಂಶಗಳು ದೃಢಪಟ್ಟರೆ ಸೋಂಕಿತರನ್ನು ತೀವ್ರ ತಪಾಸಣೆಗೆ ಒಳಪಡಿಸುವ ಸಾಧ್ಯತೆಯಿದೆ.

ಈ ಬಗ್ಗೆ ರಾಜ್ಯ ಅಥವಾ ಕೇಂದ್ರ ಸರ್ಕಾರದಿಂದ ಅಧಿಕೃತವಾಗಿ ಘೋಷಣೆಯಾಗುವ ಸಾಧ್ಯತೆಯಿದೆ. ಈ ಮೂವರು ಸೇರಿದಂತೆ ಒಟ್ಟು ಪತ್ತೆಯಾದ 15 ಜನರ ಗಂಟಲು ದ್ರವವನ್ನು ಜೆನಿಟಿಕ್ ಲ್ಯಾಬ್‌ಗೆ ರವಾನೆ ಮಾಡಲಾಗಿದೆ. ಹೆಚ್ಚಿನ ಜನರಲ್ಲಿ ರೂಪಾಂತರಗೊಂಡ ವೈರಸ್ ಲಕ್ಷಣಗಳು ಕಂಡುಬಂದರೆ ಮತ್ತೆ ಆತಂಕ ತಪ್ಪಿದ್ದಲ್ಲ.

ಈ ಸಂಜೆ Mon, 28 December 2020
https://epaper.eesanje.com/c/57343903

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

### ಬಿಬಿಎಂಪಿ ಚುನಾವಣೆಯಲ್ಲಿ ಸ್ಪರ್ಧಿಸುವ ಓವೈಸಿ ಪಕ್ಷದ ಅಭ್ಯರ್ಥಿಗಳಿಗಾಗಿ

# ನಡೆದಿದೆ ಶೋಧ



ಬೆಂಗಳೂರು, ಡಿ.28- ಬಿಬಿಎಂಪಿ ಚುನಾವಣೆಗೆ ಇನ್ನು ಮುಹೂರ್ತ ನಿಗದಿಯಾಗದಿದ್ದರೂ ಅಸಾದುದ್ದಿನ್ ಓವೈಸಿ ನೇತೃತ್ವದ ಎಐಎಂಐಎಂ ಪಕ್ಷ ಈಗಾಗಲೇ ಪಕ್ಷದ ಅಭ್ಯರ್ಥಿಗಳ ಹುಡುಕಾಟ ಆರಂಭಿಸಿದೆ.

ಗ್ರೇಟರ್ ಹೈದ್ರಾಬಾದ್ ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಅದ್ಭುತ ಸಾಧನೆ ಮಾಡಿ ಬೀಗುತ್ತಿರುವ ಓವೈಸಿ ತನ್ನ ಮುಂದಿನ ಗುರಿಯನ್ನು ಕರ್ನಾಟಕದ ಮೇಲೆ ಇಟ್ಟಿದ್ದಾರೆ.

ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಸ್ಪರ್ಧಿಸಲು ತೀರ್ಮಾನಿಸಿರುವ ಓವೈಸಿ ಇದರ ಜತೆಗೆ ಬಿಬಿಎಂಪಿ ಚುನಾವಣೆಯಲ್ಲಿ ಸ್ಪರ್ಧಿಸಲು ಸಕಲ ಸಿದ್ದತೆ ಮಾಡಿಕೊಂಡಿದ್ದಾರೆ.

ಬಿಬಿಎಂಪಿ ಚುನಾವಣೆ ವಿಚಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರೂ ಭವಿಷ್ಯದಲ್ಲಿ ನಡೆಯಲಿರುವ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಸಮರ್ಥ ಅಭ್ಯರ್ಥಿಗಳಿಗಾಗಿ ಓವೈಸಿ ಹುಡುಕಾಟ ಆರಂಭಿಸಿದ್ದಾರೆ.

ಈಗಾಗಲೇ ಮುಸ್ಲಿಂ ಸಮುದಾಯದ ಕೆಲ ಬಿಬಿಎಂಪಿ ಮಾಜಿ ಸದಸ್ಯರನ್ನು ಸಂಪರ್ಕಿಸಿರುವ ಓವೈಸಿ ಮುಂದಿನ ಚುನಾವಣೆಯಲ್ಲಿ ತಮ್ಮ ಪಕ್ಷದಿಂದಲೇ ಸ್ಪರ್ಧಿಸುವಂತೆ ಮನವೊಲಿಸುತ್ತಿದ್ದಾರೆ ಎಂದು ತಿಳಿದುಬಂದಿದೆ.

198 ಇಲ್ಲವೇ 243 ವಾರ್ಡ್‍ಗಳಿಗೆ ಚುನಾವಣೆ ನಡೆದರೂ ಎಲ್ಲ ಕ್ಷೇತ್ರದಲ್ಲಿ ಸ್ಪರ್ಧಿಸದೆ ಕೇವಲ ತಮ್ಮ ಪಕ್ಷದ ಅಭ್ಯರ್ಥಿಗಳಿಗೆ ಸೂಕ್ತವಾದ ವಾರ್ಡ್‍ಗಳಲ್ಲಿ ಸ್ಪರ್ಧಿಸಲು ಅವಕಾಶ ನೀಡಿ ಬೆಂಗಳೂರಿನಲ್ಲಿ ನೆಲೆ ಕಂಡು ಕೊಳ್ಳುವುದು ಓವೈಸಿ ಪ್ಲಾನ್ ಆಗಿದೆ.

ಇದರ ಜತೆಗೆ ಮುಸ್ಲೀಂ ಮತದಾರರು ಹೆಚ್ಚಿರುವ ಪ್ರದೇಶಗಳಲ್ಲಿರುವ ಪ್ರಬಲ ನಾಯಕರೊಂದಿಗೆ ಸಂಪರ್ಕ ಬೆಳೆಸಿಕೊಂಡಿದ್ದು ಅವರ ಮೂಲಕ ಪಕ್ಷದ ಬಲವರ್ಧನೆಗೆ ಸಕಲ ಸಿದ್ದತೆಗಳನ್ನು ಮಾಡಿ ಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಓವೈಸಿ ನೇತೃತ್ವದ ಎಐಎಂಐಎಂ ಪಕ್ಷದ ಅಭ್ಯರ್ಥಿಗಳು ದೇಶದ ಪ್ರಮುಖ ನಗರಗಳಲ್ಲಿ ನಡೆದ ಚುನಾವಣೆಯಲ್ಲಿ ಗಣನೀಯ ಸಾಧನೆ ತೋರುತ್ತಿರುವುದರಿಂದ ಬೆಂಗಳೂರಿನ ಕೆಲ ಮಾಜಿ ಶಾಸಕರು ಆ ಪಕ್ಷ ಸೇರಲು ತುದಿಗಾಲಲ್ಲಿ ನಿಂತಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿವೆ.

ತಮ್ಮ ಸಂಪರ್ಕದಲ್ಲಿರುವ ಸ್ಥಳೀಯ ನಾಯಕರೊಂದಿಗೆ ಹಲವಾರು ಸುತ್ತಿನ ಮಾತುಕತೆ ನಡೆಸಿರುವ ಓವೈಸಿ ಮುಂಬರುವ ಬಿಬಿಎಂಪಿ ಚುನಾವಣೆಯಲ್ಲಿ ಸ್ಪರ್ಧಿಸಲು ಸೂಕ್ತ ವಾರ್ಡ್‍ಗಳ ಹುಡುಕಾಟ ನಡೆಸುವುದರ ಜತೆಗೆ ಸಮರ್ಥ ಅಭ್ಯರ್ಥಿಗಳ ಶೋಧಕ್ಕೂ ಸೂಚನೆ ನೀಡಿದ್ದಾರೆ ಎನ್ನಲಾಗಿದೆ.

ಅಂಶಗಳು ಕಂಡು ಬಂದಿವೆ.

# ಹೊಸ ವರ್ಷಾಚರಣೆಗೆ ನಿರ್ಬಂಧ

**ಬೆಂಗಳೂರು, ಡಿ.28** – ನಗರ ಸೇರಿದಂತೆ ಹೊರ ವಲಯದಲ್ಲಿರುವ ರೆಸಾರ್ಟ್‌ಗಳಲ್ಲಿ ಹೊಸ ವರ್ಷಾಚರಣೆಗೆ ನಿರ್ಬಂಧ ಹಾಕಲು ತೀರ್ಮಾನಿಸಲಾಗಿದೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸಾರ್ವಜನಿಕವಾಗಿ ಹೊಸ ವರ್ಷಾಚರಣೆಯನ್ನು ಈ ಬಾರಿ ಕೋವಿಡ್ ಕಾರಣದಿಂದ ಆಚರಿಸುವಂತಿಲ್ಲ. ಅವರವರ ಮನೆಗಳಲ್ಲಿ ಆಚರಿಸುವುದಕ್ಕೆ ಸರ್ಕಾರದ ನಿರ್ಬಂಧವಿಲ್ಲ. ಇಂದು ಸಂಜೆ ಹೊಸ ಮಾರ್ಗಸೂಚಿ ಬಿಡುಗಡೆಯಾಗಲಿದೆ ಎಂದು ತಿಳಿಸಿದರು.

ಈ ಬಾರಿ ರಾಜ್ಯದಲ್ಲಿ ಕೋವಿಡ್-19 ಹಾಗೂ ಬ್ರಿಟನ್‌ನಲ್ಲಿ ರೂಪಾಂತರಗೊಂಡ ಹೊಸ ಸೋಂಕು ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಸರ್ಕಾರ ಕೆಲವು ಬಿಗಿಯಾದ ಕ್ರಮಗಳನ್ನು ತೆಗೆದುಕೊಳ್ಳಲಿದೆ. ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಮನವಿ ಮಾಡಿದರು.

ಕಳೆದ 17ರಂದು ಗೃಹ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಸಭೆ ನಡೆಸಿ ಹೊಸ ವರ್ಷಾಚರಣೆಗೆ ನಿರ್ಬಂಧ ಹಾಕಲು ಕೆಲವು ಮಾರ್ಗಸೂಚಿಗಳನ್ನು ಸಿದ್ಧಪಡಿಸಲಾಗಿತ್ತು.

## ಬಿಬಿಎಂಪಿ

773 ಜನರ ಫಲಿತಾಂಶ ಬಂದಿದ್ದು, 349 ಜನರ ವರದಿ ಬರಬೇಕಾಗಿದೆ. 15 ಜನ ಸೋಂಕಿತರು ಎಂಬುದು ಪತ್ತೆಯಾಗಿದೆ.

ಆದರೆ ಬ್ರಿಟನ್‌ನಿಂದ ಹಿಂದಿರುಗಿದ 204 ಮಂದಿಯ ಮೊಬೈಲ್ ನಾಟ್‌ರೀಚಬಲ್ ಆಗಿದ್ದು, ಅವರನ್ನು ಪತ್ತೆಹಚ್ಚಲು ಬಿಬಿಎಂಪಿ ಪೊಲೀಸರ ಮೊರೆಹೋಗಿದೆ. 204 ಜನರ ಹೆಸರು, ಮೊಬೈಲ್ ಸಂಖ್ಯೆಯನ್ನು ರವಾನೆ ಮಾಡಿ ಸಿಡಿಆರ್ ಲೊಕೇಶನ್ ಟ್ರೇಸ್ ಮಾಡಿ ಪತ್ತೆಹಚ್ಚುವಂತೆ ಮನವಿ ಮಾಡಿದೆ.

ಬ್ರಿಟನ್‌ನಲ್ಲಿ ರೂಪಾಂತರಗೊಂಡ ಕೊರೊನಾ ವೈರಸ್ ವ್ಯಾಪಕವಾಗಿ ಹಬ್ಬಿದೆ. ಅಲ್ಲಿಂದ ಹಿಂದಿರುಗಿರುವವರಿಂದ ರಾಜ್ಯಕ್ಕೆ ಕಂಟಕವಾಗುವ ಸಾಧ್ಯತೆಯಿದೆ. ಹಾಗಾಗಿ ಅಲ್ಲಿಂದ ಬಂದವರನ್ನೆಲ್ಲ ಪರೀಕ್ಷೆಗೊಳಪಡಿಸಿ ಕ್ವಾರಂಟೇನ್ ಮಾಡಲಾಗುತ್ತಿದೆ. ಆದರೆ 204 ಮಂದಿಯನ್ನು ಪತ್ತೆಹಚ್ಚಿ ಅವರನ್ನೂ ಪರೀಕ್ಷೆಗೊಳಪಡಿಸುವುದು ಈಗ ಸವಾಲಾಗಿದೆ.

ಸದ್ಯ ಅಲ್ಲಿಂದ ಹಿಂದಿರುಗಿರುವವರಲ್ಲಿ 15 ಮಂದಿಗೆ ಸೋಂಕಿರುವುದು ದೃಢಪಟ್ಟಿದೆ. ಆದರೆ ಅದು ರೂಪಾಂತರ ಕೊರೊನವೇ ಎಂಬುದು ಇನ್ನೂ ದೃಢಪಟ್ಟಿಲ್ಲ.

ಬೊಮ್ಮನಹಳ್ಳಿ ವಲಯದಲ್ಲಿ 4, ದಾಸರಹಳ್ಳಿ 1, ಪೂರ್ವ ವಲಯ 1, ಮಹದೇವಪುರ 5, ದಕ್ಷಿಣ ವಲಯ 1, ಪಶ್ಚಿಮ ವಲಯದಲ್ಲಿ ಒಬ್ಬರಿಗೆ ಕೊರೊನಾ ಇರುವುದು ಪತ್ತೆಯಾಗಿದೆ.

ಈ 15 ಜನರ ಗಂಟಲು ದ್ರವವನ್ನು ಸಂಗ್ರಹಿಸಿ ಜೆನಿಟಿಕ್ ಲ್ಯಾಬ್‌ಗೆ ರವಾನೆ ಮಾಡಲಾಗಿದೆ.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

# ಆಸ್ತಿ ತೆರಿಗೆ ಹೆಚ್ಚಳ?

**ಬೆಂಗಳೂರು, ಡಿ.28 -** ಕೊರೊನಾ ಆರ್ಥಿಕ ಸಂಕಷ್ಟದ ನಡುವೆಯೇ ಆಸ್ತಿ ತೆರಿಗೆ ಹೆಚ್ಚಳಕ್ಕೆ ರಾಜ್ಯ ಸರ್ಕಾರ ಮುಂದಾಗಿರುವ ಮಾಹಿತಿ ಇದೆ.

ನಗರಸಭೆ, ಪುರಸಭೆ, ಮಹಾನಗರ ಪಾಲಿಕೆಗಳು ಸೇರಿದಂತೆ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆ ಹೆಚ್ಚಳಕ್ಕೆ ಚಿಂತನೆ ನಡೆದಿದ್ದು, ಶೇ.15ರಷ್ಟಿರುವ ತೆರಿಗೆಯನ್ನು 30ಕ್ಕೆ ಹೆಚ್ಚಿಸುವ ಪ್ರಸ್ತಾವನೆ ಇದೆ.

ಒಂದು ವೇಳೆ ಸರ್ಕಾರ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆಯನ್ನು ಪರಿಷ್ಕರಣೆ ಮಾಡಿದರೆ ನಗರ ಸ್ಥಳೀಯ ಸಂಸ್ಥೆಗಳ ಜನರ ಮೇಲೆ ಆರ್ಥಿಕ ಹೊರೆಯಾಗುವ ಸಾಧ್ಯತೆ ಇದೆ. ಈವರೆಗೂ ಶೇ.15ರಷ್ಟು ಇರುವ ಆಸ್ತಿ ತೆರಿಗೆಯನ್ನು ಶೇ.30ಕ್ಕೆ ಹೆಚ್ಚಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ.

ಕಳೆದ ವರ್ಷ ಜನವರಿ ವೇಳೆಗೆ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆ ಹೆಚ್ಚಳಕ್ಕೆ ನಿರ್ಧರಿಸಲಾಗಿತ್ತು. ಬಹಳಷ್ಟು ಕಡೆ ವಿರೋಧ ವ್ಯಕ್ತವಾಗಿದ್ದರಿಂದ ಹಂತ ಹಂತವಾಗಿ ಜಾರಿಗೆ ತರುವ ಪ್ರಯತ್ನ ನಡೆದಿತ್ತು. ಅಷ್ಟರಲ್ಲಿ ಕೊರೊನಾ ಸೋಂಕು ಕಾಣಿಸಿಕೊಂಡಿದ್ದರಿಂದ ಆಸ್ತಿ ತೆರಿಗೆ ಹೆಚ್ಚಳವನ್ನು ಕೈ ಬಿಡಲಾಗಿತ್ತು. ಈಗ ಮತ್ತೆ ತೆರಿಗೆ ಹೆಚ್ಚಿಸಲು ತಯಾರಿ ನಡೆದಿದೆ.